ಸಂಪುಟ: ೦೭/ ಸಂಚಿಕೆ: ೨೧೦/ ಶನಿವಾರ ದಿನಾಂಕ : ೧೧-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ▪ ಧಾರವಾಡ ▪ ಬಾಗಲಕೋಟ ▪ ವಿಜಯಪುರ ▪ ಗದಗ ▪ ಕೊಪ್ಪಳ ▪ ಹಾವೇರಿ ▪ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 210/SATURDAY Date : 11-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ೩೦ಕ್ಕೂ ಹೆಚ್ಚು ಜನರಿಗೆ ಬೀದಿನಾಯಿ ಕಡಿತ

**ತೆಂಕಶಿ (ತಮಿಳುನಾಡು):** ಕಡಯನಲ್ಲೂರಿನಲ್ಲಿ ಕಳೆದ 3 ದಿನಗಳಲ್ಲಿ 30ಕ್ಕೂ ಹೆಚ್ಚು ಜನರಿಗೆ ಬೀದಿ ನಾಯಿಗಳು ಕಚ್ಚಿರುವ ಘಟನೆ ವರದಿಯಾಗಿದ್ದು, ಇದು ಇಲ್ಲಿನ ಜನರಲ್ಲಿ ಭೀತಿಯನ್ನುಂಟು ಮಾಡಿದೆ.

ತೆಂಕಶಿ ಜಿಲ್ಲೆಯ ಕಡಯನಲ್ಲೂರ್ ನಗರ ಪ್ರದೇಶದಲ್ಲಿ ಕಳೆದ ಕೆಲವು ದಿನಗಳಿಂದ ಬೀದಿನಾಯಿಗಳ ಸಂಖ್ಯೆ ಹೆಚ್ಚಳದ ಕುರಿತು ದೂರುಗಳು ಕೇಳಿ ಬಂದಿವೆ. ಕೇವಲ ರಾತ್ರಿ ಮಾತ್ರವಲ್ಲದೇ, ಬೆಳಗಿನ ಹೊತ್ತಿನಲ್ಲೂ ದೊಡ್ಡ ಪ್ರಮಾಣದಲ್ಲಿ ಹಲವು ಪ್ರದೇಶದಲ್ಲಿ ಈ ಬೀದಿನಾಯಿಗಳು ಗುಂಪು ಇದ್ದು, ಇವು ಶಾಲೆಗೆ ಹೋಗುವ ಮಕ್ಕಳು ಮತ್ತು ಬೀದಿಯಲ್ಲಿ ಓಡಾಡುವ ಜನರ ಮೇಲೆ ದಾಳಿ ಮಾಡುತ್ತಿರುವ ಘಟನೆಗಳು ನಿರಂತರವಾಗಿ ದಾಖಲಾಗುತ್ತಿವೆ ಎಂದು ಅಲ್ಲಿನ ನಾಗರಿಕರು ದೂರಿದ್ದಾರೆ.

ಇನ್ನು ಕಳೆದ ಮೂರು ದಿನದಲ್ಲೇ 30 ಜನರ ಮೇಲೆ ಈ ನಾಯಿ ದಾಳಿ ಮಾಡಿರುವ ಆಘಾತಕಾರಿ ಘಟನೆ ನಡೆದಿದ್ದು, ನಾಯಿಗಳ ದಾಳಿಗೆ ಮಕ್ಕಳು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಬಲಿಯಾಗಿದ್ದಾರೆ. ಇದರಲ್ಲಿ ಅಕ್ಟೋಬರ್ 10ರಂದು ಒಂದೇ ದಿನ 11 ಜನರು ಬೀದಿ ನಾಯಿ ಕಡಿತಕ್ಕೆ ಒಳಗಾಗಿದ್ದಾರೆ. ಎಲ್ಲಾ ಸಂತ್ರಸ್ತರನ್ನು ಚಿಕಿತ್ಸೆಗೆ ಕಡಯನಲ್ಲೂರಿನ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಅದರಲ್ಲಿ ಕೆಲವರಿಗೆ ತೀವ್ರತರದ ಚಿಕಿತ್ಸೆ ಅಗತ್ಯವಿದೆ. ಸಣ್ಣಪುಟ್ಟ ಗಾಯಕ್ಕೆ ಒಳಗಾದವರನ್ನು ಚಿಕಿತ್ಸೆ ಬಳಿಕ ಮನೆಗೆ ಕಳುಹಿಸಲಾಗಿದೆ ಎಂದು ಆಸ್ಪತ್ರೆ ಆಡಳಿತ ತಿಳಿಸಿದೆ.ಈ ನಾಳಿಗಳ ಪರಿಣಾಮವಾಗಿ ಜನರು ಬೆಳಗಿನ ಹೊತ್ತು ಓಡಾಡುವುದು ಅಸಾಧ್ಯವಾಗಿದೆ. ಈ ನಾಯಿ ಹವಾಳಿ ತಪ್ಪಿಸಲು ಸೂಕ್ತ ಕ್ರಮ ನಡೆಸುವಂತೆ ಮುನ್ಸಿಪಲ್ ಆಡಳಿತಕ್ಕೆ ಜನರು ಮನವಿ ಮಾಡಿದ್ದಾರೆ.

## ನವೆಂಬರ್ ಅಂತ್ಯಕ್ಕೆ ಸಂಪುಟ ಪುನರ್ ರಚನೆ

**ಬೆಂಗಳೂರು:** ನಿಗಮ–ಮಂಡಳಿಗಳ ಅಧ್ಯಕ್ಷರ ನೇಮಕದ ಬೆನ್ನಿಗೇ ಸಚಿವ ಸಂಪುಟ ಪುನರ್ ರಚನೆಯ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಮಹತ್ವದ ಸುಳಿವು ನೀಡಿದ್ದಾರೆ. ಸಚಿವ ಸ್ಥಾನದ ಆಕಾಂಕ್ಷಿಗಳು ತೀವ್ರ ಲಾಬಿ ಆರಂಭಿಸಿದ್ದು, ಆಡಳಿತಾರೂಢ ಕಾಂಗ್ರೆಸ್ ಪಕ್ಷದಲ್ಲಿ ರಾಜಕೀಯ ಚಟುವಟಿಕೆಗಳು ಬಿರುಸುಗೊಂಡಿವೆ.

ಎಲ್ಲವೂ ನಿರೀಕ್ಷೆಯಂತೆ ನಡೆದರೆ ನವೆಂಬರ್ ಅಂತ್ಯ ಅಥವಾ ಡಿಸೆಂಬರ್ ಮೊದಲ ವಾರದಲ್ಲಿ ಸಂಪುಟ ಪುನರ್ ರಚನೆಯಾಗುವುದು ಬಹುತೇಕ ಖಚಿತ ಎಂದು ಕಾಂಗ್ರೆಸ್ ವಲಯದ ಅಭಿಪ್ರಾಯ. ಈ ಮಧ್ಯೆ 'ಅಕ್ಟೋಬರ್ ಕ್ರಾಂತಿ, ಮುಖ್ಯಮಂತ್ರಿ ಬದಲಾವಣೆ' ಚರ್ಚೆಗಳಿಗೆ ಇತಿಶ್ರೀ ಹಾಡುವ ರೀತಿಯಲ್ಲಿ ಐದು ವರ್ಷಗಳ ಅವಧಿಗೆ ತಾನೇ ಮುಖ್ಯಮಂತ್ರಿ ಎಂದು ಸಿದ್ದರಾಮಯ್ಯ ಮತ್ತೊಮ್ಮೆ ಸ್ಪಷ್ಟಪಡಿಸಿದ್ದಾರೆ. ಹೈಕಮಾಂಡ್ ನಿಂದಲೂ ಸಿಎಂ ಬದಲಾವಣೆಯಂತಹ ಯಾವುದೇ ಸಾಧ್ಯತೆ ಇಲ್ಲ ಎಂದು ಹೇಳಲಾಗಿದೆ. ಅದನ್ನು ಅನುಸರಿಸಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರೂ ಸಿಎಂ ಬದಲಾವಣೆ ಕುರಿತು ಮಾತಾಡಬಾರದು ಎಂದು ಶಾಸಕರಿಗೆ ಸೂಚನೆ ನೀಡಿದ್ದಾರೆ. ಈ ನಡುವೆಯೇ ಸಂಪುಟ ಪುನರ್ ರಚನೆಯ ಗುಟ್ಟನ್ನು ಸಿದ್ದರಾಮಯ್ಯ ಬಹಿರಂಗಪಡಿಸಿದ್ದಾರೆ. ನಿನ್ನೆ ವಿಧಾನಸೌಧದಲ್ಲಿ ನಡೆದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಸಂಪುಟ ಪುನರ್ ರಚನೆಯ ಸುಳಿವನ್ನು ನೀಡಿ, ಇದರಿಂದ ಆಕಾಂಕ್ಷಿ ಶಾಸಕರುಗಳಲ್ಲಿ ನಿರೀಕ್ಷೆ ಗರಿಗೆದರಿವೆ.

**ಚಿಗುರಿದ ಕನಸು:** ಒಟ್ಟು ಸಂಪುಟದ 33 ಮಂದಿ ಸಚಿವರ ಪೈಕಿ ಕನಿಷ್ಠ ಹತ್ತರಿಂದ ಹದಿನೈದು ಮಂದಿಯನ್ನು ಸಚಿವ ಸಂಪಟದಿಂದ ಕೈಬಿಟ್ಟು, ಹೊಸಬರಿಗೆ ಅವಕಾಶ ನೀಡುವ ಮೂಲಕ ಆಡಳಿತ ಯಂತ್ರಕ್ಕೆ ಮತ್ತಷ್ಟು ಚುರುಕು ನೀಡುವ ಇರಾದೆ ಸಿದ್ದರಾಮಯ್ಯನವರದ್ದು. ಎರಡು, ಮೂರು, ನಾಲ್ಕು ಖಾತೆಗಳಿರುವ ಸಚಿವರುಗಳಿಂದ ಹೆಚ್ಚುವರಿ ಖಾತೆಗಳನ್ನು ಹಿಂಪಡೆದು ಹೊಸ ಸಚಿವರಿಗೆ ಹಂಚುವ ಸಾಧ್ಯತೆಯೂ ಇದೆ. ಗ್ಯಾರಂಟಿಗಳ ಸಮರ್ಪಕ ಜಾರಿ ಮಾತ್ರವಲ್ಲದೆ ಆಡಳಿತಕ್ಕೆ ಚುರುಕು ಮುಟ್ಟಿಸುವ ಹಾಗೂ ಅಭಿವೃದ್ಧಿ ಮೂಲಕ ಸರಕಾರಕ್ಕೆ ಒಳ್ಳೆಯ ಹೆಸರು ತರುವ ಸಮರ್ಥರಿಗೆ ಸಚಿವ ಸ್ಥಾನ ನೀಡಬೇಕು ಎಂಬ ಇರಾದೆ ಸಿಎಂ ಸಿದ್ದರಾಮಯ್ಯ ಅವರಿಗಿದೆ. ಆ ಹಿನ್ನೆಲೆಯಲ್ಲಿ ಸಂಪುಟ ಪುನರ್ ರಚನೆ ವೇಳೆ ತಮಗೆ ನಿಶ್ಚಿತವಾಗಿಯೂ ಅವಕಾಶ ಸಿಕ್ಕೇ ಸಿಗುತ್ತದೆ ಎಂಬ ವಿಶ್ವಾಸದಲ್ಲಿ ಹಲವು ಹಿರಿಯ ಆಕಾಂಕ್ಷಿ ಶಾಸಕರುಗಳಿದ್ದಾರೆ.

**ಖರ್ಗೆ ಭೇಟಿ:** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಿವಾಸಕ್ಕೂ ಸಚಿವ ಸ್ಥಾನದ ಆಕಾಂಕ್ಷಿಗಳು ದೌಡಾಯಿಸುತ್ತಿದ್ದು, ಖರ್ಗೆ ಅವರ ಆರೋಗ್ಯ ವಿಚಾರಿಸುವ ನೆಪದಲ್ಲಿ ಆಕಾಂಕ್ಷಿಗಳು ಭೇಟಿ ನೀಡುತ್ತಿದ್ದಾರೆ. ಅಲ್ಲದೆ, ಮಂತ್ರಿಗಿರಿಯನ್ನು ಉಳಿಸಿಕೊಳ್ಳಲು ಕೆಲವು ಸಚಿವರು ಕೊನೆಯ ಕ್ಷಣದಲ್ಲಿ ಕಸರತ್ತು ನಡೆಸಿದ್ದಾರೆ. ಪಕ್ಷದ ವರಿಷ್ಠರು ಸಂಪುಟ ಪುನರ್ ರಚನೆಗೆ ಯಾವ ಮಾನದಂಡ ಅನುಸರಿಸಲಿದ್ದಾರೆಂಬ ಕುತೂಹಲ ಸೃಷ್ಟಿಸಿದೆ.

**ಆಕಾಂಕ್ಷಿಗಳ ಸರದಿ:** ಆಕಾಂಕ್ಷಿಗಳ ಪೈಕಿ ಕೆಲವರು ತಮ್ಮ ಮನದ ಇಂಗಿತವನ್ನು ಬಹಿರಂಗವಾಗಿ ಹೊರಹಾಕಿದ್ದಾರೆ. ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ಕ್ಷೇತ್ರದ ಹಿರಿಯ ಶಾಸಕ ರಘುಮೂರ್ತಿ, ವಿಧಾನ ಪರಿಷತ್ ಆಡಳಿತ ಪಕ್ಷದ ಮುಖ್ಯ ಸಚೇತಕ ಸಲೀಂ ಅಹ್ಮದ್, ಮಂಡ್ಯ ಜಿಲ್ಲೆ ಮಳವಳ್ಳಿ ಕ್ಷೇತ್ರದ ಶಾಸಕ ಪಿ.ಎಂ.ನರೇಂದ್ರಸ್ವಾಮಿ ಸೇರಿದಂತೆ ಹಲವು ಶಾಸಕರು 'ನಾನೂ ಸಚಿವ ಸ್ಥಾನದ ಆಕಾಂಕ್ಷಿ, ಸಂಪುಟ ಪುನರ್ ರಚನೆ ವೇಳೆ ನನ್ನನ್ನು ಪರಿಗಣಿಸುವ ವಿಶ್ವಾಸವಿದೆ' ಎಂಬ ಭರವಸೆ ವ್ಯಕ್ತಪಡಿಸಿದ್ದಾರೆ. ಆದರೆ, ಕಾಂಗ್ರೆಸ್ ಹೈಕಮಾಂಡ್ ಯಾವ ತೀರ್ಮಾನ ಮಾಡಲಿದೆ ಎಂಬುದು ಕುತೂಹಲಕ್ಕೆ ಕಾರಣವಾಗಿದೆ. ರಾಜ್ಯದ ಒಟ್ಟು 33 ಮಂದಿ ಸಚಿವ ಸ್ಥಾನಗಳ ಪೈಕಿ ಬಿ.ನಾಗೇಂದ್ರ ಮತ್ತು ಕೆ.ಎನ್.ರಾಜಣ್ಣ ಅವರ ರಾಜೀನಾಮೆ ಹಿನ್ನೆಲೆಯಲ್ಲಿ 31 ಮಂದಿ ಮಂತ್ರಿಗಳಿದ್ದಾರೆ. ಆಪೈಕಿ 10ರಿಂದ 15 ಮಂದಿ ಸಚಿವರಿಗೆ ಸ್ಥಾನ ಕೈತಪ್ಪುವ ಸಾಧ್ಯತೆಗಳಿವೆ. ಪ್ರಸ್ತುತ ಸಚಿವರಾಗಿರುವ ರಹೀಂ ಖಾನ್, ಮಂಕಾಳ ವೈದ್ಯ, ಮಧು ಬಂಗಾರಪ್ಪ, ಡಿ.ಸುಧಾಕರ್, ಎನ್.ಎಸ್. ಭೋಸರಾಜು, ಶರಣಬಸಪ್ಪ ದರ್ಶನಾಪುರ ಸೇರಿದಂತೆ ಇನ್ನಿತರರನ್ನು ಕೈಬಿಡುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ.



### ಸಂಪುಟ ಪುನರ್ ರಚನೆ ಸಿಎಂಗೆ ಬಿಟ್ಟ ವಿಚಾರ

**ಬೆಂಗಳೂರು:** ಸಚಿವ ಸಂಪುಟದಲ್ಲಿ ಬದಲಾವಣೆ ವಿಚಾರವಾಗಿ ನನಗೆ ಯಾವುದೇ ರೀತಿಯ ಮಾಹಿತಿ ಇಲ್ಲ. ಇದು ಪಕ್ಷ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಬಿಟ್ಟ ವಿಚಾರ. ಅವರು ಈ ಬಗ್ಗೆ ತೀರ್ಮಾನ ಮಾಡುತ್ತಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಗುರುವಾರ ಸದಾಶಿವನಗರದ ಬಳಿಕ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, ಸಂಪುಟ ಪುನರ್ ರಚನೆ ವಿಚಾರದಲ್ಲಿ ನಾನು ಮಾತನಾಡುವುದಿಲ್ಲ. ಈ ವಿಚಾರವಾಗಿ ಅನಗತ್ಯ ಚರ್ಚೆ ಮಾಡಿ ಗೊಂದಲ ಸೃಷ್ಟಿಸಬೇಡಿ ಎಂದು ಮನವಿ ಮಾಡಿದರು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಚಿವರಿಗೆ ಔತಣಕೂಟ ಏರ್ಪಡಿಸುವುದರಲ್ಲಿ ತಪ್ಪೇನಿದೆ ಎಲ್ಲರೂ ಒಟ್ಟಿಗೆ ಸೇರಿ ಊಟ ಮಾಡಿದರೆ ಸಾಕಷ್ಟು ವಿಚಾರಗಳ ಬಗ್ಗೆ ಚರ್ಚೆ ಮಾಡುವುದು ಸಹಜ ಎಂದು ತಿಳಿಸಿದರು.

**ಕೆಮ್ಮಿನ ಸಿರಪ್ ಸೇವಿಸಿ ಮಕ್ಕಳು ಮೃತಪಟ್ಟ ಪ್ರಕರಣ**

## ಸಿಬಿಐ ತನಿಖೆ ಕೋರಿ ಸಲ್ಲಿಸಿದ ಪಿಐಎಲ್ ಸುಪ್ರೀಂನಿಂದ ವಜಾ



**ಹೊಸದಿಲ್ಲಿ:** ಮಧ್ಯಪ್ರದೇಶ ಹಾಗೂ ರಾಜಸ್ಥಾನದಲ್ಲಿ ವಿಷಕಾರಿ ಕೆಮ್ಮಿನ ಸಿರಪ್ ಸೇವಿಸಿ ಮಕ್ಕಳು ಮೃತಪಟ್ಟಿದ್ದಾರೆ ಎಂಬ ಆರೋಪದ ಕುರಿತು ಸಿಬಿಐ ತನಿಖೆ ಹಾಗೂ ವ್ಯವಸ್ಥಿತ ಸುಧಾರಣೆ ಕೋರಿ ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿ (ಪಿಐಎಲ್) ಯನ್ನು ಸುಪ್ರೀಂ ಕೋರ್ಟ್ ಶುಕ್ರವಾರ ವಜಾಗೊಳಿಸಿತು. ನ್ಯಾಯವಾದಿ ವಿಶಾಲ್ ತಿವಾರಿ ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಗೆ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಆಕ್ಷೇಪ ವ್ಯಕ್ತಪಡಿಸಿದ ಬಳಿಕ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ, ನ್ಯಾಯಮೂರ್ತಿಗಳಾದ ಉಜ್ಜಲ್ ಭುಯಾನ್ ಹಾಗೂ ಕೆ. ವಿನೋದ್ ಚಂದ್ರನ್ ಅವರನ್ನು ಒಳಗೊಂಡ ಪೀಠ ಅರ್ಜಿಯನ್ನು ತಿರಸ್ಕರಿಸಿತು.ದೂರುದಾರರು ಸುದ್ದಿ ಪತ್ರಿಕೆಗಳನ್ನು ಓದುತ್ತಾರೆ ಹಾಗೂ ನ್ಯಾಯಾಲಯಕ್ಕೆ ಧಾವಿಸುತ್ತಾರೆ ಎಂದು ತುಷಾರ್ ಮೆಹ್ತಾ ಹೇಳಿದರು. ಆರಂಭದಲ್ಲಿ ನೋಟಿಸು ಜಾರಿಗೊಳಿಸಬೇಕೆಂದು ಅಭಿಪ್ರಾಯಪಟ್ಟಿದ್ದ ಪೀಠ ಅನಂತರ ಅರ್ಜಿಯನ್ನು ವಜಾಗೊಳಿಸಿತು.

ತಾನು ಈ ಸಂದರ್ಭಯಾವುದೇ ರಾಜ್ಯವನ್ನು ಪ್ರತಿನಿಧಿಸುತ್ತಿಲ್ಲ. ಆದರೆ, ತಮಿಳುನಾಡು ಹಾಗೂ ಮಧ್ಯಪ್ರದೇಶಗಳಂತಹ ರಾಜ್ಯಗಳು ತೆಗೆದುಕೊಂಡ ಕ್ರಮಗಳನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ ಎಂದು ತುಷಾರ್ ಮೆಹ್ತಾ ಹೇಳಿದರು. ಇದಲ್ಲದೆ ರಾಜ್ಯಗಳಲ್ಲಿ ಸೂಕ್ತ ಕಾನೂನು ಜಾರಿ ವ್ಯವಸ್ಥೆಗಳಿವೆ ಎಂದು ಅವರು ತಿಳಿಸಿದರು. ಸರ್ವೋಚ್ಚ ನ್ಯಾಯಾಲಯದಲ್ಲಿ ಇದುವರೆಗೆ ಎಷ್ಟು ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಸಲ್ಲಿಸಿದ್ದೀರಿ ಎಂದು ಪೀಠ ವಿಶಾಲ್ ತೀವಾರಿ ಅವರನ್ನು ಪ್ರಶ್ನಿಸಿತು. ಇಲ್ಲಿವರೆಗೆ 8 ರಿಂದ 10 ಅಂತಹ ಅರ್ಜಿಗಳನ್ನು ಸಲ್ಲಿಸಿದ್ದೇನೆ ಎಂದು ಅವರು ಹೇಳಿದರು. ಅನಂತರ ಪೀಠ ಪ್ರಸಕ್ತ ಅರ್ಜಿಯನ್ನು ವಜಾಗೊಳಿಸಿತು.

## ದೇಶದಲ್ಲಿ ದಲಿತ, ಆದಿವಾಸಿಗಳ ಮೇಲಿನ ಅಪರಾಧ ಹೆಚ್ಚಳ

**ನವದೆಹಲಿ:** ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಗುರುವಾರ ಬಿಜೆಪಿ ಮತ್ತು ಅದರ ಸೈದ್ಧಾಂತಿಕ ಪೋಷಕ ರಾಷ್ಟ್ರೀಯ ಸ್ವಯಂಸೇವಕ ಸಂಘ(ಆರ್‌ಎಸ್‌ಎಸ್)ದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ಅವರು "ಊಳಿಗಮಾನ್ಯ ಮನಸ್ಥಿತಿ"ಯನ್ನು ಬೆಳೆಸುತ್ತಿದ್ದಾರೆ ಮತ್ತು ದೇಶದಲ್ಲಿ ಹೆಚ್ಚುತ್ತಿರುವ ಜಾತಿ ಆಧಾರಿತ ಹಿಂಸಾಚಾರವನ್ನು ನಿರ್ಲಕ್ಷಿಸುತ್ತಿದ್ದಾರೆ ಎಂದು ಆರೋಪಿಸಿದರು.

2013 ರಿಂದ 2023 ರವರೆಗಿನ ಎನ್‌ಸಿಆರ್‌ಬಿ ದತ್ತಾಂಶವನ್ನು ಉಲ್ಲೇಖಿಸಿದ ಖರ್ಗೆ, ದಲಿತರ ಮೇಲಿನ ಅಪರಾಧಗಳು ಶೇ. 46 ರಷ್ಟು ಹೆಚ್ಚಾಗಿದೆ ಮತ್ತು ಆದಿವಾಸಿಗಳ ಮೇಲಿನ ಅಪರಾಧ ಶೇ. 91 ರಷ್ಟು ಹೆಚ್ಚಾಗಿದೆ ಎಂದು ಹೇಳಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಖರ್ಗೆ, ಅಂಚಿನಲ್ಲಿರುವ ಸಮುದಾಯಗಳ ವಿರುದ್ಧ ಹಿಂಸಾತ್ಮಕ ಮತ್ತು ತಾರತಮ್ಯದ ಕ್ರಮಗಳಲ್ಲಿ ವ್ಯಕ್ತವಾಗುವ ಊಳಿಗಮಾನ್ಯ ಮತ್ತು ಜಾತಿವಾದಿ ಮನಸ್ಥಿತಿಯನ್ನು ಬಿಜೆಪಿ ಸಕ್ರಿಯಗೊಳಿಸುತ್ತಿದೆ ಮತ್ತು ಸಮರ್ಥಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಉತ್ತರ ಪ್ರದೇಶದ ರಾಯ್ ಬರೇಲಿ ಜಿಲ್ಲೆಯಲ್ಲಿ ದಲಿತ ವ್ಯಕ್ತಿ ಹರಿಓಂ ವಾಲ್ಮೀಕಿಯ ಹತ್ಯೆ, ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರ ಮೇಲಿನ ಹಲ್ಲೆ ಮತ್ತು ಹರಿಯಾಣದ ದಲಿತ ಐಪಿಎಸ್ ಅಧಿಕಾರಿಯ ಇತ್ತೀಚಿನ ಆತ್ಮಹತ್ಯೆ ಸೇರಿದಂತೆ



ಜಾತಿ ಆಧಾರಿತ ತಾರತಮ್ಯ ಮತ್ತು ಹಿಂಸಾಚಾರದ ಇತ್ತೀಚಿನ ಘಟನೆಗಳನ್ನು ಖರ್ಗೆ ಪಟ್ಟಿ ಮಾಡಿದ್ದಾರೆ.

ಇವು ಪ್ರತ್ಯೇಕ ಘಟನೆಗಳಲ್ಲ" ಎಂದು ಖರ್ಗೆ ಬರೆದಿದ್ದಾರೆ. ಇದು ಆರ್‌ಎಸ್‌ಎಸ್–ಬಿಜೆಪಿಯ ಊಳಿಗಮಾನ್ಯ ಮನಸ್ಥಿತಿಯ ಅಪಾಯಕಾರಿ ಅಭಿವ್ಯಕ್ತಿ ಮತ್ತು ಸಂವಿಧಾನ, ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ತತ್ವಗಳ ಮೇಲಿನ ನೇರ ದಾಳಿ ಎಂದು ಕಿಡಿ ಕಾರಿದ್ದಾರೆ.

ದಲಿತರು, ಆದಿವಾಸಿಗಳು, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು ಮತ್ತು ಇತರ ಅಂಚಿನಲ್ಲಿರುವ ಗುಂಪುಗಳನ್ನು ದಮನಿಸುವ ಗುರಿಯನ್ನು ಆಡಳಿತ ಪಕ್ಷ ಹೊಂದಿದೆ. ಅಂತಹ ರಾಜಕೀಯವು ಭಾರತದ ಪ್ರಜಾಪ್ರಭುತ್ವ ರಚನೆಗೆ ಗಂಭೀರ ಬೆದರಿಕೆ ಎಂದು ಖರ್ಗೆ ಎಚ್ಚರಿಸಿದ್ದಾರೆ. ಭಾರತವು ಸಂವಿಧಾನದಿಂದ ಆಳಲ್ಪಡುತ್ತದೆ, ಯಾವುದೇ ಉಗ್ರಗಾಮಿ ಸಿದ್ಧಾಂತಗಳಿಂದಲ್ಲ ಎಂದು ಖರ್ಗೆ ಹೇಳಿದ್ದಾರೆ.

**ದೀಪಾವಳಿ ಹಬ್ಬಕ್ಕೂ ಮುನ್ನ ಪ್ರಯಾಣಿಕರಿಗೆ ಬಿಗ್ ಶಾಕ್**

## ಅ. 15 ರಿಂದ ಸಾರಿಗೆ ಮುಷ್ಕರ

**ಬೆಂಗಳೂರು:** ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ 4 ನಿಗಮಗಳ ನೌಕರರು ಇದೀಗ ಮತ್ತೆ ಸಾರಿಗೆ ಮುಷ್ಕರಕ್ಕೆ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮುಷ್ಕರಕ್ಕೆ ಮುಂದಾಗಿದ್ದು, ಮೊದಲ ಹಂತದಲ್ಲಿ ಅಕ್ಟೋಬರ್ 15 ರಿಂದ 19 ರ ವರೆಗೆ ಉಪವಾಸ ಸತ್ಯಾಗ್ರಹ ಮಾಡಲು ಚಿಂತನೆ ನಡೆಸಿದ್ದಾರೆ. ಹೀಗಾಗಿ ರಾಜ್ಯದಲ್ಲಿ ಈ ಐದು ದಿನಗಳ ಕಾಲ ಪ್ರಯಾಣಿಕರಿಗೆ ಸರಿಯಾಗಿ ಬಸ್ ಸಿಗುವುದು ಅನುಮಾನವಾಗಿದೆ. ಆಗಸ್ಟ್– 5 ರಂದು ನಾಲ್ಕು ನಿಗಮದ ನೌಕರರು



ಸಾರಿಗೆ ಮುಷ್ಕರಕ್ಕೆ ಮುಂದಾಗಿದ್ದರು. ಆದರೆ ಹೈಕೋರ್ಟ್ ಆದೇಶದ ಹಿನ್ನಲೆ ಮುಷ್ಕರವನ್ನು ವಾಪಸ್ ಪಡೆಯಲಾಗಿತ್ತು. ಆದರೆ ಇಲ್ಲಿಯವರೆಗೆ ರಾಜ್ಯ ಸರ್ಕಾರ ಸಾರಿಗೆ ನೌಕರರ ಬೇಡಿಕೆಗಳನ್ನು ಈಡೇರಿಸಲು ಮುಂದಾಗಿಲ್ಲ ಮತ್ತು ಮಾತುಕತೆಗೆ ಕರೆಯುತ್ತಿಲ್ಲ. ಹೀಗಾಗಿ ಮತ್ತೆ ಮುಷ್ಕರ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. 38 ತಿಂಗಳ ಹಿಂಬಾಕಿ ಬಿಡುಗಡೆ, ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಅ. 15 ರಿಂದ ಐದು ದಿನಗಳ ಕಾಲ ಉಪವಾಸ ಸತ್ಯಾಗ್ರಹಕ್ಕೆ ಕರೆ ನೀಡಿದೆ. ಅ. 15ರಿಂದ 19ರವರೆಗೆ ಬೆಂಗಳೂರು, ಹುಬ್ಬಳ್ಳಿ ಹಾಗೂ ಕಲಬುರಗಿ ನಗರಗಳಲ್ಲಿ ಐದು ದಿನಗಳ ಕಾಲ ನಾಲ್ಕು ಸಾರಿಗೆ ನಿಗಮಗಳ ನೌಕರರು ಉಪವಾಸ ಸತ್ಯಾಗ್ರಹ ಆರಂಭಿಸಲಿದ್ದಾರೆ. ಆ. 5 ರಂದು ಆರಂಭಿಸಿದ್ದ ಅನಿರ್ದಿಷ್ಟಾವಧಿ ಮುಷ್ಕರವನ್ನು ಹೈಕೋರ್ಟ್ ಆದೇಶದ ಮೇರೆಗೆ ತಡೆಹಿಡಿಯಲಾಗಿತ್ತು. ಸರಕಾರ ಬೇಡಿಕೆಗಳ ಕುರಿತು ಮಾತುಕತೆ ಮುಂದುವರಿಸುವುದಾಗಿ ಹೈಕೋರ್ಟ್‌ಗೆ ತಿಳಿಸಿತ್ತು. ಅದರಂತೆ, ಜಂಟಿ ಕ್ರಿಯಾ ಸಮಿತಿಯು ಆಗಸ್ಟ್ 11 ಮತ್ತು ಸೆ. 15ರಂದು ರಾಜ್ಯ ಸರಕಾರಕ್ಕೆ ಪತ್ರ ಬರೆದು ಶೀಘ್ರವೇ ಸಭೆ ಕರೆದು ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿತ್ತು. ಆದರೆ, ಸರಕಾರ ಈವರೆಗೂ ಮಾತುಕತೆ ಆರಂಭಿಸದೆ ಕಾರ್ಮಿಕ ವಿರೋಧಿ ಧೋರಣೆ ತಾಳಿದೆ ಎಂದು ಜಂಟಿ ಕ್ರಿಯಾ ಸಮಿತಿ ಅಧ್ಯಕ್ಷ ಎಚ್.ವಿ. ಅನಂತ ಸುಬ್ಬರಾವ್ ಆರೋಪಿಸಿದ್ದಾರೆ.

**ಸಚಿವ ಶಿವರಾಜ ತಂಗಡಗಿ ಅಧ್ಯಕ್ಷತೆಯಲ್ಲಿ 64 ಜನರ ನೇಮಕ**

## ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರ ಆಯ್ಕೆಗೆ ಸಮಿತಿ ರಚನೆ

**ಬೆಂಗಳೂರು:** ರಾಜ್ಯ ಸರಕಾರವು 2025ನೆ ಸಾಲಿನ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರನ್ನು ಆಯ್ಕೆ ಮಾಡಲು ಸಲಹಾ ಸಮಿತಿಯನ್ನು ರಚನೆ ಮಾಡಿದ್ದು, 64 ಮಂದಿ ಇರುವ ಈ ಸಮಿತಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ್ ಎಸ್. ತಂಗಡಗಿ ಅವರು ಅಧ್ಯಕ್ಷರಾಗಿದ್ದಾರೆ.

ಸಂವಿಧಾನ ತಜ್ಞ ಪ್ರೊ.ರವಿವರ್ಮ ಕುಮಾರ್, ಲೇಖಕ ಬಾಲಸುಬ್ರಮಣ್ಯ ಕಂಜರ್ಪಣೆ, ಸಾಹಿತಿಗಳಾದ ಸಬಿಹಾ ಭೂಮಿಗೌಡ, ಸುಬ್ಬು ಹೊಲೆಯಾರ್, ದು.ಸರಸ್ವತಿ, ಪ್ರೊ.ಜಿ.ಅಬ್ದುಲ್ ಬಶೀರ್, ಚಿತ್ರನಟ ರವಿಚಂದ್ರನ್, ಪರಿಸರ ತಜ್ಞ ಯಲ್ಲಪ್ಪ ರೆಡ್ಡಿ, ಸಮಾಜ ಸೇವಕರಾದ ರವೀಶ್, ಕೆ.ಪಿ.ಸುರೇಶ್ ಸೇರಿದಂತೆ 46 ಮಂದಿ ಸಮಿತಿಯ ಸದಸ್ಯರಾಗಿ ನೇಮಕಗೊಂಡಿದ್ದಾರೆ. ವಿವಿಧ ಅಕಾಡೆಮಿಯ 16 ಮಂದಿ ಸಮಿತಿಯ ಪದನಿಮಿತ್ತ ಸದಸ್ಯರಾಗಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ.

ಸಮಾಜ ಸೇವೆ ಕ್ಷೇತ್ರದಿಂದ ಮಾರುತಿ ಬೌದ್ದೆ, ಕೆ.ಪಿ.ಸುರೇಶ್, ಇ.ಟಿ. ರತ್ನಕರ್ ತಳವಾರ, ರವೀಶ್, ದು. ಸರಸ್ವತಿ, ಫಾದರ್ ಟಿಯೋಲ ಸಮಿತಿಯ ಸದಸ್ಯರಾಗಿದ್ದಾರೆ. ಸಾಹಿತ್ಯ ಕ್ಷೇತ್ರದಿಂದ ಡಾ.ಮಾಲತಿ ಪಟ್ಟಣಶೆಟ್ಟಿ, ಪ್ರೊ.ಜಿ.ಅಬ್ದುಲ್ ಬಶೀರ್, ಚಂದ್ರಶೇಖರ ನಂಗ್ಲಿ, ಡಾ. ಎಂ.ಕೆ. ಮಾಸ್ಕೇರಿ ನಾಯಕ್, ಎಚ್.ಕೆ. ಸುಬ್ಬು ಹೊಲೆಯಾರ್, ಡಿ.ಬಿ. ರಜಿಯಾ, ಸಬಿಹಾ ಭೂಮಿಗೌಡ ಸದಸ್ಯರಾಗಿದ್ದಾರೆ. ಕೃಷಿ ಕ್ಷೇತ್ರದಿಂದ ಸುನಂದ ಜಯರಾಂ, ನಾಗರತ್ನ ಪಾಟೀಲ್, ಎಚ್.ಕೆ.ಶ್ರೀಕಂಠು ಸದಸ್ಯರಾಗಿದ್ದರೆ, ಜಾನಪದ ಕ್ಷೇತ್ರದಿಂದ ಸಿದ್ದಣ್ಣ ಜಕ್ಕಬಾಳ, ಪ್ರೊ.ಶಿವರಾಂಶೆಟ್ಟಿ, ಡಾ.ಅಪ್ಪಗೆರೆ ತಿಮ್ಮರಾಜು ಸದಸ್ಯರಾಗಿದ್ದಾರೆ. ರಂಗಭೂಮಿ ಕ್ಷೇತ್ರದಿಂದ ಶ್ರೀನಿವಾಸ ಜಿ.ಕಪ್ಪಣ್ಣ, ಪ್ರೇಮಾ ಬಾದಾಮಿ ಮತ್ತು ಮಾಧ್ಯಮ ಕ್ಷೇತ್ರದಿಂದ ಅನಿಲ್ ಹೊಸಮನಿ, ಗಿರೀಶ್ ಬಾಬು ಸದಸ್ಯರಾಗಿದ್ದಾರೆ.

ವೈದ್ಯಕೀಯ ಕ್ಷೇತ್ರದಿಂದ ಡಾ. ಸಂಜೀವ್ ಕುಲಕರ್ಣಿ, ಡಾ. ಸಿ.ಆರ್. ಚಂದ್ರಶೇಖರ್, ಡಾ. ಎಸ್. ಪುಷ್ಪರಾಜ್, ಸಂಗೀತ ಕ್ಷೇತ್ರದಿಂದ ಡಾ.ಎಂ.ವೆಂಕಟೇಶ ಕುಮಾರ್, ಅಂಬಯ್ಯ ನುಲಿ ಸದಸ್ಯರಾಗಿದ್ದಾರೆ. ನೃತ್ಯ ಕ್ಷೇತ್ರದಿಂದ ಗೀತಾ ದಾತರ್, ಡಾ. ತುಳಸಿ ರಾಮಚಂದ್ರ ಮತ್ತು ಶಿಕ್ಷಣ ಕ್ಷೇತ್ರದಿಂದ ವೆಂಕಟೇಶ ಮಾಚಕನೂರು, ಎಚ್.ಎಂ. ಭೂತನಾಳ್, ಡಾ. ಡಿ.ಜಿ. ಗವಾನಿ, ಪರಿಸರ ಕ್ಷೇತ್ರದಿಂದ ಅ.ನ.ಯಲ್ಲಪ್ಪರೆಡ್ಡಿ, ಸದಸ್ಯರಾಗಿದ್ದಾರೆ.

ಆಡಳಿತ ಕ್ಷೇತ್ರದಿಂದ ಎನ್.ಆರ್.ವಿಶುಕುಮಾರ್, ಡಾ.ಡೊಮಿನಿಕ್, ಚಿತ್ರಕಲೆ ಕ್ಷೇತ್ರದಿಂದ ಗುಜ್ಜಾರಪ್ಪ, ನ್ಯಾಯಾಂಗ ಕ್ಷೇತ್ರದಿಂದ ಪ್ರೊ.ರವಿವರ್ಮ ಕುಮಾರ್, ಬಾಲಸುಬ್ರಹ್ಮಣ್ಯ ಕಂಜರ್ಪಣೆ ಸದಸ್ಯರಾಗಿದ್ದಾರೆ. ಚಲನಚಿತ್ರ ಕ್ಷೇತ್ರದಿಂದ ಗಿರಿಜಾ ಲೋಕೇಶ್, ವಿ.ರವಿಚಂದ್ರನ್, ಕ್ರೀಡಾಕ್ಷೇತ್ರದಿಂದ ಜೂಡ್ ಫೆಲಿಕ್ಸ್ ಸೆಬಾಸ್ಟಿಯನ್, ಉಮಾದೇವಿ ಆರ್., ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಿಂದ ಡಾ. ಎಸ್.ಎಂ. ಶಿವಪ್ರಸಾದ್, ಪ್ರೊ.ಬಿ.ಕುಮಾರಸ್ವಾಮಿ ಸದಸ್ಯರಾಗಿ ಆಯ್ಕೆಯಾಗಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸರಕಾರದ ಕಾರ್ಯದರ್ಶಿಗಳು ಸಮಿತಿಯ ಸದಸ್ಯರಾಗಿದ್ದಾರೆ. ಕ್ರೀಡಾ ಇಲಾಖೆಯ ಆಯುಕ್ತರು ಹಾಗೂ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಆಯುಕ್ತರು ಸಮಿತಿಯ ಪದನಿಮಿತ್ತ ಸದಸ್ಯರಾಗಿದ್ದಾರೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ ಸೇರಿದಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧೀನದಲ್ಲಿ ಬರುವ ಎಲ್ಲ ಅಕಾಡೆಮಿ ಮತ್ತು ಪ್ರಾಧಿಕಾರಗಳ ಅಧ್ಯಕ್ಷರು, ಚಲನಚಿತ್ರ ಅಕಾಡೆಮಿ ಮತ್ತು ಮಾಧ್ಯಮ ಅಕಾಡೆಮಿಯ ಅಧ್ಯಕ್ಷರು, ರಾಷ್ಟ್ರೀಯ ಸಂತಕವಿ ಕನಕದಾಸ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷರು ಸಮಿತಿಯ ಪದನಿಮಿತ್ತ ಸದಸ್ಯರಾಗಿದ್ದಾರೆ.

## ಯೋಜನೆಗಳ ಅನುಷ್ಠಾನಕ್ಕೆ ನಿರ್ಲಕ್ಷ್ಯ ತೋರಿದರೆ ಕ್ರಮ

**ಬೆಳಗಾವಿ:** ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆಗಳು ಜಿಲ್ಲಾ ಮಟ್ಟದಲ್ಲಿ ಸಮರ್ಪಕವಾಗಿ ಅನುಷ್ಠಾನವಾಗಬೇಕಿದೆ. ಅಧಿಕಾರಿಗಳು ಯೋಜನೆಗಳ ಅನುಷ್ಠಾನಕ್ಕೆ ವಿಶೇಷ ಕಾಳಜಿ ವಹಿಸಬೇಕು. ಒಂದು ವೇಳೆ ನಿರ್ಲಕ್ಷ ತೋರಿಸಿದರೆ ಅಂತಹ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಣ್ಯವಾಗಿ ಕ್ರಮ ಜರುಗಿಸಲಾಗುವುದು ಎಂದು ಬೆಳಗಾವಿ ಲೋಕಸಭಾ ಸಂಸದ ಜಗದೀಶ್ ಶೆಟ್ಟರ್ ಅವರು ಎಚ್ಚರಿಕೆ ನೀಡಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ನಡೆದ 2025–26ನೇ ಸಾಲಿನ ತ್ರೈಮಾಸಿಕ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಮೇಲ್ವಿಚಾರಣಾ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೇಂದ್ರ ಸರ್ಕಾರದ ಜನರ ಕಲ್ಯಾಣಕ್ಕೆ ಬರುವ ಸಾಕಷ್ಟು ಯೋಜನೆಗಳು ಜಿಲ್ಲಾ ಮಟ್ಟದಲ್ಲಿ ಇನ್ನೂ ಪರಿಣಾಮಕಾರಿಯಾಗಿ ಅನುಷ್ಠಾನವಾಗಬೇಕು. ನಗರದಲ್ಲಿ ಕೆರೆ ಮತ್ತು ಉದ್ಯಾನವನಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ ಅನುದಾನ ಕಾಲಕಾಲಕ್ಕೆ ಬಿಡುಗಡೆಯಾದರೂ ಸಹ ಪಾಲಿಕೆಯಿಂದ ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ ಎಂದರು.

ಯೋಜನೆ ಮಂಜೂರು ಮಾಡುವ ಮುಂಚೆ ಕಾಮಗಾರಿಗಳನ್ನು ಪೂರ್ಣಗೊಳಿಸುವ ಕುರಿತು ಕಾಲಮಿತಿ ಉಲ್ಲೇಖ ಮಾಡಲಾಗಿರುತ್ತದೆ ಆದರೆ ಅದೇ ಕಾಲಮಿತಿಯೊಳಗೆ ಕಾಮಗಾರಿಗಳು ಪೂರ್ಣಗೊಳಿಸದೆ ಅಭಿವೃದ್ಧಿ ಕುಂಠಿತವಾಗುತ್ತಿವೆ. ನಗರ ಅಭಿವೃದ್ಧಿಗೆ ಪಾಲಿಕೆ ಮೇಲೆ ಜವಾಬ್ದಾರಿ ಹೆಚ್ಚಿರುವುದರಿಂದ ಪಾಲಿಕೆ ಅಧಿಕಾರಿಗಳು ನಿರಂತರ ಸಕ್ರಿಯವಾಗಿ ಕಾರ್ಯ ನಿರ್ವಹಿಸಬೇಕು.

ಪಾಲಿಕೆ ಅಧಿಕಾರಿಗಳ ಬೇಜವಾಬ್ದಾರಿಯಿಂದ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳು ಹಿಂದೆ ಉಳಿದಿವೆ. ಸಾರ್ವಜನಿಕರಿಗೆ ಅನುಕುವಾಗುವ ಕಾಮಗಾರಿಗಳು ಕಾಲಾವಧಿಯೊಳಗೆ ಪೂರ್ಣಗೊಳಿಸಿದೆ ಅಧಿಕಾರಿಗಳ



ವಿನಾಕಾರಣ ನೆಪವೊಡ್ಡಬಾರದು ಎಂದು ಎಚ್ಚರಿಕೆ ನೀಡಿದರು.

ನಗರದಲ್ಲಿರುವ ಕರೆ ಮತ್ತು ಉದ್ಯಾನವನಗಳನ್ನು ಅಭಿವೃದ್ಧಿ ಪಡಿಸಲು ಕ್ರಿಯಾ ಯೋಜನೆ ರೂಪಿಸಿ ಆದಷ್ಟು ತ್ವರಿತವಾಗಿ ಟೆಂಡರ್ ಕರೆದು ಕೂಡಲೇ ಪ್ರಕ್ರಿಯೆ ಪೂರ್ಣಗೊಳಿಸಬೇಕು. ನಗರದಲ್ಲಿ ಎಷ್ಟೋ ಜನರಿಗೆ ನಿವೇಶನ ಮತ್ತು ಮನೆಗಳಿಲ್ಲ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಸಲ್ಲಿಕೆಯಾದ ಅರ್ಜಿಗಳನ್ನು ಪರಿಶೀಲಿಸಿ ಸಲ್ಲಿಸಬೇಕು. ಸ್ವಚ್ಛ ಭಾರತ ಯೋಜನೆಯಡಿ ನಗರದ ಸ್ವಚ್ಛತೆಗೆ ಆದ್ಯತೆ ಕೊಟ್ಟು ರಸ್ತೆಗಳ ಸ್ವಚ್ಛತೆ ಕೈಗೊಂಡು ಅಗತ್ಯ ಸ್ಥಳಗಳಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಹೇಳಿದರು.

ಜಿಲ್ಲೆಯ ಹಿಂದುಳಿದ ತಾಲೂಕುಗಳಲ್ಲಿ ಬೈಲು ಶೌಚಾಲಯ ಈವರೆಗೂ ಇದೆ. ಅಧಿಕಾರಿಗಳು ಅಂತಹ ಗ್ರಾಮಗಳನ್ನು ಗುರುತಿಸಿ ಜನ ಜಾಗೃತಿ ಮೂಡಿಸಿ, ಶೌಚಾಲಯಗಳ ನಿರ್ಮಾಣಕ್ಕೆ ಮುಂದಾಗಬೇಕು.

ಗ್ರಾಮ ಪಂಚಾಯತಿ ಮಟ್ಟದಲ್ಲಿ ಅಭಿವೃದ್ಧಿ ಕೆಲಸಗಳ ಕುರಿತು ನಿರ್ಲಕ್ಷ್ಯ ತೋರಬಾರದು. ಅಧಿಕಾರಿಗಳು ಸಿದ್ಧಪಡಿಸಿದ ಕ್ರಿಯಾ ಯೋಜನೆಯಂತೆ ಕಾಲಾವಧಿಯೊಳಗೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ ತಿಳಿಸಿದರು.

ಶೌಚಾಲಯಗಳು ನಿರ್ಮಾಣಕ್ಕೆ ಸ್ಥಳ ಇಲ್ಲದ ಮನೆಗಳಿಗೆ ಅನುಕೂಲಕ್ಕಾಗಿ ಸಮುದಾಯ ಶೌಚಾಲಯಗಳನ್ನು ಈಗಾಗಲೇ ನಿರ್ಮಾಣ ಮಾಡಲಾಗಿದೆ. ಸಮುದಾಯ ಶೌಚಾಲಯಗಳ ನಿರ್ವಹಣೆಗೆ ತೊಂದರೆಯಾಗುತ್ತಿರುವ ಕಾರಣ ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸಿ ಕೊಡುವಂತೆ ನಿರ್ದೇಶನವಿದೆ. ಬಹಳಷ್ಟು ಗ್ರಾಮೀಣ ಭಾಗದಲ್ಲಿ ಗ್ರೇ ವಾಟರ್ ಮ್ಯಾನ್ಮೆಂಟ್ ಮೂಲಕ ಹಳ್ಳ, ನದಿಗಳಿಗೆ ಚರಂಡಿ ನೀರು ಬಿಡುವ ವ್ಯವಸ್ಥೆ ಕಲ್ಪಿಸಲಾಗಿದೆ ಆದರೆ ಕೆಲವು ಗ್ರಾಮಗಳಲ್ಲಿ ಚರಂಡಿಗಳ ವ್ಯವಸ್ಥೆ ಇಲ್ಲದ ಕಾರಣ ಅಂತಹ ಗ್ರಾಮಗಳನ್ನು ನರೇಗಾ ಯೋಜನೆಡಿ ಗುರುತಿಸಿ ಚರಂಡಿ ನಿರ್ಮಾಣಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.

ಚಿಕ್ಕೋಡಿ ಭಾಗದಲ್ಲಿ ಬಹು ಗ್ರಾಮಗಳಿಗೆ ಶಾಶ್ವತ ಕುಡಿಯುವ ನೀರು ಯೋಜನೆಗೆ ಚಾಲನೆ ನೀಡಲಾಗಿದೆ ಬರುವ ದಿನಗಳಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಎಂದು ಜಿ.ಪಂ ಸಿಇಓ ರಾಹುಲ್ ಶಿಂಧೆ ಹೇಳಿದರು.

ಮಳೆ ಹಾನಿಯಿಂದ 5 ಜೀವ ಹಾನಿಗಳಾಗಿವೆ ಅಂತವರ ಕುಟುಂಬದ ಅವಲಂಬಿತರಿಗೆ 5 ಲಕ್ಷ ಪರಿಹಾರಗಳನ್ನು ನೋಡಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ತಿಳಿಸಿದರು. ಸ್ಮಾರ್ಟ್ ಸಿಟಿಯಲ್ಲಿ 108 ಕಾಮರಿಗಳು ಇವೆ ಅದರಲ್ಲಿ ಈಗಾಗಲೇ ಬಹುತೇಕ ಯೋಜನೆಗಳು ಪೂರ್ಣಗೊಂಡಿದ್ದು, ಇನ್ನೂ 5 ಯೋಜನೆಗಳು ಪ್ರಗತಿ ಹಂತದಲ್ಲಿವೆ ಎಂದು ಸ್ಮಾರ್ಟ್ ಸಿಟಿ ಅಧಿಕಾರಿಗಳು ವಿವರಿಸಿದರು.

ಹಿಂಗಾರು ಬೀಜ ವಿತರಣೆ ಈಗಾಗಲೇ ಎಲ್ಲ ಕಡೆಗೆ ವಿತರಣೆ ಮಾಡಲಾಗಿದೆ, ಅದೇ ರೀತಿಯಲ್ಲಿ ರಸ ಗೊಬ್ಬರಗಳ ಕೊರತೆ ಸಹ ಇರುವುದಿಲ್ಲ. ತೋಟಗಾರಿಕೆ ಬೆಳೆ ಹಾನಿ 3320 ಹೆಕ್ಟೇರ್ ಬೆಳೆ ಹಾಳಾಗಿವೆ ಈ ಕುರಿತು ಸರ್ಕಾರದ ಪೋರ್ಟಲ್ ನಲ್ಲಿ ನಮೂದಿಸಲಾಗಿದೆ ಬೆಳೆ ಪರಿಹಾರ ಒದಗಿಸಲು ಮಾಹಿತಿ ಸಲ್ಲಿಸಲಾಗಿದೆ ಎಂದು ಕೃಷಿ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ವಿವರಿಸಿದರು.

ಮಹಾನಗರ ಪಾಲಿಕೆ ಆಯುಕ್ತೆ ಶುಭ. ಬಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಗಡಾದಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ ದಿವಟರ್ ಆಹಾರ ಇಲಾಖೆ ಉಪ ನಿರ್ದೇಶಕ ಮಲ್ಲಿಕಾರ್ಜುನ್ ನಾಯಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಚೇತನಕುಮಾರ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಾಮನಗೌಡ ಕನ್ನೊಳ್ಳಿ ಸೇರಿದಂತೆ ವಿವಿಧ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.


### ಕಲಿಕಾ ಮಟ್ಟ ಹಿಂದುಳಿಯದಂತೆ ಎಚ್ಚರ ವಹಿಸಿ

ಬೆಳಗಾವಿ ಜಿಲ್ಲೆ ಶೈಕ್ಷಣಿಕ ಮಟ್ಟ ಹೆಚ್ಚಿಸುವ ಇಟ್ಟನಲ್ಲಿ ಅಧಿಕಾರಿಗಳು ಕೆಲಸ ಮಾಡಬೇಕು. ಈಗಾಗಲೇ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕೈಗೊಳ್ಳುತ್ತಿರುವ ಕಾರಣ ರಜೆ ದಿನಗಳನ್ನು ಹೆಚ್ಚಿಸಲಾಗಿದೆ. ಶಿಕ್ಷಕರು ಸಮೀಕ್ಷೆಯಲ್ಲಿ ಪಾಲ್ಗೊಳ್ಳುತ್ತಿರುವುದರಿಂದ ಬರುವ ದಿನಗಳಲ್ಲಿ ಕಲಿಕಾ ಅವಧಿಗೆ ಹಿಂದೆ ಉಳಿದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು. ಇತ್ತೀಚಿಗೆ ದೊಡ್ಡ ಪ್ರಮಾಣದಲ್ಲಿ ಮಳೆಯಾಗಿರುವ ಹಿನ್ನಲೆಯಲ್ಲಿ ಹಾಳಾಗಿರುವ ಗ್ರಾಮೀಣ ಭಾಗದ ತೋಟ, ಜಮೀನುಗಳ ರಸ್ತೆ ಕಾಮಗಾರಿಗಳನ್ನು ನರೇಗಾ ಯೋಜನೆಯಡಿ ಕ್ರಿಯಾ ಯೋಜನೆ ರೂಪಿಸಿ ರಸ್ತೆಗಳ ದುರಸ್ತಿ ಕಾರ್ಯ ಕೈಗೊಳ್ಳಬೇಕು ಎಂದು ಲೋಕಸಭಾ ಸಂಸದ ಜಗದೀಶ್ ಶೆಟ್ಟರ್ ಹೇಳಿದರು.

## ರೈತರ ಜಮೀನಿಗೆ ನಾಲ್ಕು ಆರ್ಥಿಕ ವರ್ಷದಲ್ಲಿ ಪರಿಹಾರ

**ಬೆಂಗಳೂರು:** ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಭೂಸ್ವಾಧೀನ ಪರಿಹಾರ ದರ ಜಾರಿಗೊಳಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿರುವ ಹಿನ್ನೆಲೆ, ಸಚಿವ ಆರ್ ಬಿ ತಿಮ್ಮಾಪೂರ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

ತಮ್ಮ ಪತ್ರಿಕಾ ಪ್ರಕಟಣೆಯಲ್ಲಿ ಕೃತಜ್ಞತೆ ಸಲ್ಲಿಸಿರುವ ಸಚಿವ ಆರ್.ಬಿ.ತಿಮ್ಮಾಪುರ ಅವರು ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3 ಮತ್ತು ನ್ಯಾಯಾಧೀಕರಣದ ತೀರ್ಪಿನಂತೆ ಆಲಮಟ್ಟಿ ಜಲಾಶಯದ ಎತ್ತರವನ್ನು 519.6 ಮೀ. ನಿಂದ 524.256 ಮೀ. ಗೆ ಏರಿಸಲು ಅನುಮತಿ ನೀಡಲಾಗಿದೆ. ಜಲಾಶಯದ ಎತ್ತರವನ್ನು ಹೆಚ್ಚಿಸುವುದರಿಂದ ಆಲಮಟ್ಟಿಯ ಹಿನ್ನೀರಿನಿಂದ ಸುಮಾರು



75000 ಎಕರೆಗೂ ಹೆಚ್ಚು ಜಮೀನು ಮುಳುಗಡೆಯಾಗುವ ಸಂಭವವಿದೆ. ಭೂಸ್ವಾಧೀನ ಪ್ರಕ್ರಿಯೆಯನ್ನು ಒಂದೇ ಹಂತದಲ್ಲಿ ಪೂರ್ಣಗೊಳಿಸಲು, ಒಪ್ಪಿತ ಐತೀರ್ಪಿನ ಮೂಲಕ ಭೂಸ್ವಾಧೀನದ ದರವನ್ನು ಸೆಪ್ಟೆಂಬರ್ 16 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿತ್ತು ಎಂದು ತಿಳಿಸಿದ್ದಾರೆ.

ಯೋಜನೆಗೆ ಮುಳುಗಡೆಯಾಗುವ ಭೂಮಿ ವ್ಯಾಪ್ತಿಯ ನೀರಾವರಿ ಜಮೀನಿಗೆ ಎಕರೆಯೊಂದಕ್ಕೆ ರೂ 40 ಲಕ್ಷ, ಒಣಭೂಮಿಯ ಎಕರೆಯೊಂದಕ್ಕೆ ರೂ 30 ಲಕ್ಷ ಪರಿಹಾರ ಒದಗಿಸಲು ತೀರ್ಮಾನಿಸಲಾಗಿದ್ದು, ಅದರಂತೆ ಇದೀಗ ಅಧಿಕೃತ ಆದೇಶ ಹೊರಡಿಸಲಾಗಿದೆ ಎಂದು ತಿಳಿಸಿರುವ ಸಚಿವರು ಭೂಸ್ವಾಧೀನ, ಪುನರ್‌ನಿರ್ಮಾಣ, ಪುನರ್ವಸತಿ ಕಾರ್ಯಕ್ರಮಗಳಿಗೆ ಅಗತ್ಯವಿರುವ ಹೆಚ್ಚುವರಿ ಸುಮಾರು 75 ಸಾವಿರ ಕೋಟಿ ಮೊತ್ತವನ್ನು ನಾಲ್ಕು ಆರ್ಥಿಕ ವರ್ಷದೊಳಗೆ ಭರಿಸಲು ವಾರ್ಷಿಕವಾಗಿ ಸುಮಾರು 18 ಸಾವಿರ ಕೋಟಿ ವಾರ್ಷಿಕ ಅನುದಾನವನ್ನು ಜಲಸಂಪನ್ಮೂಲ ಇಲಾಖೆಗೆ ಬಜೆಟ್‌ನಲ್ಲಿ ಒದಗಿಸುವುದಾಗಿ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ನುಡಿದಂತೆ ನಡೆಯೋದು ನಮ್ಮ ಸಿದ್ದರಾಮಯ್ಯರ ನೇತೃತ್ವದ ಸರ್ಕಾರ. ಇದೊಂದು ಐತಿಹಾಸಿಕ ತೀರ್ಮಾನವಾಗಿದೆ. ಅವರ ಹಲವು ವರ್ಷಗಳ ಹೋರಾಟ ಸಾಕಾರಗೊಳಿಸಿದ್ದು ನಮ್ಮ ಸರ್ಕಾರ. ಅತ್ಯಂತ ಮಾನವೀಯತೆಯ ದೃಷ್ಟಿಯಿಂದ ಜನಪರ ನಿರ್ಣಯ ಕೈಗೊಂಡಿರುವುದು ನಮ್ಮ ರೈತ ಬಾಂಧವರಿಗೆ ಸಂತಸ ತಂದಿದೆ. ಈ ಚಾರಿತ್ರಿಕ ತೀರ್ಮಾನ ಕೈಗೊಂಡ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರು, ಉಪಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ ಸಚಿವರೂ ಆದ ಡಿಕೆ ಶಿವಕುಮಾರ್, ಸಚಿವ ಸಂಪುಟದ ಎಲ್ಲಾ ಸಚಿವರು ಸೇರಿದಂತೆ ಎಲ್ಲರಿಗೂ ಧನ್ಯವಾದಗಳನ್ನು ಸಚಿವ ಆರ್.ಬಿ.ತಿಮ್ಮಾಪುರ ಅರ್ಪಿಸಿದ್ದಾರೆ.

# ಕಾರ್ತಿಕ ಮಾಸದಲ್ಲಿ ಶಬರಿಮಲೈಯಲ್ಲಿ ಅನ್ನದಾಸೋಹ



**ಯರಗಟ್ಟಿ:** ಅಖಿಲ ಭಾರತ ಅಯ್ಯಪ್ಪ ಸ್ವಾಮಿ ಸೇವಾ ಸಂಘ, ಕರ್ನಾಟಕ ರಾಜ್ಯ ಪರಿಷತ್ತಿನ 2024–25ನೇ ಸಾಲಿನ ವಾರ್ಷಿಕ ಸಾಮಾನ್ಯ ಸಭೆ ಧಾರವಾಡದ ಹನುಮಂತಪ್ಪ ಗಾಯಕವಾಡ ಕಲ್ಯಾಣ ಮಂಟಪದಲ್ಲಿ ಇತ್ತಿಚೆಗೆ ಜರುಗಿತು.

ರಾಜ್ಯದ ಕಾರ್ಯದರ್ಶಿಯವರಾದ ಪಿ.ಪಿ. ಮುರಳಿಧರನ್, ಮಾತನಾಡಿದ ಅವರು ಪ್ರತಿ ವರ್ಷ ಕಾರ್ತಿಕ ಮಾಸದಲ್ಲಿ ಅಖಿಲ ಭಾರತ ಅಯ್ಯಪ್ಪ ಸೇವಾ ಸಂಘಂದಿಂದ ಶಬರಿಮಲೈಯಲ್ಲಿ ಅನ್ನದಾಸೋಹ ಮಾಡುವುದು ಮೂಲ ಉದ್ದೇಶವಾಗಿದೆ. ಸಂಘದಿಂದ ಪ್ರತಿ ತಿಂಗಳುಗಳನ್ನು ಒಳಗೊಂಡಂತೆ ಪ್ರತೀ ವರ್ಷವೂ ಮಂಡಲ ವ್ರತ ಕಾಲದಲ್ಲಿ ಆರೋಗ್ಯ (ಮೇಡಿಕಲ್) ಸೇವೆ, ಕುಡಿಯುವ ನೀರಿನ ಸೇವೆ, ಅಸ್ತವ್ಯಸ್ತರಾದ ಭಕ್ತರನ್ನು ಸ್ಟ್ರೆಚ್ಚರ್ ಮೂಲಕ ಆಸ್ಪತ್ರೆಗೆ ಅತಿಶೀಘ್ರದಲ್ಲಿ ಹೆಗಲಮೇಲೆ ಹೊತ್ತು ತಲುಪಿಸುವ ಸೇವೆಯನ್ನು ಸತತ 80 ವರ್ಷಗಳಿಂದ ಶಬರಿಮಲೆ ಶ್ರೀ ಸ್ವಾಮಿ ಅಯ್ಯಪ್ಪನ ಸನ್ನಿಧಾನದಲ್ಲಿ ನಮ್ಮ ಸಂಘ ತೊಡಗಿದೆ ಎಂದು ಹೇಳಿದರು. ನಂತರ ರಾಜ್ಯ ಖಜಾಂಚಿ ಕೆ. ನಾರಾಯಣ ಗುರುಸ್ವಾಮಿ ಮಾತನಾಡಿದರು.

ಈ ವೇಳೆ ರಾಜ್ಯಾಧ್ಯಕ್ಷರಾದ ಕೆ. ರಮೇಶ್, ರಾಜ್ಯ ಉಪಾಧ್ಯಕ್ಷರಾದ ಪಿ. ಬಿ. ಸುಬ್ರಹ್ಮಣ್ಯಂ, ರೇವಪ್ಪ ರೆಡ್ಡಿ, ವೀರೇಂದ್ರ ಪ್ರಸಾದ, ಜಿ. ಬಾಲಮುರುಗನ್, ವಿರೂಪಣ್ಣ ಗುಡಿ, ವಿರೇಶ್ ಕಲಬುರ್ಗಿ, ರಾಜ್ಯ ಜಂಟಿ ಕಾರ್ಯದರ್ಶಿಗಳಾದ ಮುರಳಿ ಮೋಹನ್ ಡಿ.ಎನ್, ಮಹಾಂತೇಶ್ ಗೊನ್ನಾಗರ, ಕೆ. ಟಿ. ಗಿರೀಶ್, ಎಂ. ಸುಬ್ರಹ್ಮಣ್ಯ, ಕೆ. ಎಂ. ಗೋಪಿ ಸೇರಿದಂತೆ ಬೆಳಗಾವಿ, ಧಾರವಾಡ, ಗದಗ, ವಿವಿಧ ಜಿಲ್ಲೆಗಳ ಮಾಲಾದಾರಿಗಳು ಅನೇಕರು ಇದ್ದರು.

### ವಿಶೇಷ ಮಧ್ಯಸ್ಥಿಕೆ ಅಭಿಯಾನ ರಾಷ್ಟ್ರಕ್ಕಾಗಿ ೯೦ ದಿನಗಳ ಕಾರ್ಯಚರಣೆ

# ಜಿಲ್ಲೆಯಲ್ಲಿ 156 ಪ್ರಕರಣಗಳು ಮಧ್ಯಸ್ಥಿಕೆಯಲ್ಲಿ ಇತ್ಯರ್ಥ

**ಬೆಳಗಾವಿ:** ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರವು, ಮಧ್ಯಸ್ಥಿಕೆ ಮತ್ತು ಸಂಧಾನ ಯೋಜನಾ ಸಮಿತಿ(ಎಂ.ಸಿ.ಸಿ), ಗೌರವಾನ್ವಿತ ಭಾರತದ ಸರ್ವೋಚ್ಚ ನ್ಯಾಯಾಲಯದೊಂದಿಗೆ, "ವಿಶೇಷ ಮಧ್ಯಸ್ಥಿಕೆ ಅಭಿಯಾನ "ರಾಷ್ಟ್ರಕ್ಕಾಗಿ" 90 ದಿನಗಳ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿತ್ತು. ಈ ಕಾರ್ಯಾಚರಣೆಯಲ್ಲಿ ಜಿಲ್ಲೆಯಲ್ಲಿ 156 ಪ್ರಕರಣಗಳು ಮಧ್ಯಸ್ಥಿಕೆಯಲ್ಲಿ ಇತ್ಯರ್ಥ ಪಡಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂದೀಪ ಪಾಟೀಲ ಅವರು ತಿಳಿಸಿದರು.



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಹೊಸ ನ್ಯಾಯಾಲಯಗಳ ಸಂಕೀರ್ಣದ ಆವರಣದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ (ಅ.10) ನಡೆದ ರಾಷ್ಟ್ರೀಯ ಲೋಕ ಅದಾಲತ್ ಕುರಿತು ಆಯೋಜಿಸಲಾದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾಹಿತಿ ನೀಡಿದರು. ಕರ್ನಾಟಕದ ಗೌರವಾನ್ವಿತ ಉಚ್ಚ ನ್ಯಾಯಾಲಯ ಮತ್ತು ಜಿಲ್ಲಾ ನ್ಯಾಯಾಲಯಗಳ ಮುಂದೆ ಜುಲೈ–2025 ರ ಮಾಹೆಯಲ್ಲಿ 13,86,837 ಪ್ರಕರಣಗಳು ಇದ್ದವು, ಆ ಪ್ರಕರಣಗಳಲ್ಲಿ 76,230 ಪ್ರಕರಣಗಳನ್ನು ಗುರುತಿಸಿ ಮಧ್ಯಸ್ಥಿಕೆ ಕೇಂದ್ರಗಳಿಗೆ ಕಳುಹಿಸಲಾಯಿತು, ಅದರಲ್ಲಿ 47,080 ಪ್ರಕರಣಗಳನ್ನು ಮಧ್ಯಸ್ಥಿಕೆಗೆ ತೆಗದುಕೊಂಡಿದ್ದು, 5,575 ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಯಿತು ಎಂದು ತಿಳಿಸಿದರು.

90 ದಿನಗಳ ರಾಷ್ಟ್ರಕ್ಕಾಗಿ ವಿಶೇಷ ಅಭಿಯಾನ ಮಧ್ಯಸ್ಥಿಕೆಯಲ್ಲಿ 3038 (2862+176) ವೈವಾಹಿಕ ಮತ್ತು ಕೌಟುಂಬಿಕ ದೌರ್ಜನ್ಯ ಪ್ರಕರಣಗಳು, 649 ಪಾಲು ವಿಭಾಗ, 104 ಅಪಘಾತ ಪರಿಹಾರ, 668 ಚೆಕ್ ಬೌನ್ಸ್, 21 ವಾಣಿಜ್ಯ ವಿವಾದ, 188 ಕ್ರಿಮಿನಲ್ ಕಾಂಪೌಂಡಬಲ್, 40 ಡಿ.ಆರ್‌ಪಿ, ಮತ್ತು 8 ಗ್ರಾಹಕ ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ವಿವರಣೆ ನೀಡಿದರು.

ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ 90 ದಿನಗಳ ವಿಶೇಷ ಮಧ್ಯಸ್ಥಿಕೆ ಅಭಿಯಾನದ ಕಾರ್ಯಾಚರಣೆಯಲ್ಲಿ ಜಿಲ್ಲೆಯಲ್ಲಿ ಬಾಕಿ ಉಳಿದ 1,26,194 ಪ್ರಕರಣಗಳ ಪೈಕಿ 4655 ಪ್ರಕರಣಗಳನ್ನು ಮಧ್ಯಸ್ಥಿಕೆಗೆ ಗುರುತಿಸಿ, ಈ ಪೈಕಿ 995 ಪ್ರಕರಣಗಳನ್ನು ತೆಗದುಕೊಂಡು ಅವುಗಳಲ್ಲಿ 156 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ತಿಳಿಸಿದರು.

ದೇಶದಾದ್ಯಂತ ನಾಲ್ಕನೇ ರಾಷ್ಟ್ರೀಯ ಮೇಗಾ ಲೋಕ್ ಅದಾಲತ್ ಡಿಸೆಂಬರ್.13 ರಂದು ನಡೆಯಲಿದ್ದು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಅದಾಲತ್ ಹಮ್ಮಿಕೊಳ್ಳಲಾಗುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು. ಲೋಕ ಅದಾಲತ್ ನಲ್ಲಿ ಸುಮಾರು ವರ್ಷಗಳಿಂದ ಬಾಕಿ ಇರುವ ಪ್ರಕಣಗಳ ಇತ್ಯರ್ಥಕ್ಕೆ ಅವಕಾಶ ಕಲ್ಪಿಸಲಾಗುವುದು. ಇದರಿಂದ ನ್ಯಾಯಾಲಯಕ್ಕೆ ಅಲೆದಾಡುತ್ತಿರುವ ಕಕ್ಷಿದಾರರ ಹಣ, ಸಮಯ ಉಳಿತಾಯದ ಜೊತೆಗೆ ತ್ವರಿತ ಗತಿಯಲ್ಲಿ ಪರಿಹಾರ ಕಲ್ಪಿಸಲು ಸಹಾಯವಾಗಲಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂದೀಪ ಪಾಟೀಲ ಅವರು ಮಾಹಿತಿ ನೀಡಿದರು.

# ನಾಳೆ ವಿದ್ಯುತ್ ವ್ಯತ್ಯಯ

**ಜಮಖಂಡಿ:** ನಗರದ 110 ಕೆವಿ ವಿದ್ಯುತ್ವಿತರಣಾ ಕೇಂದ್ರದ ತ್ರೈಮಾಸಿಕ ನಿರ್ವಹಣೆ ಹಾಗೂ ಹುಲ್ಯಾಳ ಗ್ರಾಮದ ಹೊಸ ಐಪಿ ಮಾರ್ಗದ ಚಾಲನೆ ಕಾಮಗಾರಿ ನಿಮಿತ್ತ ದಿ.12 ರಂದು ಬೆಳಗಿನ 10 ರಿಂದ ಸಂಜೆ 6 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ. ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುವ 33 ಕೆವಿ ವಿತರಣಾ ಕೇಂದ್ರಗಳಾದ ಹಿಪ್ಪರಗಿ ಮತ್ತು ವಾಟರ್ ಸಪ್ಲಾಯ ಮಧುರ ಖಂಡಿ. ಎಪಿಎಂಸಿ, ಹುನ್ನೂರ, ರಾಮತೀರ್ಥ, ಜಮಖಂಡಿ, ಕೆ.ಎಚ್.ಬಿ.ಕಾಲನಿ, ರಾಮಭಾಗ, ಲಕ್ಷ್ಮೀನಗರ, ಹಂಚಿನಾಳ ಆರ.ಸಿ, ಜಕನೂರ ವಾಟರ ಸಪ್ಲಾಯ, ಸನಾಳ, 11 ಕೆವಿ ಕಂಕಣವಾಡಿ ಐಪಿ, ಹುಲ್ಯಾಳ ಐಪಿ ಫೀಡರ, ನಗರ, ನಿರಂತರ ಜ್ಯೋತಿ ಮಾರ್ಗಗಳಲ್ಲಿ ವಿದ್ಯುತ ವ್ಯತ್ಯಯವಾಗಲಿದೆ ಎಂದು ಉಪವಿಭಾಗ ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

# ರಸ್ತೆ ಅಪಘಾತ ಪ್ರಕರಣವನ್ನು ಬೇಧಿಸಿದ ಪೋಲೀಸರು

**ಜಮಖಂಡಿ:** ಗ್ರಾಮೀಣ ಠಾಣೆ ವ್ಯಾಪ್ತಿಯಲ್ಲಿ ನಡೆದ ರಸ್ತೆ ಅಪಘಾತ ಪ್ರಕರಣವನ್ನು ಬೇಧಿಸಿದ ಪೊಲೀಸರು. ಕೊಲೆ ಪ್ರಕರಣ ಎಂದು ಸ್ಪಷ್ಟ ಪಡಿಸಿದ್ದಾರೆ. ಬುಧವಾರ ಗ್ರಾಮೀಣ ಠಾಣೆವ್ಯಾಪ್ತಿಯ ಬಂಡಿಗಣಿ ಕ್ರಾಸ್‌ನಲ್ಲಿ ರಸ್ತೆ ಅಪಘಾತ ನಡೆದಿತ್ತು ಅಪಘಾತದಲ್ಲಿ ಪತ್ರಕರ್ತ ಬಸವರಾಜ ಕಾನಕೊಂಡ ಸ್ಥಳದಲ್ಲೇ ಮೃತಪಟ್ಟಿದ್ದರು. ಪ್ರಕರಣದ ಜಾಡು ಹಿಡಿದು ತನಿಖೆ ಕೈಗೊಂಡಿದ್ದ ಪೊಲೀಸರಿಗೆ ಅನುಮಾನ ಉಂಟಾಗಿ ಇದು ಕೊಲೆ ಪ್ರಕರಣ ವೆಂದು ಗೊತ್ತಾಗಿದೆ. ಪ್ರಕರಣದ ಸಂಬಂಧ ಮೂವರು ಆರೋಪಿಗಳನ್ನು ಬಂಧಿಸಿ ಕ್ರಮ ಜರುಗಿದ್ದಾರೆ.

ಮೊದಲು ಹಿಟ್ಯಾಂಡ ರನ್ ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು ತನಿಖೆಯ. ಸಂದರ್ಭದಲ್ಲಿ ಅನುಮಾನ ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ತನಿಖೆ ತ್ರೀವ್ರ ಗೊಳಿಸಿದಾಗ ಢಿಕ್ಕಿ ಹೊಡೆದ ವಾಹನ ಕೆಎ 48–ಎ–1732 ಅಶ್ಪಾಕ್ ಸುಲೇಮಾನ ಮುಲ್ಲಾ ಎಂಬುವರಿಗೆ ಸೇರಿದ್ದು ಎಂದು ಗೊತ್ತಾಗಿದೆ. ವಾಹನದ ಮಾಲಿಕ ಹಾಗೂ ಆತನ ಸಹಚರರಾದ ಹೊಸೂರು ನಿವಾಸಿಗಳಾದ ನಂದೀಶ್ವರ ಮಹಾದೇವ ಪವಾಡಿ ಮತ್ತು ಮಹೇಶ ಶ್ರೀಶೈಲ ಪವಾಡಿ ಎಂಬುವರನ್ನು ವಶಕ್ಕೆ ಪಡೆಯಲಾಗಿದೆ. ವಿಚಾರಣೆಯ ಸಮಯದಲ್ಲಿ, ಅಶ್ಫಾಕ ಸುಲೇಮಾನ ಮುಲ್ಲಾ ಸ್ವಯಂಪ್ರೇರಿತ ಮತ್ತು ವಿವರವಾದ ತಪ್ಪೊಪ್ಪಿಗೆಯನ್ನು ನೀಡಿದ್ದು, ಮದರಕಂಡಿ ಗ್ರಾಮದ ಬಳಿ ಬಸವರಾಜ ಖಾನಗೊಂಡ ಅವರ ವಾಹನಕ್ಕೆ ಡಿಕ್ಕಿ



ಹೊಡೆದು ಉದ್ದೇಶಪೂರ್ವಕವಾಗಿ ಸಾವಿಗೆ ಕಾರಣನಾಗಿದ್ದಾಗಿ ಒಪ್ಪಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಕರಣದ ಆರೋಪಿಗಳು ಪಡಿತರ ಅಕ್ಕಿಯನ್ನು ಸಂಗ್ರಹಿಸಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದರು ಎನ್ನಲಾಗಿದ್ದು ಅವರನ್ನು ಬ್ಲಾಕ್‌ಮೇಲ್ ಮಾಡಿ ಹಣಕ್ಕೆ ಬೇಡಿಕೆ ಇಡುತ್ತಿದ್ದ ಪತ್ರಕರ್ತ ಕಳೆದ 4 ವರ್ಷ ಗಳಿಂದ ಸತಾಯಿಸುತ್ತಿದ್ದ ಎಂದು ಆರೋಪಿಗಳು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸಿಸಿಟಿವಿ ದೃಶ್ಯಾವಳಿಗಳು, ಡಿಜಿಟಲ್ ಪುರಾವೆಗಳು, ಸಾಕ್ಷಿಗಳ ಹೇಳಿಕೆಗಳು ಮತ್ತು ವಿಧಿವಿಜ್ಞಾನ ಸುಳಿವುಗಳಿಂದ ದೃಢೀಕರಿಸಲ್ಪಟ್ಟ ತಪ್ಪೊಪ್ಪಿಗೆಯ ಆಧಾರದ ಮೇಲೆ, ಪ್ರಕರಣವನ್ನು ರಸ್ತೆ ಅಪಘಾತದಿಂದ ಕೊಲೆ ಪ್ರಕರಣವಾಗಿ ಪರಿವರ್ತಿಸಲಾಗಿದೆ, ಎಂದು ಪೊಲೀಸ್ ಪ್ರಕಟನೆಯಲ್ಲಿ ತಿಳಿಸಿದ್ದಾರೆ. ಪ್ರಕರಣಕ್ಕೆ ಸಂಬಂಧ ಪಟ್ಟ ಮೂವರು ಆರೋಪಿಗಳಾದ ಅಶ್ಫಾಕ್ ಮುಲ್ಲಾ, ನಂದೀಶ್ವರ ಪವಾಡಿ ಮತ್ತು ಮಹೇಶ ಪವಾಡಿ ಎಂಬುವರನ್ನು ಬಂಧಿಸಲಾಗಿದೆ.

### ಕೊಲೆಯ ಸ್ಕೆಚ್

ಹೆಚ್ಚಿನ ಹಣಕ್ಕೆ ಬೇಡಿಕೆ ಇಟ್ಟಿದ್ದ ಪತ್ರಕರ್ತ ಬಸವರಾಜನನ್ನು ತೇರದಾಳದ ಸಣ್ಣ ಹೊಟೇಲ್‌ನಲ್ಲಿ ಚರ್ಚೆಗೆಂದು ಕರೆಯಿಸಲಾಗಿತ್ತು. ಪರಿಚಯಸ್ತರಾಗಿದ್ದ ರಾಘವೇಂದ್ರ ತೇಲಿ ಎಂಬುವರ ಮಧ್ಯಸ್ಥಿಕೆಯಲ್ಲಿ ಸಭೆ ನಡೆಸಿ ಚರ್ಚೆಮುಗಿಸಿಕೊಂಡು ಅಶ್ಫಾಕ್ ಸ್ಥಳದಿಂದ ಹೊರಟು ಹೋಗಿದ್ದ, ಉಳಿದವರು ಅಲ್ಲೇ ಊಟಕ್ಕೆ ಕುಳಿತರು ಎನ್ನಲಾಗಿದೆ, ಊಟ ಮುಗಿಸಿ ಅಲ್ಲಿಂದ ಬಸವರಾಜ ತನ್ನ ಸ್ಕೂಟಿ ವಾಹನದಲ್ಲಿ ಜಮಖಂಡಿಯತ್ತ ಪ್ರಯಾಣ ಬೆಳೆಸಿದ್ದ, ಅಶ್ಫಾಕ್‌ನ ಸಹಚರರಾದ ನಂದೀಶ್ವರ ಹಾಗೂ ಮಹೇಶ ಬಸವರಾಜ ನನ್ನು ಹಿಂಬಾಲಿಸಸುತ್ತ ಬಂಡಿಗಣಿ ಕ್ರಾಸ್ ಹತ್ತಿರ ಪಿಕ್‌ಅಪ್ ವಾಹನದೊಂದಿಗೆ ಕಾಯುತ್ತಿದ್ದ ಅಶ್ಫಾಕ್‌ಗೆ ನಿರಂತರ ಮಾಹಿತಿ ನೀಡುತ್ತಿದ್ದರು. ಪೂರ್ವ ನಿಯೋಜನೆಯಂತೆ ಹತ್ತಿರಕ್ಕೆ ಬಂದ ಬಸವರಾಜನ ವಾಹನಕ್ಕೆ ರಾಂಗ್‌ರೂಟ್‌ನಲ್ಲಿ ವೇಗವಾಗಿ ಬಂದು ಡಿಕ್ಕಿ ಹೊಡೆದು ಅಪಘಾತ ಎಂಬಂತೆ ಸೃಷ್ಠಿಸಲಾಗಿತ್ತು. ಯುಸುಫ್‌ಮುಲ್ಲಾನ ಸಹಾಯ ದಿಂದ ಪಿಕ್‌ಅಪ್ ವಾಹನವನ್ನು ಮರೆಮಾಡಲಾಗಿತ್ತು.

ಅಪರಾಧದಲ್ಲಿ ಬಳಸಲಾದ ವಾಹನವನ್ನು ವಶಪಡಿಸಿಕೊಳ್ಳಲಾಗಿದ್ದು ತನಿಖೆ ಮುಂದು ವರೆದಿದೆ ಎಂದು ತಿಳಿಸಿದ್ದಾರೆ.

# ಶೂ ಎಸೆತ ಕಾನೂನು ವ್ಯವಸ್ಥೆಯ ಗೌರವಕ್ಕೆ ಅವಮಾನ




**ಜಮಖಂಡಿ:** ರಾಷ್ಟ್ರದ ಅತಿ ಉನ್ನತ ನ್ಯಾಯಾಂಗವಾದ ಸುಪ್ರೀಂ ಕೋರ್ಟ್‌ನಲ್ಲಿ ನಡೆದ ಕಲಾಪದ ವೇಳೆ, ಗೌರವಾನ್ವಿತ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರ ಮೇಲೆ ಹಿರಿಯ ವಕೀಲ ರಾಕೇಶ್ ಕಿಶೋರ್ ಶೂ ಎಸೆದು ಮಾಡುವ ಯತ್ನ ನಡೆಸಿದ ಘಟನೆ ದೇಶದ ಕಾನೂನು ವ್ಯವಸ್ಥೆಯ ಗೌರವಕ್ಕೆ ಗಂಭೀರ ಅವಮಾನವೆಂದು ಕರ್ನಾಟಕ ಭೀಮ ಸೇನೆ ಜಿಲ್ಲಾ ಅಧ್ಯಕ್ಷ ಪ್ರವೀಣ ಹೊಳೆಪ್ಪಗೋಳ ತೀವ್ರವಾಗಿ ಖಂಡಿಸಿದರು

ನಗರದ ತಾಲೂಕಾ ಆಡಳಿತ ಭವನದಲ್ಲಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ್ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು ಈ ಕೃತ್ಯವು ಕೇವಲ ನ್ಯಾಯಮೂರ್ತಿಯ ಮೇಲಿನ ದಾಳಿ ಮಾತ್ರವಲ್ಲ, ಇದು ಸಂವಿಧಾನದ ಆತ್ಮದ ಮೇಲಿನ ದಾಳಿಯಾಗಿದೆ. ಕೇಂದ್ರ ಸರ್ಕಾರ ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ಸೊಮೋಟೋ ಕೇಸ್ ದಾಖಲಿಸಿ, ಆರೋಪಿಯನ್ನು ಬಂಧಿಸಿ ಜೈಲಿಗೆ ಕಳುಹಿಸಬೇಕು ಎಂದು ಒತ್ತಾಯಿಸಿದರು.

ಸರ್ಕಾರ ಕೇವಲ ಕಾಟಾಚಾರ ಕೇಸ್‌ನಲ್ಲಿ ಬಂಧಿಸಿ ಬಿಟ್ಟಿರುವ ಕ್ರಮವನ್ನು ಕರ್ನಾಟಕ ಭೀಮ್ ಸೇನೆ ಸಂಘಟನೆ ಖಂಡಿಸಿದ್ದು, ಈ ಪ್ರಕರಣದಲ್ಲಿ ತಕ್ಷಣ ಗಂಭೀರ ಕಾನೂನು ಕ್ರಮ ಕೈಗೊಳ್ಳದಿದ್ದರೆ, ದೆಹಲಿ ಚಲೋ ಹೋರಾಟ ಘೋಷಿಸಿ, ಜಂತರ್ ಮಂತರ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಅಮಿತ್ ಕಾಳೆ, ವಸಿಮ ಜಾರಿ, ರವಿ ಆಲಗೂರು, ರಾಜು ಲಗಳಿ, ನಾರಾಯಣ ಕಾಂಬಳೆ. ಪೂಜಾ ಕಾಂಬಳೆ, ಶಕುಂತಲಾ ಮಾಂಗ ಹನುಮಂತ ಕಾಂಬಳೆ, ಹುಸೇನ್ ದ್ರಾಕ್ಷಿ ಇನ್ನೂ ಅನೇಕರು ಇದ್ದರು.

# ಸಮಾಜದ ಅಭಿವೃದ್ಧಿಗೆ ಸಂಘಟನೆ, ಶಿಕ್ಷಣ ಬಹುಮುಖ್ಯ: ಉಪ್ಪಾರ

**ಗೋಕಾಕ:** ಉಪ್ಪಾರ ಸಮಾಜದ ಅಭಿವೃದ್ಧಿಗೆ ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಹಿಂದುಳಿದ ಸಮಾಜವಾಗಿದ್ದು ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಲಾಗುವದು ಎಂದು ಕರ್ನಾಟಕ ರಾಜ್ಯ ಉಪ್ಪಾರ ಅಭಿವೃದ್ಧಿ ನಿಗಮದ ಅಧ್ಯಕ್ಷ ಭರಮಣ್ಣ ಉಪ್ಪಾರ ಹೇಳಿದರು.

ಅವರು, ಗುರುವಾರದಂದು ಬೆಳಿಗ್ಗೆ 10ಗಂಟೆಗೆ ನೂತನ ರಾಜ್ಯ ಉಪ್ಪಾರ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಗೋಕಾಕ ನಗರ ದ್ವಾರಬಾಗಿಲು ಮಾಲದಿನ್ನಿ ಕ್ರಾಸ್‌ನ ರಾಜಋಷಿ ಶ್ರೀ ಭಗೀರಥರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಪತ್ರಕರ್ತರೊಂದಿಗೆ ಮಾತನಾಡಿ, ರಾಜ್ಯ ಸರಕಾರ ನನ್ನ ನಾಯಕತ್ವ ಗುಣಗಳನ್ನು ಒಪ್ಪಿ ಉಪ್ಪಾರ ಸಮಾಜದ ಅಭಿವೃದ್ಧಿಗೆ ನಿಗಮ ಮಂಡಳಿ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದೆ. ಈ ಆಯ್ಕೆಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಸೇರಿದಂತೆ ಅನೇಕ ಶಾಸಕ, ಸಚಿವರು ಶ್ರಮಿಸಿದ್ದಾರೆ. ಅವರಿಗೆ ನಾನು ಕೃತಜ್ಞನಾಗಿದ್ದೇನೆ ಎಂದರು.

ಸಮಾಜದ ಅಭಿವೃದ್ಧಿಗೆ ಸಂಘಟನೆ ಮತ್ತು ಶಿಕ್ಷಣ ಬಹುಮುಖ್ಯವಾಗಿದೆ. ವಯಕ್ತಿಕ ಹಿತಾಸಕ್ತಿ ಬಿಟ್ಟು ಎಲ್ಲರನ್ನೂ ಒಗ್ಗೂಡಿಸಿಕೊಂಡು ಸಮಾಜದ ಅಭಿವೃದ್ಧಿಗೆ ಶ್ರಮಿಸಲಾಗುವದು. ರಾಜ್ಯ ಉಪ್ಪಾರ ಅಭಿವೃದ್ಧಿ ನಿಗಮದಿಂದ ಬರುವ ಸವಲತ್ತನ್ನು ರಾಜ್ಯ ಸಮಾಜ ಭಾಂಧವರಿಗೆ ತಲುಪಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವದು ಎಂದು ತಿಳಿಸಿದರು.



ನಂತರ ನಗರದ ನಾಕಾಂ–1ರ ಮೆಳವಂಕಿ ರಸ್ತೆಯ ಭಗೀರಥ ವೃತ್ತ, ಸಂಗಕನೇರಿಯ ಭಗೀರಥ ವೃತ್ತದಲ್ಲಿ ರಾಜಋಷಿ ಭಗೀರಥರ ಭಾವಚಿತ್ರಕ್ಕೆ ಪೂಜೆ ನೆರವೇರಿಸಿದರು. ಕರ್ನಾಟಕ ರಾಜ್ಯ ಉಪ್ಪಾರ ಅಭಿವೃದ್ಧಿ ನಿಗಮದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಹಿನ್ನಲೆ ಭರಮಣ್ಣ ಉಪ್ಪಾರ ಅವರನ್ನು ಅಭಿಮಾನಿಗಳು ಹಾಗೂ ಉಪ್ಪಾರ ಸಮಾಜದವರು ಹೂಮಾಲೆ ಹಾಕಿ ಅಭಿನಂಧಿಸಿದರು.

ಈ ಸಂದರ್ಭದಲ್ಲಿ ಗೋಕಾಕ ತಾಲೂಕ ಭಗೀರಥ ಉಪ್ಪಾರ ಸಂಘದ ತಾಲೂಕಾಧ್ಯಕ್ಷ ಶಿವಪುತ್ರ ಜಕಬಾಳ, ಉಪಾಧ್ಯಕ್ಷ ಅಡಿವೆಪ್ಪ ಕಿತ್ತೂರ, ಬೆಂಗಳೂರು ಶ್ರೀ ಭಗೀರಥ ಧಾರ್ಮಿಕ ಟ್ರಸ್ಟನ ನಿರ್ದೇಶಕ ಕುಶಾಲ ಗುಡೇನ್ನವರ, ಸಮಾಜ ಮುಖಂಡರಾದ ಭೀಮಶಿ ಭರಮನ್ನವರ, ಯಲ್ಲಪ್ಪ ನಂದಿ, ಪರಸಪ್ಪ ಚುನನ್ನವರ, ವೈ ಎಲ್ ಹೆಜ್ಜೆಗಾರ, ಮಾಯಪ್ಪ ತಹಶೀಲದಾರ, ವಿಠ್ಠಲ ಮುರ್ಕಿಭಾಂವಿ, ಲಕ್ಷ್ಮಣ ಮಂಗಿ, ರವಿ ಉಪ್ಪಾರ ಸೇರಿದಂತೆ ನೂರಾರು ಜನ ಭಾಗವಹಿಸಿದ್ದರು.

# ಖಾಸಗಿ ಸಹಭಾಗಿತ್ವ ವಿರೋಧಿಸಿ ಬೃಹತ್ ಪ್ರತಿಭಟನೆ

## ಬೇಡಿಕೆ ಈಡೇರದಿದ್ದರೆ ಹೋರಾಟವನ್ನು ಹಳ್ಳಿಗಳಿಗೂ ಕೊಂಡೊಯ್ಯುವ ಎಚ್ಚರಿಕೆ

**ಮುದ್ದೇಬಿಹಾಳ:** ವಿಜಯಪುರದಲ್ಲಿ ಪಿಪಿಪಿ ಮಾದರಿಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ವಿರೋಧಿಸಿ, ಸರ್ಕಾರಿ ಜಿಲ್ಲಾಸ್ಪತ್ರೆ ಉಳಿಸಿಕೊಳ್ಳಲು ಒತ್ತಾಯಿಸಿ ಸರ್ಕಾರಿ ವೈದ್ಯಕೀಯ ಕಾಲೇಜು ಹೋರಾಟ ಸಮಿತಿ ಮುದ್ದೇಬಿಹಾಳ ಘಟಕ, ಕಿತ್ತೂರು ಚನ್ನಮ್ಮ ಸ್ವಸಹಾಯ ಸಂಘಗಳ ಒಕ್ಕೂಟದಲ್ಲಿ ಬುಧವಾರ ಬೃಹತ್ ಪ್ರತಿಭಟನೆ ನಡೆಸಿ ಮುಖ್ಯಮಂತ್ರಿಗೆ ಬರೆದ ಬೇಡಿಕೆಯ ಮನವಿ ಪತ್ರವನ್ನು ತಹಶೀಲ್ದಾರಗೆ ಸಲ್ಲಿಸಲಾಯಿತು.

ಕೆ.ಬಿ.ದೊಡಮನಿ ವಕೀಲರು ಸೇರಿದಂತೆ ಹಲವರು ಈ ಸಂದರ್ಭ ಮಾತನಾಡಿ ಪಿಪಿಪಿ ಮಾದರಿಯ ವೈದ್ಯಕೀಯ ಕಾಲೇಜು ಯೋಜನೆಯು ಸಾರ್ವಜನಿಕ ಆಸ್ಪತ್ರೆಯನ್ನು ಖಾಸಗಿ ಕೈಗಳಿಗೆ ಒಪ್ಪಿಸುವ ಅಪಾಯವನ್ನು ಹೊಂದಿದೆ. ಇದು ಸಾರ್ವಜನಿಕ ಪ್ರವೇಶ, ಪಾರದರ್ಶಕತೆ ಮತ್ತು ಆರೋಗ್ಯ ಸೇವೆಗಳ ಲಭ್ಯತೆ ಹಾಗೂ ಖರ್ಚುಗಳ ಮೇಲೆ ದುಷ್ಪರಿಣಾಮ ಬೀರುತ್ತದೆ ಎಂದು ಖಂಡಿಸಿದರು.

ಸಾರ್ವಜನಿಕ ಹಣದಿಂದ ನಿರ್ಮಿತವಾದ ಸರ್ಕಾರಿ ಆಸ್ಪತ್ರೆಯ ಮೂಲ ಉದ್ದೇಶವನ್ನೇ ಪಿಪಿಪಿ ಮಾದರಿ ಹಾಳುಮಾಡುತ್ತದೆ. ಇದು ಸಾರ್ವಜನಿಕ ಹಿತಾಸಕ್ತಿಗೆ ಧಕ್ಕೆಯುಂಟುಮಾಡುತ್ತದೆ. ಅಗತ್ಯ ಸೇವೆಗಳ ಖಾಸಗೀಕರಣವನ್ನು ಹೆಚ್ಚಿಸುತ್ತದೆ. ಸಾಮಾನ್ಯ ಕುಟುಂಬಗಳಿಗೆ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಸೇವೆಗಳ ವೆಚ್ಚವನ್ನು ಹೆಚ್ಚಿಸುತ್ತದೆ ಎಂದರು.

ಸರ್ಕಾರವು ಪಿಪಿಪಿ ಮಾದರಿಯಿಂದ ಹಿಂದೆ ಸರಿದು, ಸಾರ್ವಜನಿಕ ಹೂಡಿಕೆಯನ್ನು ಬಲಪಡಿಸಿ, ಎಲ್ಲರಿಗೂ ಸಮಾನ, ಲಭ್ಯವಿರುವ ಗುಣಮಟ್ಟದ ಆರೋಗ್ಯ ಮತ್ತು ಶಿಕ್ಷಣವನ್ನು ಖಚಿತಪಡಿಸಬೇಕು ಎಂದು ಆಗ್ರಹಿಸಿದ ಅವರು ಸರ್ಕಾರ ಸ್ಪಂಧಿಸದಿದ್ದರೆ ಹೋರಾಟ ಇನ್ನಷ್ಟ ತೀವ್ರಗೊಳಿಸುವುದಾಗಿ, ಬೇಡಿಕೆಗಳನ್ನು ನಿರ್ಲಕ್ಷ್ಯ ಮಾಡಿದರೆ ಹೋರಾಟವನ್ನು ಜಿಲ್ಲೆಯ ಪ್ರತಿಯೊಂದು ಹಳ್ಳಿಗೆ ವಿಸ್ತರಿಸಿ, ಪಿಪಿಪಿ ಮಾದರಿಯ ವೈದ್ಯಕೀಯ ಕಾಲೇಜು ಯೋಜನೆ ಹಿಂಪಡೆಯುವವರೆಗೆ ಸಮುದಾಯಗಳನ್ನು ಒಗ್ಗೂಡಿಸಿ ಹೋರಾಟ ಮುಂದುವರಿಸುವುದಾಗಿ ಎಚ್ಚರಿಸಿದರು.




ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಎಲ್ಲ ಅಗತ್ಯ ಸೌಲಭ್ಯಗಳು ಇವೆ. 149.12 ಎಕರೆ ವಿಶಾಲ ಜಾಗದಲ್ಲಿ ನಿರ್ಮಾಣಗೊಂಡಿರುವ ಸರ್ಕಾರಿ ಆಸ್ಪತ್ರೆ ನಿತ್ಯ 1500ಕ್ಕೂ ಹೆಚ್ಚು ಒಳ, ಹೊರ ರೋಗಿಗಳ ದಾಖಲಾತಿ ಹೊಂದಿದೆ. 670 ಜನರಲ್ ಬೆಡ್, 150 ಬೆಡ್ಡುಗಳ ತಾಯಿ, ಮಕ್ಕಳ ಆಸ್ಪತ್ರೆ, 60 ಬೆಡ್ಡುಗಳ ಟ್ರಾಮಾ ಆಸ್ಪತ್ರೆ ಸೇರಿ ಎಲ್ಲ ಅತ್ಯಾಧುನಿಕ ಸೌಲಭ್ಯಗಳನ್ನು ಹೊಂದಿದೆ. ಇಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಪ್ರಾರಂಭಿಸಿದರೆ ಯಾವುದೇ ಸಮಸ್ಯೆ ಆಗುವುದಿಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕು ಅಧ್ಯಕ್ಷ ಸಂಗಯ್ಯ ಸಾರಂಗಮಠ, ಮಲ್ಲಿಕಾರ್ಜುನ ಹಿರೇಮಠ ನಾಲತವಾಡ, ಒಕ್ಕೂಟದ ಅಧ್ಯಕ್ಷೆ ಸಂಗಮ್ಮ ಬಿರಾದಾರ, ಉಪಾಧ್ಯಕ್ಷೆ ಶರಣಮ್ಮ ಅಂಗಡಿ, ಮನರೇಗಾ ಅನುಷ್ಠಾನ ಅಭಿಯಾನದ ತಾಲೂಕು ಸಂಚಾಲಕಿ ಕಸ್ತೂರಿ ಬಾಗಲಕೋಟೆ, ಕರ್ನಾಟಕ ಜನಾರೋಗ್ಯ ಚಳವಳಿಯ ಉತ್ತರ ಕರ್ನಾಟಕ ಸಂಚಾಲಕಿ ಟೀನಾ ಝೇವಿಯರ್, ಜನವೇದಿ ನಾಯಕರಾದ ಶರಣಗೌಡ ವಣಿಕ್ಯಾಳ, ಹಣಮಂತ ಮಾದರ, ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ಬಂದಗೀಸಾಬ, ಭಾರತಿ ನಿಡಗುಂದಿ, ಮದ್ದುರಾಜ ಎಸ್.ಎಂ., ಅನ್ನಕ್ಕ ಬಿರಾದಾರ, ಜಿಲ್ಲಾ ಹೋರಾಟ ಸಮಿತಿ ಸದಸ್ಯರು, ಗ್ರಾಪಂ ಪ್ರತಿನಿಧಿಗಳು, ಮಹಿಳಾ ಸಂಘಟನೆಗಳ ಸದಸ್ಯರು, ಆರೋಗ್ಯ ಹಕ್ಕುಗಳ ಹೋರಾಟಗಾರರು, ಆಶಾ ಕಾರ್ಯಕರ್ತೆಯರು ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

# ನಾಳೆ ವಿದ್ಯುತ್ ವ್ಯತ್ಯಯ

**ಬೆಳಗಾವಿ:** ಕ.ವಿ.ಪ್ರ.ನಿ.ನಿ ವತಿಯಿಂದ 3 ನೇ ತ್ರೈಮಾಸಿಕ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ 110 ಕೆ.ವ್ಹಿ ಕಣಬರ್ಗಿ ಉಪಕೇಂದ್ರದಿಂದ ಸರಬರಾಜು ಆಗುವ ಪಿ. ಎಲ್. ನಂ. 910 ರಿಂದ ಪಿ.ಎಲ್. ನಂ 1365 ಆಟೋ ನಗರ, ಕಣಬರ್ಗಿ ನಗರ, ಪಿ.ಎಲ್. ನಂ. 1125 ರಿಂದ ಪಿ.ಎಲ್. ನಂ 4087 ರಾಮತೀರ್ಥ ನಗರ, ಪಿ.ಎಲ್. ನಂ. 1 ರಿಂದ ಪಿ.ಎಲ್. ನಂ 1124 ರಾಮತೀರ್ಥ ನಗರ, ರೆವಿನೀವ್ ಕಾಲೋನಿ, ರೇಣುಕಾ ನಗರ, ಕಾಕತಿ, ಮುತ್ಯಾನಟ್ಟಿ, ಬಸವನ ಕೂಡಚಿ, ಪಿ.ಎಲ್. ನಂ. 01 ರಿಂದ ಪಿ.ಎಲ್. ನಂ 909 ಆಟೋ ನಗರ ಏರಿಯಾಗಳಿಗೆ ಅಕ್ಟೋಬರ, 12, 2025 ರಂದು ಸಂಜೆ 4 ಗಂಟೆವರೆಗೆ ವಿದ್ಯುತ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ನಗರ ವಿಭಾಗದ ಕಾರ್ಯ ಮತ್ತು ಪಾಲನೆ ಕಾರ್ಯನಿರ್ವಾಹಕ ಅಭಿಯಂತರು(ವಿ) ತಿಳಿಸಿದ್ದಾರೆ.

# ಕ್ರೀಡೆಗಳು ಮಾನಸಿಕ ದೈಹಿಕ ಬೆಳವಣಿಗೆಗೆ ಸಹಕಾರಿ



**ಬೆಳಗಾವಿ:** ಕ್ರೀಡಾ ಚಟುವಟಿಕೆಗಳು ದೈಹಿಕ ಚಟುವಟಿಕೆಗಳ ಜತೆಗೆ ಮಾನಸಿಕ ಆರೋಗ್ಯ ಉತ್ತಮ ಪಡಿಸಲಿದೆ. ಮನರಂಜನೆಯ ಜತೆಗೆ ದೈಹಿಕ ಆರೋಗ್ಯಕ್ಕೂ ಸಹಕಾರಿಯಾಗಲಿದೆ ಎಂದು ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ನೂತನ ಉಪಾಧ್ಯಕ್ಷರಾದ ಸುನೀಲ್ ಹನ್ನಮಣ್ಣನವರ್ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾದ ವಾ.ಕ.ರ.ಸಾ.ಸಂಸ್ಥೆ ಬೆಳಗಾವಿ ವಿಭಾಗದ 2025–26ನೇ ಸಾಲಿನ ವಿಭಾಗ ಮಟ್ಟದ ಕ್ರೀಡಾ ಮತ್ತು ಕಲಾ ಚಟುವಟಿಕೆಗಳ ಸ್ಪರ್ಧೆಯ ಕ್ರೀಡಾಕೂಟ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.


ಮನಸ್ಸಿನ ಸಮತೋಲನ ಕಾಯ್ದುಕೊಳ್ಳಲು ಇಂತಹ ಕ್ರೀಡೆಯನ್ನು ರೂಪಿಸಿಕೊಳ್ಳಬೇಕು.ಮನುಷ್ಯ ಒಂದಿಲ್ಲೊಂದು ಕ್ರೀಡೆಯಲ್ಲಿ ತೊಡಗಿಕೊಳ್ಳಬೇಕು ಅದು ಅವನ ಆರೋಗ್ಯವನ್ನು ಕಾಪಾಡಿಕೊಳ್ಳಲು ನೆರವಾಗುತ್ತದೆಯಲ್ಲದೆ, ಅವನ ಮನಸ್ಸು ಸದೃಢವಾಗಿಡಲು ಸಹಕರಿಸುತ್ತದೆ. ಮತ್ತು

ಕ್ರೀಡೆಗಳು ಮನುಷ್ಯರಿಗೆ ಮಾನಸಿಕ, ದೈಹಿಕ ಬೆಳವಣಿಗೆಗೆ ಜೊತೆಗೆ ಒತ್ತಡ ಬದುಕಿಗೆ ಸಹಕಾರಿಯಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ನಾವು ನಿತ್ಯವೂ ನೂರಾರು ಕಿಲೋಮೀಟರ್ ಪ್ರಯಾಣ ಬೆಳೆಸುತ್ತೇವೆ ಅದರಲ್ಲಿ ಪ್ರಯಾಣಿಕರ ಜೊತೆ ಅನ್ಯೋನ್ಯತೆ ಯಿ ಂ ರ ದ ಇರಬೇಕು. ಇವೆಲ್ಲವನ್ನು ಸಂಬಾಳಿಸಿಕೊಂಡು ಸುರಕ್ಷತೆದೆಡೆ ಸಾಗಬೇಕಾದರೆ ಮನಸ್ಸು ಬಹಳಷ್ಟು ಹತ್ತೋಟ್ಟಿಯಲ್ಲಿ ಇರಬೇಕು. ಹೀಗಾಗಿ ಕ್ರೀಡೆಗಳು ಆಡಿದಾಗ ಮಾತ್ರ ನಮ್ಮ ಮನಸ್ಸಿಗೆ ನೆಮ್ಮದಿ ನೀಡುತ್ತೇವೆ ಎಂದರು.

ಅಧ್ಯಕ್ಷತೆಯನ್ನು ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾಗಳಾದ ಕೆಂಪಣ್ಣ ಗುಡೆನ್ನವರ ರವರು ವಹಿಸಿದ್ದರು. ಅಧಿಕಾರಿಗಳಾದ ನಿತಿನ್ ಗಡದೆ, ದೇವಕ್ಕ ನಾಯಕ್, ನಾರಾಯಣ ತಿಮ್ಮರೆಡ್ಡಿ, ಸಂಜಯ ಮಾಸುಮಳೆ, ನಾಗಮಣಿ ಭೋವಿ, ದಶರಥ ಕೆಳಗೇರಿ, ಸರ್ವೇಶ್.ಆರ್., ಸುನೀತಾ ಜೋಶಿ, ಸಂಜಯ್ ರಾಜೇಶ್, ಶಶಿಕಾಂತ್ ಹಂಚಿನಾಲ್ಕರ್, ಸಂತೋಷ್ ಬೆನಕಿನಕೊಪ್ಪ, ಹಾಗೂ ಕ್ರೀಡಾ ಮತ್ತು ಕಲಾ ಸಮಿತಿಯ ಸದಸ್ಯರಾದ ಸುರೇಶ ಯರಡ್ಡಿ ಮತ್ತು ಉಮೇಶ್ ಹಾಗೂ ವಿಭಾಗದ ಎಲ್ಲಾ ಕ್ರೀಡಾಪಟುಗಳು ಭಾಗವಹಿಸಿದ್ದರು.

# ಬೀಜೋಪಚಾರ ಆಂದೋಲನಕ್ಕೆ ಚಾಲನೆ




**ಮುದ್ದೇಬಿಹಾಳ:** ಕಡಲೆ ಬೆಳೆಯಲ್ಲಿ ಬೀಜೋಪಚಾರ ಮಾಡುವ ಪದ್ಧತಿಯನ್ನು ರೈತರಿಗೆ ತಿಳಿಸಿದರು. ಬಿತ್ತನೆಗೆ ಮುಂಚಿತವಾಗಿ ಬೀಜಗಳಲ್ಲಿ ಬರ ನಿರೋಧಕತೆ ಹೆಚ್ಚಿಸಲು ಬೀಜಗಳನ್ನು ಶೇಕಡಾ 2 ರ ಕ್ಯಾಲ್ಸಿಯಂ ಕ್ಲೋರೈಡ್ ದ್ರಾವಣದಲ್ಲಿ 30 ನಿಮಿಷ ನೆನೆಸಿ ನಂತರ ನೆರಳಿನಲ್ಲಿ ಕನಿಷ್ಠ 7 ಗಂಟೆ ಒಣಗಿಸಬೇಕು.

ಪ್ರತಿ ಕೆಜಿ ಬಿತ್ತನೆ ಬೀಜಕ್ಕೆ 03 ಗ್ರಾಂ ಶಿಲಿಂದ್ರ ಮಿಶ್ರಣವಾದ ಕಾರ್ಬೆಡೈಜಿಮ್ ಶೇ.12 + ಮ್ಯಾಂಕೋಜೇಬ್ ಶೇ.64 ಅಥವಾ 10 ಗ್ರಾಂ ಜೈವಿಕ ಗೊಬ್ಬರಗಳಾದ ಟ್ರೈಕೋಡರ್ಮ ಹಾಗೂ ರೈಜೋಬಿಯಂ ಗಳಿಂದ ಬೀಜೋಪಚಾರ ಮಾಡಿ ಬಿತ್ತನೆ ಕೈಗೊಳ್ಳಬೇಕೆಂದು ಕೃಷಿ ಅಧಿಕಾರಿ ಸೋಮನಗೌಡ ಬಿರಾದಾರ ಹೇಳಿದರು.

ಇಲ್ಲಿನ ರೈತ ಸಂಪರ್ಕ ಕೇಂದ್ರ ಮುದ್ದೇಬಿಹಾಳದಲ್ಲಿ ಬೀಜೋಪಚಾರ ಆಂದೋಲನ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದ, ಬೀಜೋಪಚಾರ ಬಗ್ಗೆ ರೈತರಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ರೈತರಾದ ನಿಂಗಪ್ಪ ಸಂಗಪ್ಪ ಹರಿಂದ್ರಾಳ, ಪರಸಪ್ಪ ಗುಬಚಿ, ಮಲ್ಲಿಕಸಾಬ್ ಉಪನಾಳ, ಮಲ್ಲನಗೌಡ ಬಿರಾದಾರ, ಪಾರ್ವತೆವ್ವ ಬಿರಾದಾರ ಮತ್ತು ಅಕೌಂಟೆಂಟ್ ನಿರಂಜನ್ ಬಡಿಗೇರ, ಕೃಷಿ ಸಂಜೀವಿನಿ ತಾಂತ್ರಿಕ ಕಾಶೀನಾಥ್ ಹೋಳಿ,ತಾಂತ್ರಿಕ ಉತ್ತೇಜಕರು, ಹಾಗೂ ಮುದ್ದೇಬಿಹಾಳ ಹೋಬಳಿ ವ್ಯಾಪ್ತಿಯ ಸುತ್ತಮುತ್ತಲಿನ ಗ್ರಾಮಗಳ ರೈತರು ಭಾಗವಹಿಸಿದ್ದರು.

# ಅ.28 ರಂದು ಸಾರಿಗೆ ಅದಾಲತ್

**ಹುಬ್ಬಳ್ಳಿ:** ಧಾರವಾಡ ಪೂರ್ವ ಪ್ರಾದೇಶಿಕ ಸಾರಿಗೆ ಕಛೇರಿಗೆ ಸಂಬಂಧಪಟ್ಟಂತೆ ಸಾರ್ವಜನಿಕರ ಕುಂದುಕೊರತೆ ಹಾಗೂ ಸಮಸ್ಯೆಗಳ ಕುರಿತು ಸಾರಿಗೆ ಅದಾಲತ್‌ನ್ನು ಅಕ್ಟೋಬರ್ 28ರಂದು ಸಂಜೆ 4 ಗಂಟೆಗೆ ಗಬ್ಬೂರಿನ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಸಾರಿಗೆ ಅದಾಲತಗೆ ಹಾಜರಾಗಿ ತಮ್ಮ ಅಹವಾಲುಗಳನ್ನು ಲಿಖಿತ ರೂಪದಲ್ಲಿ ಸಲ್ಲಿಸುವಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಾದ ಶ್ರೀಕಾಂತ ಬಡಿಗೇರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಕೊಪ್ಪಳ:** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಮತ್ತು ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಬೆಂಗಳೂರು ಇವರ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ಕೊಪ್ಪಳ ಇವರು ಸ್ವಯಂ ಉದ್ಯೋಗ ಪ್ರಾರಂಭಿಸುವ ಪರಿಶಿಷ್ಟ ಜಾತಿಯ ನಿರುದ್ಯೋಗಿ ಯುವತಿಯರಿಗೆ ಮತ್ತು ಉದ್ಯಮ ಆಕಾಂಕ್ಷಿಗಳಿಗೆ ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ಅರ್ಜಿ ಸಲ್ಲಿಕೆ ಅವಧಿಯನ್ನು ಅಕ್ಟೋಬರ್ 13 ರವರೆಗೆ ವಿಸ್ತರಿಸಲಾಗಿದೆ. ಈ ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗದ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ ಹಾಗೂ ಉದ್ಯಮ ನಿರ್ವಹಣೆ, ಉದ್ಯಮಶೀಲತೆ, ಉದ್ಯಮ ಪ್ರಾರಂಭದ ಹಂತಗಳು, ಉದ್ಯಮಗಳನ್ನು ಪ್ರಾರಂಭಿಸಲು ಸರ್ಕಾರದ ಯೋಜನೆಗಳು, ಸಾಲ ಸೌಲಭ್ಯಗಳು, ಬ್ಯಾಂಕ್ ಬಗ್ಗೆ, ಜಾಹೀರಾತು ಮತ್ತು ಮಾರುಕಟ್ಟೆಯ ಕುರಿತು ನೋಂದಣಿ ಮಾಡುವ ವಿಧಾನಗಳು, ಯಶಸ್ವಿ ಉದ್ಯಮಿಗಳ ಜೊತೆ ಸಂವಾದ, ಉದ್ಯಮ ನಿರ್ವಹಣೆ ಮಾಡುವ ವಿಧಾನಗಳು ಮತ್ತು ಇತ್ಯಾದಿ ವಿಷಯಗಳ ಕುರಿತು ತರಬೇತಿ ನೀಡಲಾಗುತ್ತಿದ್ದು, ಇದಕ್ಕಾಗಿ ಕೊಪ್ಪಳ ಜಿಲ್ಲೆಯ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು 18 ರಿಂದ 45 ವರ್ಷ ವಯಸ್ಸಿನವರಾಗಿರಬೇಕು ಹಾಗೂ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆ ಹೊಂದಿರಬೇಕು. ಆಸಕ್ತರು ಅ.13 ರೊಳಗಾಗಿ ಅರ್ಜಿಯನ್ನು ಜಂಟಿ ನಿರ್ದೇಶಕರು, ಸಿಡಾಕ್, ಜಿಲ್ಲಾ ಕೈಗಾರಿಕಾ ಕೇಂದ್ರ ಕಚೇರಿ ಆವರಣ, ನಗರಸಭೆ ಎದುರುಗಡೆ, ಕೊಪ್ಪಳ ಇಲ್ಲಿಗೆ ಸಲ್ಲಿಸಬೇಕು. ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ, ರೇಶನ್ ಕಾರ್ಡ್ಗಳ ಝರಾಕ್ಸ್ ಪ್ರತಿಗಳು, 2 ಪಾಸ್‌ಪೋರ್ಟ್ ಫೋಟೋಗಳೊಂದಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ 7204016012 ಈ ನಂಬರಿಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ಸಿಡಾಕ್‌ನ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇರ ಸಾಲ ಯೋಜನೆಯಡಿ ಅರ್ಜಿ ಆಹ್ವಾನ

**ಕೊಪ್ಪಳ:** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ 2025–26ನೇ ಸಾಲಿಗೆ ವಿಪ್ರ ಸ್ವ ಉದ್ಯಮ ನೇರ ಸಾಲ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಲ್ಲಿ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಸ್ವಯಂ ಉದ್ಯೋಗ ಕೈಗೊಳ್ಳಲು ಮಂಡಳಿಯ ವತಿಯಿಂದ ನೇರವಾಗಿ ಸಾಲ, ಸಹಾಯಧನ ಮಂಜೂರು ಮಾಡಲಾಗುವುದು. ಹಲವು ವೃತ್ತಿಗಳಾದ ಹಸು ಸಾಕಾಣಿಕೆ, ಗುಡಿಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಟ್ಯಾಕ್ಸಿ ಇತ್ಯಾದಿ ವ್ಯಾಪಾರ ವಹಿವಾಟುಗಳನ್ನು ಕೈಗೊಳ್ಳಲು ಕನಿಷ್ಠ ರೂ.1 ಲಕ್ಷ ಘಟಕವೆಚ್ಚಕ್ಕೆ ರೂ.20,000/– ಗಳ ಸಹಾಯಧನ ಹಾಗೂ ಗರಿಷ್ಠ ರೂ.2 ಲಕ್ಷಗಳ ಘಟಕವೆಚ್ಚಕ್ಕೆ ರೂ. 40,000/– ಗಳ ಸಹಾಯಧನ ನೀಡಿ ಆರ್ಥಿಕ ನೆರವು ಒದಗಿಸಲಾಗುವುದು. ಉಳಿಕೆ ಸಾಲದ ಮೊತ್ತಕ್ಕೆ ಶೇ.4 ರಂತೆ ವಾರ್ಷಿಕ ಬಡ್ಡಿ ವಿಧಿಸಲಾಗುವುದು.

ಅರ್ಜಿ ಸಲ್ಲಿಸುವ ಫಲಾನುಭವಿಗಳು ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗಕ್ಕೆ ಸೇರಿದವರಾಗಿದ್ದು, ಚಾಲ್ತಿಯಲ್ಲಿರುವ ಆರ್ಥಿಕವಾಗಿ ಹಿಂದುಳಿದ ಪ್ರಮಾಣಪತ್ರ (ಇಡಬ್ಲೂಎಸ್ ಪ್ರಮಾಣ ಪತ್ರ) ಹೊಂದಿರಬೇಕು. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. 18 ರಿಂದ 65 ವರ್ಷದ ಒಳಗಿನವರಾಗಿರಬೇಕು. ಒಂದು ಕುಟುಂಬದಿಂದ ಒಬ್ಬರು ಮಾತ್ರ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಮಹಿಳೆಯರಿಗೆ ಶೇ.33, ವಿಶೇಷ ಚೇತನರಿಗೆ ಶೇ.5 ಮೀಸಲಾತಿಯನ್ನು ನೀಡಲಾಗುವುದು. ಅರ್ಜಿದಾರರ ಆಧಾರ್‌ಗೆ ಮೊಬೈಲ್ ಸಂಖ್ಯೆ ಲಿಂಕ್ ಆಗಿರಬೇಕು ಮತ್ತು ಬ್ಯಾಂಕ್ ಖಾತೆ ಸೀಡ್ ಆಗಿರಬೇಕು. ಅರ್ಜಿಯನ್ನು ತಿww. ksbdb.karnataka.gov.in ವೆಬ್‌ಸೈಟ್‌ನಲ್ಲಿ ಅಕ್ಟೋಬರ್ 31 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 8762249230 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಗವಿಶಂಕರ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಿ.ಬಿ.ಅಸೂಟಿ ನೇತೃತ್ವದಲ್ಲಿ ಪಂಚ ಗ್ಯಾರಂಟಿ ಪ್ರಗತಿ ಪರಿಶೀಲನೆ

## ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಗದಗ ಜಿಲ್ಲೆ ಸಾಧನೆ

**ಗದಗ:** ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನ ಕುರಿತಂತೆ ಸೆಪ್ಟೆಂಬರ್ ಅಂತ್ಯದವರೆಗಿನ ಪ್ರಗತಿ ಪರಿಶೀಲನಾ ಸಭೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ.ಅಸೂಟಿ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಜರುಗಿತು.



ಜಿಲ್ಲಾಧ್ಯಕ್ಷ ಬಿ.ಬಿ.ಅಸೂಟಿ ಮಾತನಾಡಿ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಡಿ ಗದಗ ಜಿಲ್ಲೆಯಲ್ಲಿ ಉತ್ತಮ ಸಾಧನೆ ದಾಖಲಾಗಿದೆ. ಸೆಪ್ಟೆಂಬರ್ ಅಂತ್ಯದವರೆಗೆ ಜಿಲ್ಲೆಯಾದ್ಯಂತ ಯೋಜನೆಗಳ ಅನುಷ್ಠಾನ ಶೇ.99ರಷ್ಟು ಯಶಸ್ವಿಯಾಗಿ ನಡೆದಿದೆ.

ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆ ಅಡಿ 2.57 ಲಕ್ಷ ಫಲಾನುಭವಿಗಳ ಪೈಕಿ ಶೇ.99.03ರಷ್ಟು ಮಹಿಳೆಯರಿಗೆ ಪ್ರಯೋಜನ ತಲುಪಿದ್ದು, ರೂ.986.42 ಕೋಟಿ ಮೊತ್ತ ಬಿಡುಗಡೆಗೊಂಡಿದೆ. ಅನ್ನಭಾಗ್ಯ ಯೋಜನೆ ಅಡಿ 2.34 ಲಕ್ಷ ಕುಟುಂಬಗಳಿಗೆ ಶೇ.100ರಷ್ಟು ಅಕ್ಕಿ ವಿತರಣೆಯಾಗಿದ್ದು ರೂ.216.82 ಕೋಟಿಯ ಸಹಾಯ ಲಭಿಸಿದೆ.

ಅದೇ ರೀತಿಯಲ್ಲಿ ಗೃಹಜ್ಯೋತಿ ಯೋಜನೆ ಅಡಿ 2.73 ಲಕ್ಷ ಮನೆಗಳಿಗೆ ಶೇ.98.46ರಷ್ಟು ಉಚಿತ ವಿದ್ಯುತ್ ಪ್ರಯೋಜನ ದೊರೆತಿದ್ದು, ರೂ.247.24 ಕೋಟಿ ಮೊತ್ತ ಬಿಡುಗಡೆಗೊಂಡಿದೆ. ಯುವ ನಿಧಿ ಯೋಜನೆ ಅಡಿ 5,800 ಯುವಕರು ಶೇ.100ರಷ್ಟು ಸಹಾಯವನ್ನು ಪಡೆದಿದ್ದು, ರೂ.12.92 ಕೋಟಿಯ ನೆರವು ನೀಡಲಾಗಿದೆ. ಇದಲ್ಲದೆ ಶಕ್ತಿ ಯೋಜನೆ ಅಡಿ ಮಹಿಳೆಯರಿಗೆ ಉಚಿತ ಪ್ರಯಾಣದ ಸೌಲಭ್ಯ ಶೇ.100ರಷ್ಟು ಅನುಷ್ಠಾನಗೊಂಡಿದ್ದು, ರೂ.404.12 ಕೋಟಿಯಷ್ಟು ಪ್ರಯೋಜನ ದೊರೆತಿದೆ.

ಒಟ್ಟಾರೆಯಾಗಿ ಪಂಚ ಗ್ಯಾರಂಟಿ ಯೋಜನೆಗಳ ಅಡಿ ಜಿಲ್ಲೆಯ ಜನರಿಗೆ ರೂ.1867.52 ಕೋಟಿಗಳಷ್ಟು ಹಣ ಪ್ರಯೋಜನ ತಲುಪಿದ್ದು, ಸಾಮಾಜಿಕ ಭದ್ರತೆ ಮತ್ತು ಆರ್ಥಿಕ ಶಕ್ತಿಕರಣದತ್ತ ಜಿಲ್ಲೆ ದೃಢ ಹೆಜ್ಜೆ ಇಟ್ಟಿದೆ ಎಂದು ಬಿ.ಬಿ.ಅಸೂಟಿ ಅವರು ಅಭಿಪ್ರಾಯಪಟ್ಟರು.

**ಶಿಷ್ಟಾಚಾರ ಪಾಲನೆಯಾಗಲಿ:** ತಾಲೂಕಾ ಮಟ್ಟದ ಹಾಗೂ ಜಿಲ್ಲಾ ಮಟ್ಟದ ಸರ್ಕಾರಿ ಸಭೆ ಸಮಾರಂಭಗಳಲ್ಲಿ ಗ್ಯಾರಂಟಿ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರನ್ನು ಶಿಷ್ಟಾಚಾರದಂತೆ ಇಲಾಖಾಧಿಕಾರಿಗಳು ಆಹ್ವಾನಿಸಬೇಕು. ಈ ಕುರಿತು ಜಿಲ್ಲಾ ಪಂಚಾಯತ್ ದಿಂದ ಸಂಬಂಧಿತ ಇಲಾಖೆಗಳಿಗೆ ಸರ್ಕಾರದ ಸುತ್ತೋಲೆ ತಲುಪಿಸಲು ಸೂಚಿಸಿದರು.

**ಗೈರಾದವರಿಗೆ ನೋಟೀಸ್ :** ಗ್ಯಾರಂಟಿ ಸಮಿತಿಗೆ ಖುದ್ದಾಗಿ ಅಧಿಕಾರಿಗಳು ನಿಗದಿಪಡಿಸಿದ ಸಮಯಕ್ಕೆ ಅಗತ್ಯ ದಾಖಲೆಗಳೊಂದಿಗೆ ಹಾಜರಾಗಬೇಕು. ಅನಿವಾರ್ಯ ಸಂದರ್ಭದಲ್ಲಿ ಅನುಮತಿಯೊಂದಿಗೆ ತೆರಳಲು ಅವಕಾಶ ನೀಡಲಾಗುವುದು. ವಿನಾಕಾರಣ ಸಭೆಗೆ ಗೈರಾದ ಅಧಿಕಾರಿಗಳಿಗೆ ಶೋಕಾಸ್ ನೋಟೀಸ್ ಜಾರಿಗೊಳಿಸುವಂತೆ ಜಿ.ಪಂ. ಉಪಕಾರ್ಯದರ್ಶಿಗಳಿಗೆ ಬಿ.ಬಿ.ಅಸೂಟಿ ಅವರು ನಿರ್ದೇಶನ ನೀಡಿದರು.

**ಮಿತಿ ಅಧಿಕ:** ಬಿಪಿಎಲ್ ಕುಟುಂಬಕ್ಕೆ ಈವರೆಗೆ ಇದ್ದ 1.20 ಲಕ್ಷ ರೂ ಆರ್ಥಿಕ ಮಿತಿಯನ್ನು 2.50 ಲಕ್ಷ ರೂ ಗಳಿಗೆ ಅಧಿಕಗೊಳಿಸುವಂತೆ ಜಿಲ್ಲಾ ಗ್ಯಾರಂಟಿ ಸಮಿತಿ ಸಭೆಯಲ್ಲಿ ಒಮ್ಮತದ ನಿರ್ಣಯ ಕೈಗೊಳ್ಳುವ ಮೂಲಕ ಸರ್ಕಾರಕ್ಕೆ ಸಭೆಯಲ್ಲಿನ ನಡಾವಳಿಗಳನ್ನು ಸಲ್ಲಿಸುವಂತೆ ತಿಳಿಸಲಾಯಿತು. ಸಭೆಯಲ್ಲಿ ಯಲಬುರ್ಗಾದಿಂದ ಗಜೇಂದ್ರಗಡಕ್ಕೆ ಬೆಳಿಗ್ಗೆ ಬಸ್ ಬರದಿರುವ ಕುರಿತು ಹಾಗೂ ಗದಗದಿಂದ ಗಜೇಂದ್ರಗಡಕ್ಕೆ ಸಾಯಂಕಾಲ ಹೆಚ್ಚುವರಿ ಬಸ್ ವ್ಯವಸ್ಥೆ ಕಲ್ಪಿಸುವ ಕುರಿತು ಚರ್ಚಿಸಲಾಯಿತು. ರೇಶನ್ ಕಾರ್ಡ ರದ್ದುಪಡಿಸಿದವರ ಪಟ್ಟಿಯನ್ನು ನೋಟೀಸ ಬೋರ್ಡಿನಲ್ಲಿ ಪ್ರದರ್ಶಿಸುವ ಜೊತೆಗೆ ರದ್ದತಿಗೆ ಸರಿಯಾದ ಕಾರಣವನ್ನು ತಿಳಿಸಿಕೊಡಬೇಕು. ಇಲ್ಲದಿದ್ದಲ್ಲಿ ಫಲಾನುಭವಿಗಳಿಗೆ ಗೊಂದಲ ಸೃಷ್ಟಿಯಾಗುತ್ತದೆ ಎಂದರು. ರೇಶನ್ ಕಾರ್ಡ ಬಿಪಿಎಲ್‌ದಿಂದ ಎಪಿಎಲ್‌ಗೆ ಬದಲಾವಣೆಗೊಂಡಲ್ಲಿ ಕುಟುಂಬದ ಯಜಮಾನಿಗೆ ಗೃಹಲಕ್ಷಿ ?ಮೀ ಮೊತ್ತ ಪಾವತಿ ರದ್ದಾಗುವುದಿಲ್ಲ. ಈ ಬಗ್ಗೆ ಸಾರ್ವಜನಿಕರಲ್ಲಿ ಗೊಂದಲ ವಾತಾವರಣವಿದ್ದು ಅಧಿಕಾರಿಗಳು ಅಂತಹವರಿಗೆ ಅರಿವು ನೀಡಬೇಕೆಂದು ತಿಳಿಸಿದರು. ಈವರೆಗೆ ಗೃಹಲಕ್ಷ್ಮೀ ಯೋಜನೆ ಯಡಿ ಅರ್ಜಿ ಹಾಕಲು ಇದ್ದ ತಾಂತ್ರಿಕ ಸಮಸ್ಯೆ ಪರಿಹಾರವಾಗಿದೆ. ಆದರೆ ಆಹಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳ ಸಮನ್ವಯತೆಯ ಕೊರತೆಯಿಂದ ಗೃಹಲಕ್ಷ್ಮೀ ಯೋಜನೆಯಡಿ ಅರ್ಹರಿಗೆ ಸೌಲಭ್ಯ ವಿಳಂಬವಾಗಬಾರದು ಎಂದು ಸೂಚಿಸಿದರು.

### ಬಸ್ ನಿಲ್ದಾಣಗಳ ಸ್ವಚ್ಛತೆಗೆ ಆದ್ಯತೆ

ಜಿಲ್ಲೆಯ ಸಾರಿಗೆ ಬಸ್ ನಿಲ್ದಾಣಗಳ ಅವ್ಯವಸ್ಥೆ ಕುರಿತಂತೆ ಮಾತನಾಡಿದ ಅವರು ಎಲ್ಲ ತಾಲೂಕಾ ಹಾಗೂ ಹೋಬಳಿ ಮಟ್ಟದ ಬಸ್ ನಿಲ್ದಾಣಗಳಲ್ಲಿನ ಕಸ ವಿಲೇವಾರಿ ಆಗಬೇಕು. ಸಾರ್ವಜನಿಕರಿಗೆ ಉತ್ತಮ ವಾತಾವರಣ ಕಲ್ಪಿಸಿಕೊಡಬೇಕು ಜೊತೆಗೆ ಆಸನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಲಭ್ಯವಿರುವಂತೆ ಸಂಬಂಧಿತ ಅಧಿಕಾರಿಗಳು ಗಮನಹರಿಸುವಂತೆ ಸೂಚಿಸಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳಾದ ನೀಲಮ್ಮ ಬೋಳನವರ, ಪಿ.ಬಿ.ಅಳಗವಾಡಿ, ದೀಪಕ ಲಮಾಣಿ, ಫಕ್ರುಸಾಬ ಚಿಕ್ಕಮಣ್ಣೂರ, ಸದಸ್ಯರುಗಳಾದ ವಿವೇಕ ಯಾವಗಲ್ , ಶರಣಪ್ಪ ಬೆಟಗೇರಿ, ಶಿವನಗೌಡ ಪಾಟೀಲ, ನಾಗರಾಜ ಮಡಿವಾಳರ, ದೇವಪ್ಪ ಮೋರನಾಳ, ಪುಲಕೇಶಗೌಡ ಪಾಟೀಲ, ಈಶಣ್ಣ ಹುಣಸೀಕಟ್ಟಿ, ವೀರಯ್ಯ ಮಠಪತಿ, ಆರ್.ಆರ್.ಗಡ್ಡದ್ದೇವರಮಠ ಸೇರಿದಂತೆ ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಮಲ್ಲಿಕಾರ್ಜುನ ಚಳಗೇರಿ, ಗ್ಯಾರಂಟಿ ಯೋಜನೆ ಅನುಷ್ಠಾನ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ವಿವಿಧ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

**ಧಾರವಾಡ:** ಕರ್ನಾಟಕ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 6 ರಿಂದ 18 ವರ್ಷದೊಳಗಿನ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ ಬಾಲಕರಿಗೆ ಹೊಯ್ಸಳ ಮತ್ತು ಬಾಲಕಿಯರಿಗೆ ಕೆಳದಿ ಚೆನ್ನಮ್ಮ ಪ್ರಶಸ್ತಿಗಾಗಿ ಅರ್ಹ ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವಂತಹ ವ್ಯಕ್ತಿಗಳಿಗೆ ತಲಾ ರೂ. 25,000 ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಹಾಗೂ ಸಂಸ್ಥೆಗಳಿಗೆ ತಲಾ ರೂ. ಒಂದು ಲಕ್ಷ ನಗದು ಬಹುಮಾನ ಹಾಗೂ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಿದೆ. 2025–26ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಧಾರವಾಡ ಉಪನಿರ್ದೇಶಕರ ಕಛೇರಿಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಅಕ್ಟೋಬರ್ 20, 2025 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836–2447850 ಗೆ ಸಂಪರ್ಕಿಸಬಹುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀಮಾಳಿಂಗರಾಯ ಜಾತ್ರೆಗೆ ವಿಶೇಷ ಸಾರಿಗೆ ವ್ಯವಸ್ಥೆ

**ವಿಜಯಪುರ:** ಮಹಾರಾಷ್ಟ್ರದ ಜತ್ ತಾಲೂಕಿನ ಹುಲಜಂತಿ ಗ್ರಾಮದಲ್ಲಿ ಅಕ್ಟೋಬರ್ 17 ರಿಂದ 23ರವರೆಗೆ ಜರುಗುವ ಶ್ರೀ ಮಾಳಿಂಗರಾಯ ದೇವರ ಜಾತ್ರೆ ಅಂಗವಾಗಿ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಜಯಪುರ ವಿಭಾಗದಿಂದ ವಿಶೇಷ ಸಾರಿಗೆ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ಸಾರ್ವಜನಿಕರಿಗೆ ಉತ್ತಮ ಸಾರಿಗೆ ಸೌಲಭ್ಯ ಕಲ್ಪಿಸುವ ದೃಷ್ಟಿಯಿಂದ ವಿಜಯಪುರ ವಿಭಾಗದ ವಿಜಯಪುರ, ಇಂಡಿ, ಚಡಚಣ,ಸಿಂದಗಿ, ಮುದ್ದೇಬಿಹಾಳ,ತಾಳಿಕೋಟೆ ಹಾಗೂ ಬಸವನಬಾಗೇವಾಡಿ ಬಸ್ ನಿಲ್ದಾಣದಿಂದ ಹೆಚ್ಚುವರಿ ವಿಶೇಷ ಬಸ್ ಕಾರ್ಯಾಚರಣೆ ಮಾಡಲಾಗುವುದು.

ಪ್ರಯಾಣಿಕರು ಸಾರಿಗೆ ಸೌಲಭ್ಯಕ್ಕಾಗಿ ಹಾಗೂ ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಘಟಕ ವ್ಯವಸ್ಥಾಪಕರು ವಿಜಯಪುರ–1: ಮೊ: 7760992263, ವಿಜಯಪುರ–2 ಮೊ: 7760992264, ಇಂಡಿ ಮೊ: 7760992265, ಸಿಂದಗಿ ಮೊ: 7760992266, ಮುದ್ದೇಬಿಹಾಳ ಮೊ: 7760992267, ತಾಳಿಕೋಟ ಮೊ: 7760992268, ಬಸವನ ಬಾಗೇವಾಡಿ ಮೊ: 7760992269, ಕೇಂದ್ರ ಬಸ್ ನಿಲ್ದಾಣ ವಿಜಯಪುರ ದೂ: 08352–251344 ಹಾಗೂ ಮೊ: 7760992258 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ನಾರಾಯಣಪ್ಪ ಕುರುಬರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ

**ಬೆಳಗಾವಿ:** ಅಥಣಿಯ ಜೆ. ಇ. ಸಂಸ್ಥೆಯ ಕೆ. ಎ. ಲೋಕಾಪುರ ಪದವಿ ಮಹಾವಿದ್ಯಾಲಯ ಹಾಗೂ ಬಸವರಾಜ ಕಟ್ಟೀಮನಿ ಪ್ರತಿಷ್ಠಾನದಿಂದ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾದ ಬೆಳಗಾವಿಯಿಂದ ಕಥೆ ಹೇಳೂಣು ಎಂಬ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಡಾ. ಜೆ. ಪಿ. ದೊಡ್ಡಮನಿ ಅವರು ಮಾತನಾಡಿ, ಬಸವರಾಜ ಕಟ್ಟಿಮನಿ ಅವರ ಕಥೆ, ಕಾದಂಬರಿಗಳು ಸಾಮಾಜಿಕ, ರಾಜಕೀಯ ಹಾಗೂ ರಾಷ್ಟ್ರೀಯತೆಗೆ ಸಂಬಂಧಿಸಿದ ವಿಷಯ ವಸ್ತುವಿನೊಂದಿಗೆ ಮುಂದಿನ ಜನಾಂಗಕ್ಕೆ ಸಂದೇಶವನ್ನು ನೀಡಿದ್ದಾರೆ. ಬಸವರಾಜ ಕಟ್ಟೀಮನಿಯವರು ತಮ್ಮ ಸಾಹಿತ್ಯದ ಮೂಲಕ ಸಮಾಜದ ಉದ್ಧಾರಕ್ಕಾಗಿ ಶ್ರಮಿಸಿದವರು. ಕಟ್ಟೀಮನಿ ನೇರ ನುಡಿಯ ಸಾಹಿತಿ ಮತ್ತು ಪತ್ರಕರ್ತರಾಗಿದ್ದರು. ಕನ್ನಡ ಸಾಹಿತ್ಯಕ್ಕೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳು: ಭವಾನಿ ಪಾಟೀಲ ಅವರಿಗೆ ಪ್ರಥಮ, ಪೂಜಾ ಸಾಂಗ್ಲಿ ಅವರಿಗೆ ದ್ವಿತೀಯ,



ಸಕ್ಕುಬಾಯಿ ನಿಂಗನೂರ್ ತೃತೀಯ ಬಹುಮಾನಗಳನ್ನು ವಿತರಿಸಲಾಯಿತು. ಈ ಕಾರ್ಯಕ್ರಮದ ಅಧ್ಯಕ್ಷತೆ ಜಿ. ಎಮ್. ಕುಲಕರ್ಣಿ ಅವರು ವಹಿಸಿದ್ದರು. ಬಿ. ಎ. ಬಮನಾಳೆ, ಎನ್. ಬಿ. ಝುರೆ. ಡಾ. ಮಹಾವೀರ ಕಾಳೆ ಅವರು ಸ್ವಾಗತಿಸಿದರು. ಭಾರತಿ ಅಗಸರ ನಿರೂಪಿಸಿದರು. ಮನೋಜಕುಮಾರ ಆಕಾಶ ಅವರು ವಂದಿಸಿದರು. ಮಹಾವಿದ್ಯಾಲಯದಿಂದ ವಿದ್ಯಾರ್ಥಿಗಳು ಕಥೆ ಸ್ಪರ್ಧೆಯಲ್ಲಿ ಭಾಗವಹಿಸಿದರು. ಭಾಗವಹಿಸಿದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

### 52 ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳ ವಿತರಣೆ : ರಕ್ತದಾನ ಶಿಬಿರ

## ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

**ಬಾಗಲಕೋಟೆ:** ಬಾಗಲಕೋಟೆ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಹಾಗೂ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಚ್.ವಾಯ್.ಮೇಟಿ ಭೂಮಿ ಪೂಜೆ ನೆರವೇರಿಸುವ ಮೂಲಕ ಗುರುವಾರ ಚಾಲನೆ ನೀಡಿದರು.

ನವನಗರದ ಸೆಕ್ಟರ ನಂ.7ರಲ್ಲಿ ಹಮ್ಮಿಕೊಂಡ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರ, ಜಿಲ್ಲಾ ಪಂಚಾಯತ, ತಾಲೂಕಾ ಪಂಚಾಯತ, ವಿವಿಧ ಇಲಾಖೆಯ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ಹಾಗೂ ವಿವಿಧ ಫಲಾನುಭವಿಗಳಿಗೆ ಸೌಲಭ್ಯ ವಿತರಣೆಗೆ ಚಾಲನೆ ನೀಡಿ ಮಾತನಾಡಿದ ಅವರು ನವನಗರದ ಯುನಿಟ್–1 ಮತ್ತು 2ರಲ್ಲಿ 18.48 ಕೋಟಿ ರೂ.ಗಳ ವಿವಿಧ ಕಾಮಗಾರಿ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

ಅಲ್ಲದೇ 7 ಜನ ವಿಕಲಚೇತನರಿಗೆ ತ್ರಿಚಕ್ರವಾಹನ, ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಆಯ್ಕೆಯಾದ 11 ಫಲಾನುಭವಿಗಳಿಗೆ ಆದೇಶ ಪತ್ರ, ಕೌಶಲ್ಯ ಅಭಿವೃದ್ಧಿ ಯೋಜನೆಯಡಿ ಸ್ವ–ಉದ್ಯೋಗ ಮಾಡಲು 8 ಜನ ಮಹಿಳೆಯರಿಗೆ ಹೊಲಿಗೆ ಯಂತ್ರದ ಕಿಟ್, ಎಸ್.ಬಿ.ಎಂ ಯೋಜನೆಯಡಿ ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಳ್ಳಲು 5 ಜನರಿಗೆ ಕಾಮಗಾರಿ ಆದೇಶ ಪತ್ರ, ಕೃಷಿ ಇಲಾಖೆ ಯೋಜನೆಯಡಿ 5 ಜನ ಫಲಾನುಭವಿಗಳಿಗೆ ಕೃಷಿ ಸಲಕರಣೆಗಳ ವಿತರಣೆ



ಹಾಗೂ 16 ಜನ ಫಲಾನುಭವಿಗಳಿಗೆ ಸಮುದಾಯ ಬಂಡವಾಳ ನಿಧಿ ಸೌಲಭ್ಯವನ್ನು ವಿತರಿಸಲಾಗಿದೆ. ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ ಹಂತ–4ರಡಿ ಇಬ್ಬರು ಫಲಾನುಭವಿಗಳಿಗೆ ಹೊಲಿಗೆ ಯಂತ್ರ, ಸೋಲಾರ ಲೈಟ್ ವಿತರಿಸಲಾಗಿದೆ ಎಂದರು.

ಜಿಲ್ಲಾಧಿಕಾರಿ ಸಂಗಪ್ಪ ಮತ್ತು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿದರು. ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆಯಿಂದ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಬುಡಾದ ಅಧ್ಯಕ್ಷ ಅಬ್ದುಲ್‌ರಜಾಕ ಬೇನೂರ, ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಬಿಡಿಸಿಸಿ ಬ್ಯಾಂಕ್‌ನ ಅಧ್ಯಕ್ಷ ಅಜಯಕುಮಾರ ಸರನಾಯಕ, ಬಸವೇಶ್ವರ ಬ್ಯಾಂಕಿನ ಅಧ್ಯಕ್ಷ ಪ್ರಕಾಶ ತಪಶೆಟ್ಟಿ, ಜಿಲ್ಲಾ ಕಾರ್ಮಿಕ ಅಧಿಕಾರಿ ರಮೇಶ ಸುಂಬಡ. ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸುಭಾಸ ಸಂಪಗಾವಿ, ಇತರರು ಉಪಸ್ಥಿತರಿದ್ದರು.

## ಅಧಿಕಾರಕ್ಕೆ, ಜ್ಞಾನಕ್ಕೆ ಗೌರವವಿದೆ: ಸಿದ್ದರಾಮಾನಂದ ಶ್ರೀ

**ಮುದ್ದೇಬಿಹಾಳ:** ಪ್ರತಿಯೊಬ್ಬರಲ್ಲಿಯೂ ಅಧ್ಬುತವಾದ ಶಕ್ತಿ ಇದೆ. ದೇವರು ಎಲ್ಲರಿಗೂ ಸಮನಾದ ಸಾಮರ್ಥವನ್ನು ನೀಡಿರುತ್ತಾನೆ ಬಡವ ಬಲ್ಲಿದ ಅಂತ, ಜಾತಿ, ಧರ್ಮ ಅಂತ ಬೇಧ ಮಾಡಿರುವದಿಲ್ಲ. ಹಾಗಾಗಿ ಎಲ್ಲರೂ ತಮ್ಮ ಸಾಮರ್ಥದ ಮೇಲೆ ನಂಬಿಕೆ ಇಟ್ಟುಕೊಂಡು ಸತತ ಪ್ರಯತ್ನಶಾಲಿಗಳಾದರೆ ಜ್ಞಾನ ಖಂಡಿತ ದೊರಕುತ್ತದೆಂದು ತಿಂಥಣಿಯ ಕಾಗಿನೆಲೆ ಮಹಾ ಸಂಸ್ಥಾನ, ಕನಕ ಗುರುಪೀಠದ ಸಿದ್ದರಾಮಾನಂದ ಸ್ವಾಮೀಜಿಗಳು ನುಡಿದರು.

ಪಟ್ಟಣದ ನಾಲತವಾಡ ರಸ್ತೆಯಲ್ಲಿರುವ ಬಿಬಿಆರ್ ಹಾರ್ವರ್ಡ್ ಪಿಯು ಸೈನ್ಸ್ ಕಾಲೇಜಿನಲ್ಲಿ ಹಮ್ಮಿಕೊಂಡ ಮಹಾತ್ಮಾ ಗಾಂಧೀಜಿ ಹಾಗೂ ಮಹರ್ಷಿ ವಾಲ್ಮೀಕಿ ಜಯಂತೋತ್ಸವನ್ನು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡುತ್ತಿದ್ದ ಅವರು ಸೌಂದರ್ಯಕ್ಕೆ ಬೆಲೆ ಇದೆ. ಅಧಿಕಾರಕ್ಕೆ, ಜ್ಞಾನಕ್ಕೆ ಗೌರವವಿದೆ. ಆದರೆ ಸೌಂದರ್ಯ, ಅಧಿಕಾರ ಶಾಶ್ವತವಲ್ಲ ಆದರೆ ಜ್ಞಾನ ಶಾಶ್ವತವೆಂದು ಹೇಳಿದರು.

ಇನ್ನೋರ್ವ ಅತಿಥಿ ಉಪನ್ಯಾಸಕರಾಗಿ ಆಗಮಿಸಿದ್ದ ಬಸವರಾಜ ಹಂಚಲಿರವರು ಮಾತನಾಡಿ ವಿಶ್ವದ ಬಹುತೇಕ ರಾಷ್ಟ್ರಗಳು ಹಿಂಸೆ ಮೂಲಕವೇ ತಮ್ಮ ದೇಶಕ್ಕೆ ಸ್ವಾತಂತ್ರ್ಯ ಪಡೆದುಕೊಂಡಿವೆ. ಆದರೆ ನಾವು ಮಾತ್ರ ಗಾಂಧೀಜಿರವರು ಬಳಸಿದ ಅಹಿಂಸಾತ್ಮಕ ಅಸ್ತ್ರಗಳಿಂದ ಶಾಸ್ವತವಾದ ಸ್ವಾತಂತ್ರ್ಯ ಪಡೆದಿದ್ದೇವೆಂದು ಹೇಳಿದರು. ಗಾಂಧೀಜಿರವರು ಹತ್ತಾರು ಅಸಹಕಾರ ಚಳುವಳಿಯಲ್ಲಿ ಅಹಿಂಸೆ ಎಂಬ ಅಸ್ತ್ರ ಬಳಸಿದ್ದರಿಂದಲೇ ವಯೋವೃದ್ದರು, ಮಹಿಳೆಯರು, ಮಕ್ಕಳು ಎಲ್ಲರೂ ಪಾಲ್ಗೊಳ್ಳಲು ಸಾಧ್ಯವಾಯಿತೆಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಅಧ್ಯಕ್ಷ ಎಸ್.ಎಂ.ನೆರಬೆಂಚಿ ರವರು ಮಾತನಾಡಿದರು. ಇನ್ನೋರ್ವ ಅತಿಥಿ ತಾ.ಪಂ. ಮಾಜಿ ಅಧ್ಯಕ್ಷರು ಹಾಗೂ ಹಾಲಿ ಎಪಿಎಂಸಿ ಸದಸ್ಯರಾದ ವಾಯ್. ಎಚ್.ವಿಜಯಕರರವರು ಪ್ರಾಸ್ತಾವಿಕವಾಗಿ ಮಾತನಾಡಿದರು ವೇದಿಕೆ ಮೇಲೆ ಜಿ.ಪಂ.ಮಾಜಿ ಸದಸ್ಯರಾದ ಬಸವರಾಜ ಶಿರೋಳ, ಪ್ರಾಚಾರ್ಯೆ ಆರ್. ಬಿ.ರೂಡಗಿ, ತೋಟದ, ಸಿಬ್ಬಂದಿ, ವಿದ್ಯಾರ್ಥಿ, ವಿದ್ಯಾರ್ಥಿನಿಯರು ಉಪಸ್ತಿತರಿದ್ದರು.



### ಅಣ್ಣಿಗೇರಿ ಮಳೆ ಹಾನಿ ಪ್ರದೇಶಗಳಿಗೆ ಶಾಸಕ ಎನ್.ಎಚ್.ಕೋನರಡ್ಡಿ ಭೇಟಿ

## ತುರ್ತು ಪರಿಹಾರಕ್ಕೆ ಸೂಚನೆ

**ಹುಬ್ಬಳ್ಳಿ:** ನಿನ್ನೆ ರಾತ್ರಿ ಅಣ್ಣಿಗೇರಿ ಹಾಗೂ ಪಟ್ಟಣದ ಸುತ್ತಮುತ್ತ ಸುರಿದ ನಿರಂತರ ಮಳೆಗೆ ಅಣ್ಣಿಗೇರಿ ಪಟ್ಟಣದ ವಿವಿದ ಬಡಾವಣೆಗಳಿಗೆ ಮಳೆನೀರು ಹರಿದು ಬಂದು, ಸಾರ್ವಜನಿಕರಿಗೆ ತೊಂದರೆ ಉಂಟಾಗಿತ್ತು.

ಸುದ್ದಿ ತಿಳಿದ ಶಾಸಕ ಎನ್.ಎಚ್. ಕೋನರಡ್ಡಿ ಅವರು ಅಧಿಕಾರಿಗಳಿಂದ ಮಾಹಿತಿ ಪಡೆದು, ಬೆಳಿಗ್ಗೆ ಅಣ್ಣಿಗೇರಿ ಪಟ್ಟಣಕ್ಕೆ ಆಗಮಿಸಿ, ಜನರ ನೆರವಿಗೆ ದಾವಿಸಿದರು. ಜಲಾವೃತ್ತವಾಗಿದ್ದ ಸುರಕೋಡ್ ಬಡಾವಣೆ, ರಾಜರಾಜೇಶ್ವರಿ ಬಡಾವಣೆ ಮತ್ತು ಜೆ.ಎಸ್.ಎಸ್.ಕಾಲೋನಿಗಳಿಗೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ, ಸಾರ್ವಜನಿಕರ ಅಹವಾಲು ಆಲಿಸಿದರು. ಬಡಾವಣೆಗಳಿಂದ ನೀರು ಹೊರಹಾಕಲು ತಕ್ಷಣ ಕ್ರಮವಹಿಸುವಂತೆ ನಿರ್ದೇಶಿಸಿದರು.

ಜೆಸಿಬಿ ಬಳಸಿಕೊಂಡು ನೀರು ಹರಿಯಲು ದಾರಿ, ಮೋಟರ್ ಪಂಪ್ ಬಳಸಿ ನೀರು ಬಡಾವಣೆಯಿಂದ ಹೊರಹಾಕಲು ಶಾಸಕರು ಸೂಚಿಸಿದರು. ಸಿಡಿಲು ಬಡಿದು ಕುರಿಗಳು ಮೃತಪಟ್ಟಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ತಕ್ಷಣ ಪಂಚನಾಮೆ ಮಾಡಿ, ಸರಕಾರದ ನಿಯಮಾವಳಿಗಳ ಪ್ರಕಾರ ಪರಿಹಾರ ನೀಡಲು ತಹಶಿಲ್ದಾರ ಅವರಿಗೆ ಶಾಸಕರು ನಿರ್ದೇಶಿಸಿದರು.

ಮಳೆಯಿಂದಾಗಿ ಅಣ್ಣಿಗೇರಿ ಪಟ್ಟಣ ಹಾಗೂ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಭಾಗಶಃ ಹಾನಿ ಆಗಿರುವ ಮನೆಗಳ ಸಮೀಕ್ಷೆ ಮಾಡಿ, ತಕ್ಷಣ ಸರಕಾರದ ಆದೇಶದಂತೆ ಪರಿಹಾರ ಬಿಡುಗಡೆ ಮಾಡಲು ಶಾಸಕ ಎನ್.ಎಚ್. ಕೋನರಡ್ಡಿ ಅವರು ಅಧಿಕಾರಿಗಳಿಗೆ ತಿಳಿಸಿದರು. ಅಣ್ಣಿಗೇರಿ ಪಟ್ಟಣದ ಅನೇಕ ಲೇಔಟ್ ಗಳಲ್ಲಿ ರಸ್ತೆ, ಚರಂಡಿಗಳ ಒತ್ತುವರಿ ಹಾಗೂ ಪಟ್ಟಣದ ವಿವಿದೆಡೆ ರಾಜಕಾಲುವೆಗಳ ಒತ್ತುವರಿ ಆಗಿರುವ ಬಗ್ಗೆ ಸಾರ್ವಜನಿಕ ದೂರುಗಳಿವೆ. ಒತ್ತುವರಿಗಳಿಂದಾಗಿ ಮಳೆ ನೀರು, ಚರಂಡಿ ನೀರು ಸರಾಗವಾಗಿ ಹರಿದು ಹೋಗಲು ಸಮಸ್ಯೆ ಆಗುತ್ತಿದೆ. ಅಣ್ಣಿಗೇರಿ ಪಟ್ಟಣ ಸುಂದರವಾಗಿ ರೂಪಗೊಳ್ಳಲು ಎಲ್ಲರೂ ಸಹಕರಿಸಬೇಕೆಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಅಣ್ಣಿಗೇರಿ ತಹಶೀಲ್ದಾರರಾದ ಎಂ.ಜಿ. ದಾಸಪ್ಪನವರ, ಪುರಸಭೆ ಮುಖ್ಯಾಧಿಕಾರಿ ವೈ.ಜಿ. ಗದ್ದಿಗೌಡರ, ಕಂದಾಯ ಅಧಿಕಾರಿ ರಿಷಿಕುಮಾರ ಸಾರಂಗಿ, ಗ್ರಾಮ ಲೆಕ್ಕಾಧಿಕಾರಿ ಎಮ್.ಎಸ್.ಪಾಟೀಲ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಪುರಸಭೆ ಸದಸ್ಯರು, ಬಡಾವಣೆ ನಿವಾಸಿಗಳು, ಸಾರ್ವಜನಿಕರು, ಇತರರು ಉಪಸ್ಥಿತರಿದ್ದರು.

### ಮಾಜಿ ಸಂಸದ ರಮೇಶ ಕತ್ತಿ, ಮಾಜಿ ಸಚಿವ ಎ.ಬಿ ಪಾಟೀಲ ನೇತೃತ್ವದ ಸ್ವಾಭಿಮಾನಿ ಪೆನಲ್ ಅಭ್ಯರ್ಥಿಗಳು ಆಯ್ಕೆ

## ಹುಕ್ಕೇರಿ ಸಹಕಾರಿ ಸಂಘಕ್ಕೆ ಅಧ್ಯಕ್ಷ ಉಪಾಧ್ಯಕ್ಷ ಅವಿರೋಧ ಆಯ್ಕೆ

**ಹುಕ್ಕೇರಿ:** ರಾಜ್ಯದಲ್ಲಿ ಸಂಚಲನ ಮೂಡಿಸಿದ್ದ ಸಹಕಾರ ತತ್ವದಡಿ ನಡೆಯುತ್ತಿರುವ ದೇಶದ ಏಕೈಕ್ ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದ ಆಡಳಿತ ಮಂಡಳಿಗೆ ಅಧ್ಯಕ್ಷರಾಗಿ ಮಹಾವೀರ ನಿಲಜಗಿ. ಉಪಾಧ್ಯಕ್ಷರಾಗಿ ಅಜೀತ ಮುನ್ನೋಳಿ ಅವಿರೋಧವಾಗಿ ಆಯ್ಕೆಯಾದರು.

ಇತ್ತಿಚಿಗೆ ಜಿಲ್ಲೆಯಲ್ಲಿ ಜಾರಕಿಹೊಳಿ ಮತ್ತು ಕತ್ತಿ ಕುಟುಂಗಳ ನಡುವೆ ನಡೆದ ತೀವ್ರ ಜಿದ್ದಾ ಜಿದ್ದಿ ಚುನಾವಣೆಯಲ್ಲಿ ಹುಕ್ಕೇರಿ ತಾಲೂಕಿನ ಹಿರಿಯರಾದ ಮಾಜಿ ಸಂಸದ ರಮೇಶ ಕತ್ತಿ, ಮಾಜಿ ಸಚಿವ ಎ.ಬಿ ಪಾಟೀಲ ಮತ್ತು ಶಾಸಕ ನಿಖಿಲ್ ಕತ್ತಿ, ನೇತ್ರತ್ವದ ಸ್ವಾಭಿಮಾನಿ ಪೆನಲದಿಂದ ಅಯ್ಕೆಯಾಗಿದ್ದರು.

ಇಂದು ನಡೆದ ಆಯ್ಕೆಯಲ್ಲಿ ಕುಟುಂಭ ರಾಜಕಾರಣಕ್ಕೆ ಮಣೆಹಾಕದೆ ಕತ್ತಿ ಹಾಗೂ ಪಾಟೀಲ ಕುಟುಂಬದವರು ಜೈನ ಸಮುದಾಯದ ಹಾಗೂ ಹುಕ್ಕೇರಿ ಪಟ್ಟಣದ ಪ್ರತಿಷ್ಠಿತ ಕುಟುಂಭದ ಮಹಾವೀರ



ನಿಲಜಗಿ ಅವರನ್ನು ಅಧ್ಯಕ್ಷ ಸ್ಥಾನ ಹಾಗೂ ಯಮಕನಮರಡಿ ಕ್ಷೇತ್ರದ ಹೆಬ್ಬಾಳ ಗ್ರಾಮದ ಅಜೀತ ಮನ್ನೋಳಿ ಅವರನ್ನು ಉಪಾಧ್ಯಕ್ಷ ಸ್ಥಾನ ಪಟ್ಟ ನೀಡುವದರ ಮೂಲಕ ಸ್ವಾಭಿಮಾನಕ್ಕೆ ತಕ್ಕಂತೆ ನಡೆದುಕೊಂಡಿರುವದು ವಿಶೇಷ.

ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಅರಭಾವಿ ಕ್ಷೇತ್ರದ ಬಾಲಚಂದ್ರ ಜಾರಕಿಹೊಳಿ. ಹಾಗೂ ಮಾಜಿ ಸಂಸದ ಅಣ್ಣಾಸಾಹೇಬ ಜೊಲ್ಲೆ ನೇತ್ರತ್ವದ ಶ್ರೀ ಅಪಣ್ಣಗೌಡ ಪೆನಲ್ ಹಾಗೂ ಸ್ವಾಭಿಮಾನಿ ಪೆನಲ್ ಗಳ ನಡುವೆ ನಡೆದ ತೀವ್ರ ಜಿದ್ದಾ ಜಿದ್ದಿನ ಚುನಾವಣೆಯಲ್ಲಿ ಸ್ವಾಬಿಮಾನ ಎಲ್ಲ 15 ಅಭ್ಯರ್ಥಿಗಳು ಹೆಚ್ಚು ಮತ ಪಡೆದು ಆಯ್ಕೆಯಾಗಿದ್ದರು.

ಸ್ವಾಭಿಮಾನ್ ಪೆನಲ್ ನೇತ್ರತ್ವ ವಹಿಸಿದ್ದ ಮಾಜಿ ಸಂಸದ ರಮೇಶ ಕತ್ತಿ ಹಾಗೂ ಮಾಜಿ ಸಚಿವ ಎ.ಬಿ ಪಾಟೀಲ ಮಾರ್ಗದರ್ಶನದಲ್ಲಿ ನಡೆದ ಚುನಾವಣೆ ಪ್ರಕಿಯೆಯಲ್ಲಿ ನೂತನವಾಗಿ ಆಯ್ಕೆಯಾದ ಆಡಳಿತ ಮಂಡಳಿ ನಿರ್ದೇಶಕರಾದ ಪೃಥ್ವಿ ಕತ್ತಿ, ವಿನಯ ಪಾಟೀಲ, ಸತ್ಯಪ್ಪಾ ನಾಯಿಕ, ಗಜಾನನ ಕ್ವಳ್ಳಿ, ಕಲಗೌಡ ಪಾಟೀಲ, ನಂದು ಮುಡಸಿ, ಕೆಂಪಣ್ಣ ವಾಸೇದಾರ, ಶಿವನಗೌಡ ಮದವಾಲ, ಮಹಾದೇವ ಕ್ಷೀರಸಾಗರ, ಸನ್ನಾಯಿಕ ಶ್ರೀಮಂತ, ಬಸವಣ್ಣಿ ಲಂಕೆಪ್ಪಗೋಳ, ಮಹಬೂಬಿ ನಾಯಕವಾಡಿ, ಮಂಗಲ ಮೂಡಲಗಿ ಸೇರಿದಂತೆ ಹಿರಾಶುಗರ ಕಾರ್ಖಾನೆಯ ನಿವೃತ್ತ ವ್ಯವಸ್ಥಾಪಕ ನಿರ್ದೇಶಕ ಸಾತಪ್ಪಾ ಕರ್ಕಿನಾಯಿಕ, ಬಸವರಾಜ ಹುಂದ್ರಿ , ಪಿಕಾರ್ಡ ಬ್ಯಾಂಕಿನ ದುರದುಂಡಿ ಪಾಟೀಲ, ಶೀಥಲ ಬ್ಯಾಳಿ, ಗುರು ಕುಲಕರ್ಣಿ, ರಾಜು ಮುನ್ನೋಳಿ, ರಾಚಯ್ಯ ಹಿರೇಮಠ, ಉದಯ ಹುಕ್ಕೇರಿ, ಸುನೀಲ ಪರ್ವತರಾವ್, ರೋಹನ ನೇಸರಿ, ಮಲ್ಲಪ್ಪಾ ಬಿಸಿರೊಟ್ಟಿ, ಅಶೋಕ ಪಾಟೀಲ, ಶಿವನಗೌಡ ಪಾಟೀಲ, ಶ್ರೀಶೈಲ್ ಯಮಕನಮರಡಿ, ಗುರುನಾಥ ಕಡೇಲಿ, ರಾಜು ಮಗದುಮ್ಮ, ಸುರೇಶ ಜಿನರಾಳಿ, ಎ.ಕೆ ಪಾಟೀಲ. ಶಹಜಾನ ಬಡಗಾವಿ, ಇಲಿಯಾಸ ಅತ್ತಾರ, ರಿಯಾಜ ಮೋಮಿನ, ವಿವಿಧ ಗ್ರಾಮಗಳ ಮುಖಂಡರು ಉಪಸ್ಥಿತರಿದ್ದರು.

### ಜಿ.ಪಂ. ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಆಡಳಿತಾಧಿಕಾರಿ ಚೌಧರಿ ಸೂಚನೆ

## ಶಾಲಾ ಕಾಲೇಜುಗಳಲ್ಲಿ ಯೋಗ ಕಾರ್ಯಕ್ರಮ ಆಯೋಜಿಸಿ

**ಗದಗ:** ಜಿಲ್ಲೆಯ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಮಾನಸಿಕ ಹಾಗೂ ದೈಹಿಕ ಆರೋಗ್ಯ ಬಲವರ್ದನೆಗಾಗಿ ಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಯೋಗಾಭ್ಯಾಸದ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಜಿ.ಪಂ. ಆಡಳಿತಾಧಿಕಾರಿ ರಮಣದೀಪ್ ಚೌಧರಿ ತಿಳಿಸಿದರು.

ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಲ್ಲೆಯಲ್ಲಿ ಡೆಂಗ್ಯು ಹಾಗೂ ಚಿಕುನ್ ಗುನ್ಯಾ ರೋಗಗಳನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಕೃಷಿ ಇಲಾಖೆಯ ಉಪನಿರ್ದೇಶಕರು ಮಾತನಾಡಿ ಜಿಲ್ಲೆಯಲ್ಲಿ ಹಿಂಗಾರು ಹಂಗಾಮು ಬಿತ್ತನೆ ಮುಂದಿನ ವಾರದಿಂದ ಪ್ರಾರಂಭವಾಗಲಿದೆ. ಹಿಂಗಾರು ಹಂಗಾಮಿಗೆ ಕಡಲೆ, ಹಿಂಗಾರಿ ಜೋಳ, ಗೋಧಿ ಸೂರ್ಯಕಾಂತಿ , ಹತ್ತಿ ಮುಖ್ಯ ಬೆಳೆಗಳಾಗಿವೆ. ರೈತರಿಗೆ ವಿತರಿಸಲು ಸದ್ಯ ರಸಗೊಬ್ಬರದ ಸಮಸ್ಯೆ ಇರುವುದಿಲ್ಲ . ರಾಜ್ಯ ವಲಯ ಕಾರ್ಯಕ್ರಮಗಳಡಿ ಪರಿಕರಗಳು ಮತ್ತು ಗುಣಮಟ್ಟ ನಿಯಂತ್ರಣ ಯೋಜನೆಯಡಿ ಎಪ್ರಿಲ್ 1 ರಿಂದ ಅಗಸ್ಟ 31 ರವರೆಗೆ 365 ಲಕ್ಷ ರೂ. ಗುರಿಯಿದ್ದು 360.29 ಲಕ್ಷ ರೂ ವೆಚ್ಚ ಮಾಡಲಾಗಿದ್ದು 99 % ರಷ್ಟು ಗುರಿ ಸಾಧಿಸಲಾಗಿದೆ. ಕೃಷಿ ಭಾಗ್ಯ ಯೋಜನೆಯಡಿ 110.00 ಲಕ್ಷ ರೂ. ಗುರಿಯಿದ್ದು 108.25 ಲಕ್ಷ ರೂ ವೆಚ್ಚ ಮಾಡಲಾಗಿದ್ದು 98 % ರಷ್ಟು ಗುರಿ ಸಾಧಿಸಲಾಗಿದೆ ಎಂದು ಸಭೆಗೆ ವಿವರಿಸಿದರು.

ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ ಮಾತನಾಡಿ ತೋಟಗಾರಿಕೆ ಕ್ಷೇತ್ರಗಳ ನಿರ್ವಹಣೆ ಯೋಜನೆಯಡಿ ಅಗಸ್ಟ 31 ರ ಅಂತ್ಯದವರೆಗೆ 4.19 ಲಕ್ಷ ರೂ.ಗಳ ಗುರಿಯಿದ್ದು 4.07 ಲಕ್ಷ ರೂ. ವೆಚ್ಚ ಮಾಡಿ 97 % ರಷ್ಟು ಗುರಿ ಸಾಧಿಸಲಾಗಿದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ( ಹನಿ) ಯಡಿ 273 ಲಕ್ಷ ರೂ. ಗುರಿಯಿದ್ದು ಆ ಪೈಕಿ 262.45 ಲಕ್ಷ ರೂ. ವೆಚ್ಚ ಮಾಡಿ ಶೇ 96 ರಷ್ಟು ಗುರಿ ಸಾಧಿಸಲಾಗಿದೆ. ಬರುವ ಜನೆವರಿ ಅಥವಾ ಫೆಬ್ರುವರಿ ತಿಂಗಳಲ್ಲಿ ಇಲಾಖೆಯಿಂದ ಫಲಪುಷ್ಪ ಪ್ರದರ್ಶನವನ್ನು ಹಮ್ಮಿಕೊಳ್ಳಲು ಯೋಜಿಸಲಾಗಿದೆ. ಹನಿ ನೀರಾವರಿಯಲ್ಲಿ ಬಾಳೆ, ಪಪ್ಪಾಯಿ, ಡ್ರೈಗನ್ ಫ್ರುಟ್ ಗಿಡಗಳನ್ನು ಬೆಳೆಯಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿ.ಪಂ.ಸಿ.ಇ.ಓ ಸಿ.ಎನ್.ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ.ಕಂಬಾಳಿಮಠ, ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ ಚಳಗೇರಿ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

## ಅಳವಂಡಿ: ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

**ಕೊಪ್ಪಳ:** 33 ಕೆ.ವಿ ಅಳವಂಡಿ ಗ್ರಾಮದಲ್ಲಿ ರಸ್ತೆ ಆಗಲಿಕರಣ ಕಾಮಗಾರಿ ನಡೆಸುತ್ತಿರುವ ಪ್ರಯುಕ್ತ ಅಕ್ಟೋಬರ್ 11, 13 ಮತ್ತು 15 ರಂದು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 4 ಗಂಟೆಯವರೆಗೆ 33 ಕೆ.ವಿ ಅಳವಂಡಿ ವ್ಯಾಪ್ತಿಯಲ್ಲಿನ ವಿವಿಧ ಮಾರ್ಗಗಳಿಗೆ ವಿದ್ಯುತ್ ವ್ಯತ್ಯಯವಾಗಲಿದೆ. 33 ಕೆ.ವಿ ಆಳವಂಡಿ ಸ್ಟೇಷನ್ ಗೆ ಒಳಪಡುವ ಎಫ್–2 ಅಳವಂಡಿ ಫೀಡರಿನ ಆಳವಂಡಿ, ಕಂಪ್ಲಿ, ಕವಲೂರ ಮತ್ತು ಗುಡಗೇರಿ ಹಾಗೂ 33 ಕೆ.ವಿ ಅಳವಂಡಿ ಸ್ಟೇಷನ್ ಗೆ ಒಳಪಡುವ ಎಫ್–6 ಹೈದರನಗರ ಫೀಡರಿನ ಅಳವಂಡಿ ಸಿದ್ದೇಶ್ವರನಗರ, ರಘುನಾಥನಹಳ್ಳಿ, ಹಟ್ಟಿ, ಹೈದರನಗರ, ಕೆಸಲಾಪೂರ, ಹಲವಾಗಲಿ, ನೆಲೋಗಿದೂರ, ಭೈರಾಪೂರ, ಬೆಳಗಟ್ಟಿ, ಘಟ್ಟರೆಡ್ಡಿಹಾಳ ಮತ್ತು ಮುರ್ಲಾಪೂರ ಫೀಡರ್‌ಗಳ 11 ಕೆವಿ ಮಾರ್ಗಗಳ ಅ.11, 13 ಮತ್ತು 15 ರಂದು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕು.

ಅಳವಂಡಿ ಗ್ರಾಮದಲ್ಲಿ ರಸ್ತೆ ಆಗಲಿಕರಣ ಕಾಮಗಾರಿ ಕೆಲಸವು ಬೇಗನೆ ಮುಕ್ತಾಯಗೊಂಡಲ್ಲಿ, ಯಾವುದೇ ಸಮಯದಲ್ಲಿ ವಿದ್ಯುತ್ ಸರಬರಾಜು ಮಾಡಲಾಗುವುದು. ಆದ್ದರಿಂದ ಸಾರ್ವಜನಿಕರು ಯಾವುದೇ ತರಹದ ವಿದ್ಯುತ್ ದುರಸ್ಥಿ ಕೆಲಸ–ಕಾರ್ಯಗಳನ್ನು ಮಾಡಬಾರದೆಂದು ಈ ಮೂಲಕ ಕೋರಲಾಗಿದೆ. ಒಂದು ವೇಳೆ ವಿದ್ಯುತ್ ಅಘಘಾತ ಸಂಭವಿಸಿದಲ್ಲಿ ಕಂಪನಿಯು ಜವಾಬ್ದಾರರಾಗಿರುವುದಿಲ್ಲ ಎಂದು ಜೆಸ್ಕಾಂ ಕೊಪ್ಪಳ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರಿಗೆ ಘಟಕದಲ್ಲಿ ವಾಲ್ಮೀಕಿ ಜಯಂತಿ



**ಗೋಕಾಕ:** ಇಲ್ಲಿಯ ಸಾರಿಗೆ ಸಂಸ್ಥೆಯ ಘಟಕದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಯುವ ಮುಖಂಡರಾದ ರಾಹುಲ್ ಜಾರಕಿಹೊಳಿಯವರು ಶ್ರೀ ವಾಲ್ಮೀಕಿ ಭಾವ ಚಿತ್ರಕ್ಕೆ ಪೂಜೆಯನ್ನು ಸಲ್ಲಿಸಿದರು.

ಇತ್ತಿಚಿನ ಗಣೇಶ ಉತ್ಸವದ ಸಂದರ್ಭದಲ್ಲಿ ಸಂಸ್ಥೆಗೆ ಹೆಚ್ಚಿನ ಆದಾಯ ತಂದಿ ಲಕ್ಷ್ಮಣ ಪಡೆದಲ್ಲಿ, ಯಲ್ಲಪ್ಪ ಗೊರಗುದ್ದಿ ಹಾಗೂ ಶಂಕರ ನಾಯ್ಕರ ಮತ್ತು ಯುಪಿಆಯ ಆನ್ಲೈನ್ ಪೇಮೆಂಟ್ನಲ್ಲಿ ಹೆಚ್ಚಿನ ಆದಾಯ ತಂದಿರುವ ಎಲ್. ಟಿ. ದಾಸರ ಡಿ/ಸಿ ಸಿಬ್ಬಂದಿಗಳಿಗೆ ಪ್ರಶಸ್ತಿಯನ್ನು ನೀಡಿ ಪ್ರೋತ್ಸಾಹಿಸಿದರು. ಈ ಸಂದರ್ಭದಲ್ಲಿ ಮ್ಯಾನೇಜರ್ ಸುನೀಲ್ ಹೊನವಾಡ, ಎಟಿಎಸ್ ಬಂಡುರಾವ ನಿಲಯಜೋತಿ, ಮಲ್ಲಪ್ಪ ಸಾಯನ್ನವರ, ಆಡಳಿತ ಶಾಖೆಯ ಸುರೇಶ ಮಾಂಗ , ಲೆಕ್ಕ ಪತ್ರ ಮೇಲ್ವಿಚಾರಕ ಮಲ್ಲಾಡ ಹಾಗೂ ಸಿಬ್ಬಂದಿಗಳು ಇದ್ದರು. ಚಂದ್ರಶೇಖರ ನಿಂಬರಗಿ ಕಾರ್ಯಕ್ರಮ ನಿರೂಪಣೆ ಮಾಡಿದರು.



## ಡಿಸಿಸಿ ಬ್ಯಾಂಕ್ ಚುನಾವಣೆ
### ಮಹಾಂತೇಶ ದೊಡ್ಡಗೌಡರ ನಾಮಪತ್ರ ಸಲ್ಲಿಕೆ

**ಬೆಳಗಾವಿ:** ಜಿಲ್ಲೆಯ ಪ್ರತಿಷ್ಠಿತ ದಿ ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕಗೆ ನಡೆಯಲಿರುವ ಆಡಳಿತ ಮಂಡಳಿ ಚುನಾವಣೆಗೆ ಬೈಲಹೊಂಗಲ ತಾಲೂಕಾ ಕ್ಷೇತ್ರದಿಂದ ಮಾಜಿ ಶಾಸಕ ಮಹಾಂತೇಶ ದೊಡ್ಡಗೌಡರ ಅವರು ಗುರುವಾರದಂದು ಡಿಸಿಸಿ ಬ್ಯಾಂಕ ಮುಖ್ಯ ಶಾಖೆ ಬೆಳಗಾವಿಯಲ್ಲಿ ಚುನಾವಣೆ ಅಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದರು.

ನಾಮಪತ್ರ ಸಲ್ಲಿಸಿ ಮಹಾಂತೇಶ ದೊಡ್ಡಗೌಡರ ಮಾತನಾಡಿ ಬೈಲಹೊಂಗಲ ತಾಲೂಕಿನಲ್ಲಿ ಒಟ್ಟು 73 ಪಿಕೆಪಿಎಸ್ ಸಂಘಗಳು ಕಾರ್ಯನಿರ್ವಹಿಸುತ್ತಿದ್ದು ಅವುಗಳಿಗೆ ಹೊಸ ಕಟ್ಟಡ, ಗೋಡಾವನ, ರೈತರಿಗೆ ಸಾಲ, ಟ್ರ್ಯಾಕ್ಟರ್ ವಿತರಣೆ, ಗಣಕೀಕರಣ, ಪತ್ತು ಹೆಚ್ಚಳಕ್ಕೆ ಆದ್ಯತೆ,ರೈತರ ಬೆಳವಣಿಗೆ ಕಳೆದ 30 ವರ್ಷಗಳಿಂದ ಡಿಸಿಸಿ ಬ್ಯಾಂಕ ನಿರ್ದೇಶಕ, ಉಪಾಧ್ಯಕ್ಷನಾಗಿ ಪ್ರಾಮಾಣಿಕ ಕಾರ್ಯ ಮಾಡಿದ್ದು ಮುಂದಿನ ದಿನಗಳಲ್ಲಿ ಸಹಕಾರಿ ಕ್ಷೇತ್ರಕ್ಕೆ ಹೆಚ್ಚಿನ ಸವಲತ್ತು ಕಲ್ಪಿಸುವ ಕಾರ್ಯ ಮಾಡುತ್ತೇನೆ.ಹಿಂದಿನ ಅವಧಿಯಲ್ಲಿ ಕಿತ್ತೂರು ಬೈಲಹೊಂಗಲ ಸೇರಿದ್ದಂತೆ ಒಟ್ಟು 105 ಪ್ರಾಥಮಿಕ ಸಹಕಾರಿ ಸಂಘಗಳ ಬೆಳವಣಿಗೆ ಉತ್ತೇಜನ ನೀಡಿದ್ದು ಸದಾ ರೈತರ ಅಭಿವೃದ್ಧಿಗೆ ಶ್ರಮಿಸಿದ್ದೇನೆ. ಶಾಸಕನಾಗಿ ಹಲವಾರು ಜನಪರ ಕಾರ್ಯ ಮಾಡಿ ಮುಂದೆ ಸದಾ ರೈತಪರ ಕೆಲಸ ಮಾಡುತ್ತೇನೆ. ಬೈಲಹೊಂಗಲ ತಾಲೂಕಿನಲ್ಲಿ 73 ಪಿ ಕೆ ಪಿ ಎಸ್ ಸಂಘಗಳು ಕಾರ್ಯ ನಿರ್ವಹಿಸುತ್ತಿದ್ದು ಅವುಗಳನ್ನು ಬೆಳೆಸಿ ರೈತರ ಧ್ವನಿಯಾಗಿ ನಿಲ್ಲುತ್ತೇನೆ ಮತ್ತು ನಮ್ಮ ಜಯ ಖಚಿತ ಎಂದರು.

ಈ ನಾಮಪತ್ರ ಸಲ್ಲಿಕೆ ವೇಳೆ ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ, ಮಾಜಿ ಸಂಸದ ಅಣ್ಣಾಸಾಹೇಬ ಜೊಲ್ಲೆ, ಅರವಿಂದ ಪಾಟೀಲ, ಶಾಸಕ ವಿಶ್ವಾಸ ವೈದ್ಯ, ವೀರೂಪಾಕ್ಷ ಮಾಮನಿ, ಮಾಜಿ ಶಾಸಕ ಜಗದೀಶ ಮೆಟಗುಡ, ಅಪ್ಪಾಸಾಹೇಬ ಕುಲಗಡೆ, ವಿಕ್ರಮ ಇನಾಮದಾರ, ರಾಜಶೇಖರ್ ಯತ್ತಿನಮನಿ, ಗುರು ಮೆಟಗುಡ, ವಿಜಯ ಮೆಟಗುಡ, ರಾಮನಗೌಡ ದೊಡ್ಡಗೌಡರ, ಸೇರಿದಂತೆ ಬೈಲಹೊಂಗಲ ತಾಲೂಕಾ ಪಿಕೆಪಿಎಸ್ ಸದಸ್ಯರು, ಮುಖಂಡರು, ರೈತರು, ದೊಡ್ಡಗೌಡರ ಅಭಿಮಾನಿಗಳು ಭಾಗವಹಿಸಿದ್ದರು.

**ರೈತರು, ಸಕ್ಕರೆ ಕಾರ್ಖಾನೆ ಮಾಲಿಕರು-ಪ್ರತಿನಿಧಿಗಳೊಂದಿಗೆ ಸಭೆಯಲ್ಲಿ ಕಾರ್ಖಾನೆ ಮಾಲಿಕರ ಸ್ಪಷ್ಟನೆ**

# ರೈತರ ಜೊತೆ ಚರ್ಚಿಸಿದ ಬಳಿಕ ದರ ನಿರ್ಧಾರ

**ಬಾಗಲಕೋಟೆ:** ಪ್ರಸಕ್ತ ಹಂಗಾಮಿಗೆ ಕಾರ್ಖಾನೆ ಪ್ರಾರಂಭಿಸಲು ಕಾಲಾವಕಾಶ ಇರುವ ಹಿನ್ನಲೆಯಲ್ಲಿ ರೈತರ ಜೊತೆ ಸಭೆ ಕರೆದು ಕಬ್ಬಿನ ದರದ ಬಗ್ಗೆ ಚರ್ಚಿಸಿ ತೀರ್ಮಾಣ ಕೈಗೊಳ್ಳಲಾಗುವುದೆಂದು ಸಕ್ಕರೆ ಕಾರ್ಖಾನೆಯವರು ಸ್ಪಷ್ಟಪಡಿಸಿದ್ದಾರೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದರು.

ಗುರುವಾರ ರೈತರು ಮತ್ತು ಸಕ್ಕರೆ ಕಾರ್ಖಾನೆ ಮಾಲಿಕರು ಅಥವಾ ವ್ಯವಸ್ಥಾಕಪ ನಿರ್ದೇಶಕರುಗಳ ಜೊತೆ ಪ್ರತ್ಯೇಕ ಸಭೆಗಳ ಅಧ್ಯಕ್ಷತೆ ವಹಿಸಿ ಚರ್ಚಿಸಿದ ಅವರು ಪ್ರಸಕ್ತ ಹಂಗಾಮಿಗೆ ನವೆಂಬರ 1 ರಿಂದ ಕಾರ್ಖಾನೆ ಪ್ರಾರಂಭಿಸಲು ಸರಕಾರ ತಿಳಿಸಿದ್ದು, ಕಳೆದ ಹಂಗಾಮಿನಲ್ಲಿ ರೈತರಿಗೆ ಪಾವತಿಸಲು ಬಾಕಿ ಉಳಿಸಿಕೊಂಡಿರುವ ಜಮಖಂಡಿ ಸಕ್ಕರೆ ಕಾರ್ಖಾನೆಯವರು ಬಾಕಿ ಮೊತ್ತವನ್ನು ಕೂಡಲೇ ಪಾವತಿಸುವಂತೆ ತಿಳಿಸಿದರು. ಕಬ್ಬು ಕಟಾವು ಮತ್ತು ಸಾಗಾಣಿಕಾ ವೆಚ್ಚವನ್ನು ಸರಕಾರದ ಮಾರ್ಗಸೂಚಿ ಪ್ರಕಾರ ಕಡಿತ ಮಾಡಬೇಕೆಂದು ತಿಳಿಸಿದರು.

ಕಳೆದ ಹಂಗಾಮಿನಲ್ಲಿ ಸಕ್ಕರೆ ಕಾರ್ಖಾನೆ ಮತ್ತು ರೈತರ ನಡುವೆ ಮಾಡಿಕೊಂಡ ಎಫ್.ಆರ್.ಪಿ ಕ್ಕಿಂತ ಹೆಚ್ಚುವರಿ ದರದ ಬಾಕಿ ಮೊತ್ತವನ್ನು ಪಾವತಿಸಿದ ನಂತರವೇ ಪ್ರಸಕ್ತ ಹಂಗಾಮಿನಲ್ಲಿ ಕಾರ್ಖಾನೆ ಪಾವತಿಸುವಂತೆ ರೈತರು ಬೇಡಿಕೆ ಇಟ್ಟಿದ್ದು, ಬಾಕಿ ಉಳಿಸಿಕೊಂಡ ಕಾರ್ಖಾನೆಗಳು ಕೂಡಲೇ ಪಾವತಿ ಮಾಡಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಕಬ್ಬು ಕಟಾವು ಮತ್ತು ಸಾಗಾಣಿಕಾ ವೆಚ್ಚವನ್ನು ಸರಕಾರದ



ಮಾರ್ಗಸೂಚಿಯ ಪ್ರಕಾರ ಪಾವತಿಗೆ ಕ್ರಮಕೈಗೊಳ್ಳಲು ತಿಳಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್ ಮಾತನಾಡಿ ಕಬ್ಬು ಸಾಗಾಣಿಕೆ ಮಾಡುವ ಟ್ರ್ಯಾಕ್ಟರಗಳಿಗೆ ರಿಪ್ಲೇಕ್ಟರಗಳನ್ನು ಕಡ್ಡಾಯವಾಗಿ ಅಂಟಿಸಬೇಕು. ಅಲ್ಲದೇ ಟ್ರ್ಯಾಕ್ಟರಗಳಲ್ಲಿ ಅಳವಡಇಸಲಾದ ಧ್ವನಿವರ್ಧಕಗಳನ್ನು ಸಹ ತೆಗೆದು ಹಾಕಲು ತಿಳಿಸಿದರು. ಅಲ್ಲದೇ ಅಲ್ಕೋಹಾಲ್ ಚೆಕ್ಕರ್ ಮೀಟರ್ ಅಳವಡಿಸಿ ಡ್ರಿಂಕ್ & ಡ್ರೈವರ್‌ಗಳಿದ್ದಲ್ಲಿ ಅವರನ್ನು ಕಪ್ಪು ಪಟ್ಟಿಗೆ ಸೇರಿಸಲು ಸೂಚಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಸಕ್ಕರೆ ಕಾರ್ಖಾನೆಗಳು ಕಡ್ಡಾಯವಾಗಿ ಕರ ಪಾವತಿ ಮಾಡಬೇಕು. ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಕಾರ್ಖಾನೆಯ ಒಳಗೆ ಪ್ರವೇಶಿಸಲು ಅವಕಾಶ ನೀಡದಿರುವ ಬಗ್ಗೆ ಗಮನಕ್ಕೆ ಬಂದಿದ್ದು, ಈ ರೀತಿ ಆಗಬಾರದು. ಈಗಾಗಲೇ ಕೆಲವು ಕಾರ್ಖಾನೆಯವರು ಪಂಚಾಯತಿಗೆ ಕರ ಪಾವತಿ ಮಾಡುತ್ತಿದ್ದು, ಉಳಿದ ಎಲ್ಲ ಸಕ್ಕರೆ ಕಾರ್ಖಾನೆಗಳು ಸಹ ಪ್ರತಿ ವರ್ಷ ಕರ ಪಾವತಿಸಬೇಕು ಎಂದರು. ರೈತರು ಸಭೆಯಲ್ಲಿ ಸಕ್ಕರೆ ಕಾರ್ಖಾನೆಯವರು ಯಾವ ಯಂತ್ರದಲ್ಲಿ ಕಬ್ಬನ್ನು ತೂಕ ಮಾಡುತ್ತಾರೋ ಅದೇ ಯಂತ್ರದಲ್ಲಿ ಸಕ್ಕರೆಯನ್ನು ಕೂಡಾ ತೂಕ ಮಾಡಿ ಕಳುಹಿಸಬೇಕು. ಕಡ್ಡಾಯವಾಗಿ ಎಲ್ಲ ಕಡೆ ಸಿಸಿ ಕ್ಯಾಮರಾ ಅಳವಡಇಸಿ ಪಾರದರ್ಶಕತೆ ತರಬೇಕು. ಒಂದು ಕಾರ್ಖಾನೆಯಿಂದ ಇನ್ನೊಂದು ಕಾರ್ಖಾನೆಗೆ ಬೇರೆ ಬೇರೆ ದರ ನಿಗಧಿಯಾಗಿದ್ದು, ಒಂದೇ ದರ ನಿಗಧಿ ಮಾಡಬೇಕು. ಹಿಂದಿನ ಹಂಗಾಮಿನಲ್ಲಿ ಪಾವತಿಸಿರುವದಿಲ್ಲ. ಇದಕ್ಕೆ ಬಡ್ಡಿ ಸಮೇತ ನೀಡುವಂತೆ ಬೇಡಿಕೆ ಇಟ್ಟರು. ಅಲ್ಲದೇ ಕೇಂದ್ರ ಮಂತ್ರಿಗಳು, ರಾಜ್ಯ ಮಂತ್ರಿಗಳು, ಜಿಲ್ಲಾ ಮಂತ್ರಿಗಳು, ಸಕ್ಕರೆ ಆಯುಕ್ತರು ಜಿಲ್ಲೆಗೆ ಆಗಮಿಸಿ ರೈತರ ಮತ್ತು ಕಾರ್ಖಾನೆಯವರ ಬೇಡಿಕೆಗಳನ್ನು ಆಲಿಸಲು ಸಭೆ ಜರುಗಿಸುವ ಅವಶ್ಯಕತೆ ಇದೆ ಎಂದು ರೈತರು ಸಭೆಗೆ ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರಸನ್ನ ದೇಸಾಯಿ, ಮಹಾಂತೇಶ್ವರ ಜಿದ್ದಿ, ಬೆಳಗಾವಿ ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯ ಸಂಪನ್ಮೂಲ ವ್ಯಕ್ತಿ ಸಿ.ಬಿ.ಪಾಟೀಲ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಸೇರಿದಂತೆ ರೈತರು, ಕಾರ್ಖಾನೆಗಳ ಮಾಲಿಕರು, ವ್ಯವಸ್ಥಾಪಕ ನಿರ್ದೇಶಕರು ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

**ಬಾಗಲಕೋಟೆ:** 2025 –26 ನೇ ಸಾಲಿನ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಯೋಜನೆಯಲ್ಲಿ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಸ್ವಯಂ ಉದ್ಯೋಗ ಕೈಗೊಳ್ಳಲು ನೇರವಾಗಿ ಸಾಲ–ಸಹಾಯಧನ ಮಂಜೂರು ಮಾಡಲು ಅರ್ಜಿ ಆಹ್ವಾನಿಸಲಾಗಿದ್ದು, ಕನಿಷ್ಠ ರೂ 1 ಲಕ್ಷ ಹಾಗೂ ಗರಿಷ್ಠ 2 ಲಕ್ಷವರೆಗೂ ಆರ್ಥಿಕ ನೆರವು ಒದಗಿಸಲಾಗುವುದು. ಅರ್ಜಿ ಸಲ್ಲಿಸಲು https://www. ksbdb,karnataka.gov.in ಭೇಟಿ ನೀಡಬಹುದಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಅಕ್ಟೋಬರ 31 ವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಾರ್ಯಾಲಯ ಜಿಲ್ಲಾ ಆಡಳಿತ ಭವನ 1ನೇ ಮಹಡಿ ಕೊಠಡಿ ಸಂಖ್ಯೆ 118, ದೂರವಾಣಿ ಸಂ: 8029605888, 8762249230 ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ರಕರ್ತ ಸಾವಿನ ಸುತ್ತ ‘ಅಕ್ರಮ ಅಕ್ಕಿ’ ವಾಸನೆ

ವರದಿ: ಮಲ್ಲಿಕಾರ್ಜುನ ತುಂಗಳ

**ರಬಕವಿ–ಬನಹಟ್ಟಿ:** ಬುಧವಾರ ಸಂಜೆ ಹೊತ್ತು ಬನಹಟ್ಟಿ–ಜಮಖಂಡಿ ರಸ್ತೆ ಮಧ್ಯೆ ಕೆಂಪು ಕೆರೆಯ ಸಮೀಪ ಬೈಕ್ ಮೇಲೆ ಹೋಗುತ್ತಿದ್ದ ವ್ಯಕ್ತಿಯೋರ್ವನಿಗೆ ಅಪರಿಚಿತ ವಾಹನ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಗುರುವಾರ ಜಮಖಂಡಿ ಗ್ರಾಮೀಣ ಠಾಣೆಯಿಂದ 8–10 ಜನ



ಸಂಂಶಯಸ್ಪಾದ ವ್ಯಕ್ತಿಗಳನ್ನು ವಿಚಾರಣೆ ನಡೆಸಿದ್ದಾರೆಂದು ತಿಳಿದು ಬಂದಿದ್ದು, ಅಪಘಾತದ ಹಿಂದೆ ಅಕ್ರಮ ಅಕ್ಕಿ ದಂಧೆಕೋರರ ಜಾಲವಿರುವ ಸಂಶಯ ವ್ಯಕ್ತವಾಗಿದೆ.

ಜಮಖಂಡಿ ತಾಲೂಕಿನ ಆಲಗೂರ ಗ್ರಾಮದ ಪತ್ರಕರ್ತ ಬಸವರಾಜ ಕಾನಗೊಂಡ(40) ಕಳೆದ ಬುಧವಾರ ಸಂಜೆ 5 ಗಂಟೆ ಸುಮಾರಿಗೆ ಬನಹಟ್ಟಿಯಿಂದ ಜಮಖಂಡಿ ಕಡೆಗೆ ತೆರಳುವಾಗ ಭಾರಿ ಅಪಘಾತದಿಂದ ಹಿಟ್ ಆಂಡ್ ರನ್ ಪ್ರಕರಣ ದಾಖಲಾಗಿತ್ತು. ಈ ಕುರಿತು ಮಾಹಿತಿ ಕಲೆ ಹಾಕುತ್ತಿರುವ ಪೊಲೀಸರು ಅಕ್ರಮ ದಂಧೆಯಲ್ಲಿ ತೊಡಗಿರುವ ರಬಕವಿ–ಬನಹಟ್ಟಿ ತಾಲೂಕು ಸೇರಿದಂತೆ ಹಲವೆಡೆಯ ಖದೀಮರನ್ನು ತನಿಖೆಗೊಳಪಡಿಸಲಾಗುತ್ತಿದೆಯೆಂದು ವಿಶ್ವಸನೀಯ ಮೂಲಗಳಿಂದ ತಿಳಿದು ಬಂದಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಕೈಗೊಂಡಿರುವ ಪೊಲೀಸರು ಸಿಸಿಟಿವಿ ದೃಶ್ಯಾವಳಿ ಮತ್ತು ಇತರೆ ತಾಂತ್ರಿಕ ಸಾಕ್ಷ್ಯಗಳನ್ನು ಕಲೆ ಹಾಕುತ್ತಿರುವ ಪೊಲೀಸರು ಅಪಘಾತದ ಕುರಿತು ತೀವ್ರ ಸಂಶಯ ವ್ಯಕ್ತವಾಗುವಲ್ಲಿ ಕಾರಣವಾಗಿದ್ದು, ಇದೊಂದು ಪೂರ್ವ ನಿಯೋಜಿತ ಕೃತ್ಯವಾಗಿರುವ ಶಂಕೆಯಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ವಾಹನವೊಂದನ್ನು ಜಮಖಂಡಿ ಪೊಲೀಸರು ಜಪ್ತಿ ಮಾಡಿದ್ದು, ತನಿಖೆ ಮತ್ತಷ್ಟು ಚುರುಕುಗೊಂಡಿರುವ ಕಾರಣ ತನಿಖೆಗೆ ಸಮಸ್ಯೆಯಾಗಬಾರದೆಂಬ ಉದ್ದೇಶದಿಂದ ಗೌಪ್ಯ ಸ್ಥಳದಲ್ಲಿ ಆರೋಪಿಗಳ ವಿಚಾರಣೆ ನಡೆಸಲಾಗುತ್ತಿದೆಯೆಂದು ತಿಳಿದು ಬಂದಿದೆ.

### ಅಕ್ರಮ ಅಕ್ಕಿ ದಂಧೆಯೇ ಕಾರಣ

ಪತ್ರಕರ್ತ ಬಸವರಾಜ ಕಾನಗೊಂಡರ ಅಪಘಾತವು ಸಂಶಯಾಸ್ಪದವಾಗಿರುವ ಹಿನ್ನಲೆ ಅಪರಿಚಿತ ವಾಹನದಿಂದ ಡಿಕ್ಕಿ ಹೊಡೆಸಿ ಪರಾರಿಯಾಗಿರುವ ಹಿನ್ನಲೆ ಅಕ್ರಮ ಅಕ್ಕಿ ದಂಧೆಯೇ ಕಾರಣವಾಗಿದೆಯೆಂಬ ಗುಮಾನಿ ಎದ್ದು ಕಾಣುತ್ತಿದೆ. ರಬಕವಿ–ಬನಹಟ್ಟಿ ಹಾಗು ಜಮಖಂಡಿ ತಾಲೂಕಿನಾದ್ಯಂತ ಬಡವರಿಗೆ ನೀಡುವ ಪಡಿತರ ಅಕ್ಕಿಯನ್ನು ಫಲಾನುಭವಿಗಳಿಗೆ ಹಾಗು ಕೆಲ ಪಡಿತರ ಮಳಿಗೆಗಳಿಂದ ಅಕ್ರಮವಾಗಿ ಮಹಾರಾಷ್ಟ್ರಕ್ಕೆ ಸಾಗಿಸಲಾಗುತ್ತಿದ್ದ ಅಕ್ರಮ ಅಕ್ಕಿ ದಂಧೆಕೋರರು ಇದೀಗ ಈ ಅಪಘಾತ ಪ್ರಕಣದಲ್ಲಿ ಸುತ್ತುವರೆದಿರುವದೇ ಪ್ರಮುಖ ಕಾರಣವಾಗಿದೆ.

## ಮೈಸೂರು ದಸರಾದಲ್ಲಿ ಮುತ್ತೇಶ್ವರ ದಟ್ಟ ಕುಣಿತ



**ಗೋಕಾಕ:** ಇಲ್ಲಿಯ ಕನ್ನಡ ಜಾನಪದ ಸಂಸ್ಥೆಯ ಅಡಿಯಲ್ಲಿ ಹಡಗಿನಾಳ ಶ್ರೀ ಮುತ್ತೇಶ್ವರ ದಟ್ಟಿ ಕುಣಿತ ಮೇಳವು 2025 ರ ವಿಶ್ವವಿಖ್ಯಾತ ಮೈಸೂರು ದಸರಾ ಭವ್ಯ ಮೆರವಣಿಗೆಯಲ್ಲಿ ಪ್ರದರ್ಶನ ನೀಡಿ ಜನರಿಂದ ಚಪ್ಪಾಳೆ ಹಾಗೂ ಕೆ ಕೆ ಯನ್ನು ಪಡೆಯಿತು.

ಮುಖ್ಯ ಮಂತ್ರಿ ಸಿದ್ದರಾಮಯ್ಯ, ಡಿ ಕೆ ಶಿವಕುಮಾರ್, ಮೈಸೂರು ಜಿಲ್ಲಾಧಿಕಾರಿ ಜಿ ಲಕ್ಷ್ಮಿಕಾಂತ, ಪೋಲಿಸ್ ಕಮಿಷನರ್ ಶ್ರೀಮತಿ ಸಿಮಾ ಲಾಟಕರ, ಬಿಂದುಮಣಿ, ಜಿ ರವಿ ಪ್ರಸಾದ್, ಡಾ ಡಿ ಎಮ್ ಸುದರ್ಶನ್, ಶ್ರೀಕುಮಾರ, ಸರ್ವಶ್ರೀ ಹೊನ್ನಪ್ಪ, ರಾಜೇಶ್, ಕೆಂಪಣ್ಣ, ನರಷಿಂಹ್ ಮಾದನಾಯ್ಕ್, ಹಾಗೂ ಲಕ್ಷ ಗಟ್ಟಲೆ ಪ್ರೇಕ್ಷಕರು ದಟ್ಟಿ ಕುಣಿತ ನೋಡಿ ಖುಷಿಪಟ್ಟರು. ಕೊಳಲು ವಾದಕರಾಗಿ ಬೆಂಗಳೂರಿನ ಗಾನರತ್ನ ರಾಜ್ಯ ಪ್ರಶಸ್ತಿ ಪುರಸ್ಕೃತ ಶಾಂತಯ್ಯಾ ಸಾಲಕಟ್ಟೆ ಭಾಗವಹಿಸಿದ್ದರು.

ಈ ಜಾನಪದ ತಂಡಕ್ಕೆ ಗೋಕಾಕ ಕನ್ನಡ ಜಾನಪದ ಸಂಸ್ಥೆಯ ಅಧ್ಯಕ್ಷ, ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಕಲಾವಿದ, ಸಾಹಿತಿ, ವಕೀಲರಾದ ಡಾ ಉದ್ದಣ್ಣಾ ಗೌಡರ(ಗೋಡೇರ)ಉತ್ತಮ ನಿರ್ದೇಸನ ನೀಡಿ ಕಾರ್ಯಕ್ರಮ ಯಶಸ್ವೀಗೊಳಿಸಿದರು. ತಂಡದ ಮುಖ್ಯಸ್ಥ ರಾಮಪ್ಪಾ ವಡೇರ ಭಾಗ ವಹಿಸಿ ಯಶಸ್ವಿಗೊಳಿಸಿದರು.

ಡಾ ಉದ್ದಣ್ಣಾ ಗೌಡರ ಅವರು ತಮ್ಮ ಗುರುಗಳಾದ ಡಾ ನಿಂಗಣ್ಣ ಸಣ್ಣಕಿ ಅವರನ್ನು ನೆನೆದು, ತಾಯಿ ಉದ್ದಮ್ಮನನ್ನು ನೆನೆದು, ಮೈಸೂರು ಚಾಮುಂಡಿಯನ್ನು ನೆನೆದು 35 ದಸರಾ ಮೆರವಣಿಗೆಗಳಲ್ಲಿ ದಟ್ಟಿ ಕುಣಿತ ಪ್ರದರ್ಶನ ನೀಡಿದ್ದನ್ನು ನೆನಪಿಸಿಕೊಂಡು ಖುಷಿಪಟ್ಟರು.

## ನ್ಯಾಯಮೂರ್ತಿ ಮೇಲೆ ಶೂ ಎಸೆತ ಕೃತ್ಯ ಖಂಡಿಸಿ ಮನವಿ

**ಜಮಖಂಡಿ:** ನಗರದ ಎ.ಜಿ.ದೇಸಾಯಿ ವೃತ್ತದಲ್ಲಿ ಬುಧವಾರ ಸುಪ್ರೀಂಕೋರ್ಟನ ಕಲಾಪದಲ್ಲಿ ಮುಖ್ಯ ನ್ಯಾಯ ಮೂರ್ತಿ ಬಿ.ಆರ್.ಗವಾಯಿ ಮೇಲೆ ಶೂಎಸೆದ ಕೃತ್ಯ ಖಂಡಿಸಿ ಬೃಹತ್ ಪ್ರತಿಭಟನೆಯೊಂದಿಗೆ ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅವರಿಗೆ ಮನವಿ ಸಲ್ಲಿಸಿದರು.

ನಂತರ ಪ್ರಮುಖರು ಮಾತನಾಡಿ, ಸುಪ್ರೀಂಕೋರ್ಟ ಕಲಾಪದ ಸಂದರ್ಭದಲ್ಲಿ ಸುಪ್ರೀಂಕೋರ್ಟ ಮುಖ್ಯ ನ್ಯಾಯ ಮೂರ್ತಿ ಬಿ.ಆರ್.ಗವಾಯಿ ಅವರತ್ತ ಶೂ ಎಸೆದು ಇಡೀ ದೇಶದ ನಾಗರಿಕ ಸಮಾಜ ತಲೆ ತಗ್ಗಿಸುವಂತಹ ಹೀನ ಕೃತ್ಯ ನಡೆದಿದೆ. ಇದು ದೇಶದ ಇತಿಹಾಸದಲ್ಲಿ ಮೊಟ್ಟಮೊದಲು ಸುಪ್ರೀಂಕೋರ್ಟ ಮುಖ್ಯ ನ್ಯಾಯಮೂರ್ತಿಗೆ ಅವಮಾನವಾಗಿದೆ.

ಇದರ ಹಿಂದಿನದಿನಗಳಲ್ಲಿ ಆರ್.ಎಸ್.ಎಸ್. ನೂರುವರ್ಷದ ಸಂಭ್ರಮಾಚರಣೆ ಸಂದರ್ಭದಲ್ಲಿ ನಾಗಪೂರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ ಭಾಗವತನು ಪಾಕಿಸ್ತಾನ ಮತ್ತು ನೇಪಾಳದ ಉದಾಹರಣೆಯಾಗಿ ಆದೇಶದಲ್ಲಿ ನೆಡೆದಂತಹ ಜನರ ದಂಗೆ ಭಾರತ ದೇಶದಲ್ಲಿ ನಡೆಯುವ ಸಮಯ ದೂರವಿಲ್ಲ ಎಂದು ಹೇಳಿದ್ದರು. ಇದಕ್ಕೆ ಪುಷ್ಠಿ ನೀಡುವಂತೆ ಬಿ.ಆರ್.



ಗವಾಯಿ ಮೇಲೆ ನಡೆದ ಹೀನಕೃತ್ಯ ನೋಡಿದರೆ ಬಹುಶಃ ಈ ದೇಶದಲ್ಲಿ ಸಂವಿಧಾನದಿಂದ ಅಸ್ಪೃಶ್ಯರು ಉನ್ನತ ಹುದ್ದೆಯಲ್ಲಿ ಇರುವ ಬಗ್ಗೆ ಅಸಹಿಷ್ಣತೆ ಹೇಳಿಕೆ ಇರಬಹುದು. ರಾಷ್ಟ್ರಪತಿಗಳು ಮಧ್ಯಪ್ರವೇಶಿಸಿ ಹೀನಕೃತ್ಯ ಎಸಗಿದ ವ್ಯಕ್ತಿ ವಿರುದ್ಧ ಸ್ವಯಂ ಪ್ರೇರಿತ ದೇಶದ್ರೋಹ ಪ್ರಕರಣ ದಾಖಲಿಸಿಕೊಂಡು ತನಿಖೆಗೆ ಆದೇಶ ನೀಡಬೇಕು ಎಂದರು.

ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಸಾಗರ ಬಣ) ನೇತೃತ್ವದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪೂರ ಅವರಿಗೆ ಈ ಘಟನೆ ಹಿಂದೆ ಯಾರಿದ್ದಾರೆ ಅವರನ್ನು ಗುರುತಿಸಿ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಜ್ಯ ದಲಿತ ಸಂಘರ್ಷ ಸಮಿತಿ (ಸಾಗರ ಬಣ) ಜಿಲ್ಲಾಸಂಚಾಲಕ ಪರಶುರಾಮ ಕಾಂಬಳೆ ಅವರ ನೇತೃತ್ವದಲ್ಲಿ ತಹಶೀಲ್ದಾರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಬಸವಕೇಂದ್ರ ಅಧ್ಯಕ್ಷ ರವಿ ಯಡಹಳ್ಳಿ, ನ್ಯಾಯವಾದಿ ಎಸ್.ಪಿ.ದೊಡಮನಿ, ಶರಣಕುಮಾರ ಕಂಬಾಗಿ, ಅಶೋಕ ಕಾಂಬಳೆ, ಅಂಬೇಡ್ಕರ ಸೇನೆ ಜಿಲ್ಲಾಧ್ಯಕ್ಷ ಸೂರಜ ಕುಡ್ರಾಣಿ, ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕುಮಾರ ಆಲಗೂರ, ಡಿಎಸ್‌ಎಸ್ ಅಂಬೇಡ್ಕರವಾದ ಪದಾಧಿಕಾರಿಗಳಾದ ಸಂಗಮೇಶ ಕಾಂಬಳೆ, ಸದಾಶಿವ ಐನಾಪುರ, ಬಸವರಾಜ ದೊಡಮನಿ, ಪರಸು ಕಾಂಬಳೆ, ಶಶಿಕಾಂತ ದೊಡಮನಿ, ಅಮೀತ ಸೂರಗೊಂಡ ಸಹಿತ ದಲಿತ ಸಂಘರ್ಷ ಸಮಿತಿ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

## ವಿದ್ಯಾರ್ಥಿಗಳಿಗೆ ಶಾಸಕರಿಂದ ಸನ್ಮಾನ




**ರಾಯಬಾಗ:** ತಾಲೂಕಿನ ಕುಡಚಿ ಪಟ್ಟಣದ ಬಾಗೆ ಗೋಲ್ಡನ್ ಅಕಾಡೆಮಿಯಲ್ಲಿ ವಿದ್ಯಾಭ್ಯಾಸ ಮಾಡಿ ವೈದ್ಯಕೀಯ ಹಾಗೂ ಇಂಜಿನಿಯರಿಂಗ್ ವಿದ್ಯಾಭ್ಯಾಸಕ್ಕೆ ಆಯ್ಕೆಯಾದ 78 ವಿದ್ಯಾರ್ಥಿಗಳನ್ನು ಶಾಸಕ ಮಹೇಂದ್ರ ತಮ್ಮಣ್ಣವರ ಸತ್ಕರಿಸಿ ಅಭಿನಂದಿಸಿದರು.

ನಂತರ ಮಾತನಾಡಿದ ಅವರು ಹಳ್ಳಿಯ ಭಾಗದಲ್ಲಿ ಸಾಧನೆ ಮಾಡಿದ್ದು ಖುಷಿ ತಂದಿದೆ ತಮ್ಮ ವಿದ್ಯಾಭ್ಯಾಸ ಮುಗಿಸಿ ಸ್ಥಳೀಯವಾಗಿ ಉತ್ತಮ ಸೇವೆ ನೀಡಬೇಕು ಎಂದು ಹೇಳುತ್ತಾ ಶುಭ ಕೋರಿದರು.ನಂತರ ಜುನ್ನೇದಿಯಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಇಕಬಾಲ ಸತ್ತಾರ ಮಾತನಾಡಿ ಒಂದು ಕಾಲ ಇತ್ತು ತಂದೆ ತಾಯಿಗೆ ಅವರ ಮಗ ಯಾವ ತರಗತಿಯಲ್ಲಿ ಓದುತ್ತಿದ್ದಾನೆ ಅಂತ ಗೊತ್ತಿರಲಿಲ್ಲ ವಿದ್ಯಾಭ್ಯಾಸ ಮಾಡಲು ನಗರಗಳತ್ತ ಮುಖ ಮಾಡಬೇಕಾಗಿತ್ತು ಇವತ್ತು ಕುಡಚಿ ಪಟ್ಟಣ ಬದಲಾಗಿದ್ದು ಹೊರಗಿನ ಜನ ಕುಡಚಿ ಪಟ್ಟಣದ ಕಡೆಗೆ ಮುಖ ಮಾಡುವಂತೆ ಆಗಿದೆ ಎಂದರು. ಈ ಸಂದರ್ಭದಲ್ಲಿ ಬಾಗೆ ಗೋಲ್ಡನ್ ಅಕ್ಯಾಡಮಿ ಅಧ್ಯಕ್ಷ ಸಲೀಮ ಬಾಗೆ ಕುಡಚಿ ಶಾಸಕ ಮಹೇಂದ್ರ ತಮ್ಮಣ್ಣವರ, ಪುರಸಭೆ ಅಧ್ಯಕ್ಷ ಹಮಿದೋದಿನ ರೋಹಿಲೆ, ಜುನ್ನೇದಿಯಾ ಶಿಕ್ಷಣ ಸಂಸ್ಥೆ ಅಧ್ಯಕ್ಷ ಇಕಬಾಲ ಸತ್ತಾರ, ಮಿರಜದ ವೈದ್ಯರಾದ ಎಲುಬು ಕೀಲು ವೈದ್ಯರಾದ ಡಾ. ಪ್ರಾಣಿ, ಮಕ್ಕಳ ತಜ್ಞರಾದ ಡಾ. ಕಾರಂಜಿ, ಸಿಬ್ಬಂದಿ, ಪಾಲಕರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಗ್ರಾಮಸ್ಥರು ಉಪಸ್ಥಿತರಿದ್ದರು.

**ದ್ವೇಷ ಭಾವನೆ ತೊರೆಯಲು ಶಾಂತಿ ಸಂದೇಶ: ಸಚಿವ ತಿಮ್ಮಾಪೂರ**

## ವಿಶ್ವಶಾಂತಿಗಾಗಿ ಸರ್ವ-ಧರ್ಮ ಮಹಾ ಸಂಗಮ

**ರಬಕವಿ–ಬನಹಟ್ಟಿ:** ವಿಶ್ವದಲ್ಲಿ ಸಹೋದರತೆ ಭಾವನೆಯಿಂದ ನಡೆಯುವ ಸಲುವಾಗಿ ತಾಲೂಕಿನ ಬಂಡಿಗಣಿಯ ಬಸವಗೋಪಾಲ ನೀಲಮಾಣಿಕಮಠದಲ್ಲಿ ಬರುವ ದಿ.13 ರಂದು ಜರುಗುವ ‘ವಿಶ್ವಶಾಂತಿಗಾಗಿ ಸರ್ವ–ಧರ್ಮ ಮಹಾ ಸಂಗಮವನ್ನು ಎಲ್ಲ ಧರ್ಮ ಗುರುಗಳ ಸಾನಿಧ್ಯದಲ್ಲಿ ನಡೆಸಲಾಗುತ್ತಿದೆಯೆಂದು ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ. ತಿಮ್ಮಾಪೂರ ತಿಳಿಸಿದರು.

ಬಂಡಿಗಣಿಮಠಕ್ಕೆ ಭೆಟ್ಟಿ ನೀಡಿ ಮಾತನಾಡಿದ ಅವರು, ಜಾತಿ–ಜಾತಿಗಳ ಮಧ್ಯೆ ದ್ವೇಷ ಭಾವನೆಗಳನ್ನು ತೊರೆದು ಮಾನವ ಧರ್ಮ ಒಂದೇ ಎಂದು ಸಾರುವ ಮೂಲಕ ಶಾಂತಿ ಸಂದೇಶಕ್ಕೆ ಸಮಾರಂಭ ಸಾಕ್ಷಿಯಾಗಲಿದೆ. ರಾಜ್ಯ ಮುಖ್ಯಮಂತ್ರಿ ಸಿದ್ಧರಾಮಯ್ಯ, ಸತೀಶ ಜಾರಕಿಹೊಳಿ ಸೇರಿದಂತೆ ಅನೇಕ ಸಚಿವ, ಶಾಸಕರುಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆಂದು ತಿಮ್ಮಾಪೂರ ತಿಳಿಸಿದರು.

ಬೃಹತ್ ಸಮಾವೇಶವು ಇತಿಹಾಸ ಸೃಷ್ಟಿಸುವಲ್ಲಿ ಕಾರಣವಾಗಿದ್ದು, ಲಕ್ಷಾಂತರ ಭಕ್ತರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆಂದರು. ಕಾರ್ಯಕ್ರಮ ಸಿದ್ಧತೆಯನ್ನು ಜಿಲ್ಲಾಡಳಿತ ಅಚ್ಚುಕಟ್ಟಾಗಿ ನಿರ್ವಹಿಸುತ್ತಿದ್ದು, ಅಧಿಕಾರಿಗಳಿಗೆ ಧನ್ಯವಾದ ತಿಳಿಸಿದರು.

ರಾಜ್ಯವಷ್ಟೇ ಅಲ್ಲದೆ ನೆರೆಯ ರಾಜ್ಯಗಳಿಂದಲೂ



ಭಕ್ತಗಣ ಹರಿದು ಬರುವ ಕಾರಣ ಪಾರ್ಕಿಂಗ್, ಆಸನ, ಭೋಜನ ವ್ಯವಸ್ಥೆ ಸೇರಿದಂತೆ ಎಲ್ಲವನ್ನೂ ಅಚ್ಚುಕಟ್ಟಾಗಿ ನಿರ್ವಹಿಸುವಲ್ಲಿ ಶ್ರೀಮಠ ಹಾಗು ಅಧಿಕಾರಿಗಳ ತಂಡ ಭರದ ಸಿದ್ಧತೆಯಲ್ಲಿರುವದನ್ನು ಸಚಿವರು ವೀಕ್ಷಿಸಿದರು.

ಇದೇ ಸಂದರ್ಭ ಬಸವಗೋಪಾಲಮಠದ ದಾನೇಶ್ವರಶ್ರೀಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್, ಡಿವೈಎಸ್ಪಿ ಎಸ್. ಜಮೀರ ರೋಷನ್, ಸಿಪಿಯ ಸಂಜು ಬಳಗಾರ, ಪಿಎಸ್‌ಐ ಶಾಂತಾ ಹಳ್ಳಿ ಉಪಸ್ಥಿತರಿದ್ದರು.

# ಕೃಷಿಯಲ್ಲಿ ತಳಿಗಳ ಸಂರಕ್ಷಿಸಿದರೆ ನಮ್ಮ ಸಂಸ್ಕೃತಿ ರಕ್ಷಿಸಿದಂತೆ

**ಧಾರವಾಡ:** ಕೃಷಿಯಲ್ಲಿ ಸಾಂಪ್ರದಾಯಿಕ ತಳಿಗಳ ಸಂರಕ್ಷಣೆ ಮಾಡಿದರೆ ಅದು ನಮ್ಮ ಸಂಸ್ಕೃತಿಯನ್ನು ರಕ್ಷಿಸಿದಂತೆ. ಅಂತಹ ಸಾಂಪ್ರದಾಯಿಕ ತಳಿಗಳನ್ನು ಮುಂದಿನ ಪೀಳಿಗೆಗೆ ಸಂರಕ್ಷಿಸಿ ಪರಿಚಯಿಸುವ ಅಗತ್ಯವಿದೆ ಎಂದು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಸಂಶೋಧನಾ ನಿರ್ದೇಶಕ ಡಾ. ಬಿ.ಡಿ. ಬಿರಾದಾರ ಹೇಳಿದರು.

ಕರ್ನಾಟಕ ವಿದ್ಯಾವರ್ಧಕ ಸಂಘವು, ಪ್ರೊ. ಶಿವರಾಜ ಅಮೃತಪ್ಪ ಹೊಸಮನಿ ದತ್ತಿ ಅಂಗವಾಗಿ ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ‘ಕೃಷಿಯಲ್ಲಿ ಸಾಂಪ್ರದಾಯಿಕ ತಳಿಗಳ ಇಂದಿನ ಅಗತ್ಯತೆ’ ವಿಷಯ ಕುರಿತು ಮಾತನಾಡುತ್ತಿದ್ದರು

ಭಾರತವು ಇಂದು ‘ಹಸಿರು ಕ್ರಾಂತಿ’ಯ ಪರಿಣಾಮದಿಂದ ಆಹಾರೋತ್ಪಾದನೆಯಲ್ಲಿ ಸ್ವಾವಲಂಬನೆ ಸಾಧಿಸಿದೆ. ಆದರೆ ನಾವು ಸೇವಿಸುತ್ತಿರುವ ಆಹಾರ ಧಾನ್ಯಗಳಲ್ಲಿ ಪೋಷಕಾಂಶಗಳ ಕೊರತೆ ಕಂಡು ಬಂದಿದ್ದರಿಂದ ಮನುಷ್ಯ ಅನೇಕ ರೋಗರುಜಿನಗಳಿಗೆ ಬಲಿಯಾಗುತ್ತಿದ್ದಾನೆ. ಒಂದು ರೀತಿ ಅವನು ಉತ್ಸಾಹವಿಲ್ಲದ



ಜೀವನ ವಿಧಾನ ಹೊಂದಿದ್ದಾನೆ. ಇದಕ್ಕೆ ಕಾರಣ ಸಾಂಪ್ರದಾಯಿಕ ತಳಿಗಳನ್ನು ಬೆಳೆಯದೇ ಇರುವುದು. ಸಾಂಪ್ರದಾಯಿಕ ತಳಿಗಳಲ್ಲಿ ಮನುಷ್ಯನ ಆರೋಗ್ಯ ವರ್ಧನೆಗೆ ಬೇಕಾಗುವ ಶಕ್ತಿ ಇರುವುದನ್ನು ಕಾಣಬಹುದು.

ದಿ. ಪ್ರೊ. ಶಿವರಾಜ ಅಮೃತಪ್ಪ ಹೊಸಮನಿ ಈ ನಾಡಿನ ಶ್ರೇಷ್ಠ ಕೃಷಿ ವಿಜ್ಞಾನಿಯಾಗಿದ್ದರು. ಅವರು ಬಿಜಾಪೂರದ ಒಣ ಬೇಸಾಯ ಸಂಶೋಧನಾ ಕೇಂದ್ರದಲ್ಲಿ ಬೇಸಾಯ ಶಾಸ್ತ್ರಜ್ಞರಾಗಿ, ಮಳೆ ಕಡಿಮೆ ಬೀಳುವಲ್ಲಿ ಲಭ್ಯವಿರುವ ಅತ್ಯಲ್ಪ ನೀರನ್ನು ಸಂಗ್ರಹಿಸಲು ಕೃಷಿ ಹೊಂಡಗಳ ನಿರ್ಮಾಣದ ಕಲ್ಪನೆ ನೀಡಿ, ಒಣ ಬೇಸಾಯ ಪದ್ಧತಿ ಹೇಗೆ ಲಾಭದಾಯಕ ಎಂಬುದನ್ನು ಮಾರ್ಗದರ್ಶನ ಮಾಡಿದವರು. ಸರಕಾರವೂ ಸಹ ಅವರ ಕೃಷಿ ಹೊಂಡದ ಕಲ್ಪನೆಯಿಂದ ಪ್ರಭಾವಿತವಾಗಿ ‘ಕೃಷಿ ಭಾಗ್ಯ’ ಎಂಬ ಯೋಜನೆ ಜಾರಿಗೆ ತಂದದ್ದನ್ನು ಸ್ಮರಿಸಬಹುದೆಂದು ತಿಳಿಸಿದರು.

ದತ್ತಿದಾನಿಗಳಾದ ಪ್ರಗತಿಪರ ರೈತ ಈಶ್ವರಚಂದ್ರ ಹೊಸಮನಿ ಮಾತನಾಡಿ, ಕ.ವಿ.ವ. ಸಂಘವು ಸಾಹಿತ್ಯ ಜೊತೆ ಕೃಷಿಯ ಬಗ್ಗೆಯೂ ಚಿಂತನ–ಮಂಥನ ಮಾಡಬೇಕೆಂಬ ಉದ್ದೇಶದಿಂದ ತಮ್ಮ ತಂದೆ ಪ್ರೊ. ಶಿವರಾಜ ಅ. ಹೊಸಮನಿ ಹೆಸರಿನಿಂದ ದತ್ತಿ ಇಡಲಾಗಿದೆ. ರೈತರಿಗೆ ಕೃಷಿ ಲಾಭದಾಯಕ ಎನ್ನುವುದನ್ನು ಮನವರಿಕೆ ಮಾಡುವ ಉದ್ದೇಶವಾಗಿದೆ ಎಂದರು.

ಕ.ವಿ.ವ. ಸಂಘದ ಅಧ್ಯಕ್ಷ ಚಂದ್ರಕಾಂತ ಬೆಲ್ಲದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶಂಕರ ಕುಂಬಿ ಸ್ವಾಗತಿಸಿದರು. ವೀರಣ್ಣ ಒಡ್ಡೀನ ಪ್ರಾಸ್ತಾವಿಕವಾಗಿ ಮಾತನಾಡಿದರು. ಗುರು ಹಿರೇಮಠ ನಿರೂಪಿಸಿದರು. ಡಾ. ಶೈಲಜಾ ಅಮರಶೆಟ್ಟಿ ವಂದಿಸಿದರು.

ಡಾ. ಸಂಜೀವ ಕುಲಕರ್ಣಿ, ಪ್ರೊ. ಐ.ಜಿ. ಸನದಿ, ಪಿ.ಎಚ್. ನೀರಲಕೇರಿ, ಸಿದ್ಧಣ್ಣ ಕಂಬಾರ, ಕಲ್ಲಪ್ಪ ಯಲಿವಾಳ, ಎಂ.ಎಫ್. ಹಿರೇಮಠ, ಅಮೃತ ಬೊಳ್ಳೊಳ್ಳಿ, ಶ್ರೀಶೈಲಗೌಡ ಕಮತರ, ಕೃಷಿ ವಿ.ವಿ. ಪ್ರಾಧ್ಯಾಪಕರು, ಹೊಸಮನಿ ಪರಿವಾರದವರು ಇದ್ದರು.

# ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

**ಬೆಳಗಾವಿ:** ಪ್ರಸಕ್ತ ಸಾಲಿಗೆ ಕೇಂದ್ರ ಸರ್ಕಾರದ ರಾಷ್ಟ್ರೀಯ ವಿದ್ಯಾರ್ಥಿ ವೇತನ (ನ್ಯಾಷನಲ್‌ಇ–ಸ್ಕಾಲರ್‌ಶಿಫ್) ಯೋಜನೆಯಡಿ ಪ್ರೀಮ್ಯಾಟ್ರಿಕ್ 9ನೇ ಮತ್ತು 10ನೇ ತರಗತಿ ವಿಕಲಚೇತನ ವಿದ್ಯಾರ್ಥಿಗಳಿಗೆ ಮಾತ್ರ ನೀಡಲಾಗುವ ವಿದ್ಯಾರ್ಥಿ ವೇತನಕ್ಕಾಗಿ NSP Portal ನಲ್ಲಿ ಆನ್‌ಲೈನ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಶಾಲೆಗಳು ಹಾಗೂ ಶಿಕ್ಷಣ ಸಂಸ್ಥೆಗಳ ಮುಖಾಂತರ ಸದರಿ ಯೋಜನೆಯನ್ನು ಅಕ್ಟೋಬರ, 31, 2025 ರ ಒಳಗಾಗಿ Website: www.scholarship.gov.in ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ವಿಕಲಚೇತನ ವಿದ್ಯಾರ್ಥಿಗಳನ್ನು ಹೆಚ್ಚಾಗಿ ಟ್ರ್ಯಾಕಿಂಗ್ ಮಾಡುವ ಸಂಬಂಧ (OTR) One Time Registration ನೋಂದಣಿಯನ್ನು NSP ತಂತ್ರಾಂಶದಲ್ಲಿ ಅಳವಡಿಸಲಾಗಿದ್ದು, ಅದರಲ್ಲಿ ಈ ಹಿಂದೆ face authentication ತಂತ್ರಾಂಶವನ್ನು ಅಳವಡಿಸಲಾಗಿದ್ದು, ಮುಂದುವರೆದು ಪ್ರಿಮೆಟ್ರಿಕ್ ವ್ಯಾಸಂಗ ಮಾಡುತ್ತಿರುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕೆ ಅರ್ಜಿ ಸಲ್ಲಿಸಲು ಅನುಕೂಲವಾಗುವ ನಿಟ್ಟಿನಲ್ಲಿ face authentication ಬದಲಾಗಿ Biometric Authentication ಮೂಲಕ ಸಹ ಸಿ.ಎಸ್.ಸಿ ಕೇಂದ್ರ ಹಾಗೂ ಬಾಪೂಜಿ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.ಅರ್ಜಿ ಸಲ್ಲಿಸಲು ದಿನಾಂಕ:15–11–2025 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ Website: www.disabilityaffairs.gov.in ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರೆಡ್ ಕ್ರಾಸ್ ಕಾರ್ಯಕಾರಿ ಸಮಿತಿ ಚುನಾವಣೆ

# ಅಂತಿಮ ಸದಸ್ಯರ ಪಟ್ಟಿ ಪ್ರಕಟ

**ಬೆಳಗಾವಿ:** ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಇವರ ಆದೇಶದಂತೆ ಹಾಗೂ ಸಂಸ್ಥೆಯ ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ಜೂನ್, 13. 2025 ರಂತೆ ಸನ್ 2025 ರಿಂದ 28 ರ ವರೆಗಿನ ಅವಧಿಗೆ ಕಾರ್ಯಕಾರಿ ಸಮಿತಿಯನ್ನು ರಚಿಸಲು ಚುನಾವಣೆಯನ್ನು ನಡೆಸಲಾಗುತ್ತಿದ್ದು, ಸಂಸ್ಥೆಯ ಕಚೇರಿಯಲ್ಲಿ ಲಭ್ಯವಿರುವ ಕರಡು ಸದಸ್ಯರ ಪಟ್ಟಿಯನ್ನು ಎಲ್ಲರ ಗಮನಕ್ಕೆ ತರಲು https://belagavi.nic.in/en/indian-red-cross-society-belagavi/ ವೆಬ್‌ಸೈಟ್ ನಲ್ಲಿ ಪ್ರಕಟಿಸಲಾಗಿತ್ತು. ಅಗಸ್ಟ, 29, 2025 ರಿಂದ ಸೆಪ್ಟಂಬರ, 29. 2025 ರವರೆಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿತ್ತು. ಎಲ್ಲ ಆಕ್ಷೇಪಣೆಗಳ ಮೇಲೆ ವಿಚಾರಣೆ ಜರುಗಿಸಿ ಆದೇಶ ಹೊರಡಿಸಿ ಸದಸ್ಯರ ಪಟ್ಟಿಯನ್ನು ಅಂತಿಮಗೊಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ವಿಳಾಸ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ ಹೆರಿಗೆ ವಾರ್ಡನ ಎದುರು, ನಗರದ ಬಿಮ್ಸ್ ಆಸ್ಪತ್ರೆ ಆವರಣಕ್ಕೆ ಹಾಗೂ ಕಛೇರಿ ದೂರವಾಣಿ ಸಂಖ್ಯೆ: 0831–2450071 ಅಥವಾ ircsddrcbgm@gmail.com ಇ–ಮೇಲ್‌ನ್ನು ಸಂಪರ್ಕಿಸಬಹುದಾಗಿದೆ ಎಂದು ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಚುನಾವಣಾಧಿಕಾರಿಗಳು ಹಾಗೂ ಬಿಮ್ಸ್ ಮುಖ್ಯ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪರಿಚಿತ ವ್ಯಕ್ತಿ ಶವ ಪತ್ತೆ

**ಬೆಳಗಾವಿ:** ನಗರದ ದೇಸೂರು ರೈಲು ನಿಲ್ದಾಣಗಳ ಮದ್ಯ ಅಪರಿಚಿತ ವ್ಯಕ್ತಿಯು ಚಲಿಸುತ್ತಿರುವ ರಾಣಿ ಚನ್ನಮ್ಮ ಎಕ್ಸಪ್ರೆಸ್ ರೈಲು ಗಾಡಿಯ ಮುಂದೆ ಬಿದ್ದು ಸ್ಥಳದಲ್ಲಿಯೇ ಮೃತಪಟ್ಟಿರುತ್ತಾನೆ ಎಂದು ನಗರದ ರೈಲ್ವೆ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಮೃತಪಟ್ಟ ಅಂದಾಜು 35–40 ವರ್ಷ ವಯಸ್ಸಿನ ಅಪರಿಚಿತ ವ್ಯಕ್ತಿಯು 5.6 ಅಡಿ ಎತ್ತರ, ಸಾದ ಗಪ್ಪು ಮೈ ಬಣ್ಣ, ಮೈಯಿಂದ ಸದೃಡ, ಉದ್ದು ಮುಖ, ದಪ್ಪನೆಯ ಮೂಗೂ, ತಲೆಯಲ್ಲಿ ಕಪ್ಪು ಕೂದಲು, ಸಣ್ಣಗೆ ಮೀಸೆ. ಮೃತನ ಎಡಗೈ ಮೇಲೆ K Gundamma ಅಂತಾ ಹಚ್ಚೆ ಗುರುತು ಇರುತ್ತದೆ. ಹಸಿರು ಬಣ್ಣದ ರೌಂಡ್ ಕಾಲರ್ ಹಾಪ್ ಟೀ ಶರ್ಟ, ಬೂದಿ ಬಣ್ಣದ ಪುಲ್ ಪ್ಯಾಂಟ್ ಧರಿಸಿರುತ್ತಾನೆ. ಮೃತಪಟ್ಟ ಅಪರಿಚಿತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ದೊರೆತಲ್ಲಿ ರೈಲ್ವೆ ಪೋಲಿಸ್ ಠಾಣೆ ದೂರವಾಣಿ ಸಂಖ್ಯೆ: (0831) 2405273, 9480802127 ಅಥವಾ ರೈಲ್ವೆ ಪೋಲೀಸ್ ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ. (080) 22871291 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರೈಲ್ವೆ ಪೋಲೀಸ್ ಠಾಣೆಯ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ತಂತಿ ತಗುಲಿ ಯುವಕ ಸಾವು

**ಜಮಖಂಡಿ:** ನಗರದ ಚಿಕ್ಕಲಗಾರ ಬಡಾವಣೆ ಯುವಕನೊರ್ವನಿಗೆ ಬೆಳಗಿನಜಾವ ವಿದ್ಯುತ್ ತಂತಿ ತಗುಲಿ ಸ್ಥಳದಲ್ಲಿ ಸಾವನ್ನಪ್ಪಿದ ಘಟನೆ ನಡೆದಿದೆ. ನಗರದ ದಿ.ಸಿದ್ದು ನ್ಯಾಮಗೌಡ ಬೈಪಾಸ್ ರಸ್ತೆಯಲ್ಲಿನ ಚಿಕ್ಕಲಗಾರ ಬಡಾವಣೆಯ ಯುವಕ ದರ್ಶನ ಚಂದ್ರಶೇಖರ ಚಿಕ್ಕಲಗಾರ (20) ಸಾವನ್ನಪ್ಪಿದ ದುರ್ದೈವಿ. ಬೆಳಗಿನ ಜಾವದಲ್ಲಿ ದೇವಸ್ಥಾನದ ಮೇಲೆ ವಿದ್ಯುತ್ ಬಲ್ಪ್ ಜೋಡಣೆ ಸಂದರ್ಭದಲ್ಲಿ ದೇವಸ್ಥಾನದ ಮೇಲೆ ಹಾದಿರುವ ಮುಖ್ಯ ವಿದ್ಯುತ್ ಕಂಬದ ತಂತಿ ಮೃತನ ಕೈ ತಗುಲಿದ ಕಾರಣ ಸ್ಥಳದಲ್ಲಿ ಸಾವನ್ನಪ್ಪಿದ್ದಾನೆಂದು ತಿಳಿದು ಬಂದಿದೆ. ಸ್ಥಳಕ್ಕೆ ಶಹರ ಪೋಲಿಸರು ಭೇಟಿ ನೀಡಿದ್ದು, ತನಿಖೆ ನಡೆದಿದೆ. ಪ್ರಕರಣ ದಾಖಲಾಗಿದ್ದು, ಕುಟುಂಬಸ್ಥರ ಆಕ್ರಂದಣ ಮುಗಿಲು ಮುಟ್ಟುವಂತಿತ್ತು.



# ಬಡವರ ಬದುಕು ಹಸನಾಗಿಸುಲ್ಲಿ ಗ್ಯಾರಂಟಿ ಯೋಜನೆಗಳ ಪಾತ್ರ ಮಹತ್ವದ್ದು




**ಗದಗ:** ರಾಜ್ಯ ಸರ್ಕಾರದಿಂದ ಅನುಷ್ಠಾನ ಗೊಂಡಿರುವ ಪಂಚ ಗ್ಯಾರಂಟಿ ಯೋಜನೆಗಳು ಬಡವರ ಬದುಕು ಹಸನಾಗುವಲ್ಲಿ ಮಹತ್ವದ ಪಾತ್ರ ವಹಿಸಿವೆ. ಬಡ ಜನರ ಜೀವನ ಮಟ್ಟ ಸುಧಾರಣೆಗೆ ಇವು ಸಹಕಾರಿಯಾಗಿವೆ ಎಂದು ಗದಗ ತಾಲೂಕಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಹೇಳಿದರು.

ಗುರುವಾರ ಗದಗ ತಾಲೂಕಾ ಯಲಿಶಿರೂರ ಹಾಗೂ ಹರ್ತಿ ಗ್ರಾಪಂ ವ್ಯಾಪ್ತಿಯಲ್ಲಿ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಾರ್ವಜನಿಕ ಅಹವಾಲು ಸ್ವೀಕಾರ, ಸಮಸ್ಯೆಗಳ ಪರಿಹಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ ಗದಗ ತಾಲೂಕಿನಲ್ಲಿ ಶೇ 97.7 ರಷ್ಟು ಗುರಿ ಸಾಧನೆ ಮಾಡಿದ್ದು ಸಮಸ್ಯೆಗಳ ಪರಿಹಾರಕ್ಕಾಗಿ ವಿಶೇಷ ಘಭೆಯನ್ನು ಗ್ರಾಪಂ ಮಟ್ಟದಲ್ಲಿ ಏರ್ಪಡಿಸಲಾಗಿದ್ದು ಸಭೆಯ ಮೂಲಕ ಶೇಕಡ ನೂರರಷ್ಟು ಗುರಿ ಸಾಧನೆ ಮಾಡಲಾಗುವುದು ಎಂದರು.

ಪಂಚ ಗ್ಯಾರಂಟಿ ಯೋಜನೆಗಳು ನೇರವಾಗಿ ಫಲಾಭವಿಗಳಿಗೆ ದೊರೆಯುವ ನಿಟ್ಟಿನಲ್ಲಿ ಪ್ರತಿ ಹಂತದಲ್ಕಿ ಸಭೆ, ಪ್ರಗತಿ ಪರಿಶೀಲನೆ ನಡೆಸುತ್ತಿದ್ದು ಸರ್ಕಾರದ ಈ ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಯೋಜನೆಯ ಯಶಸ್ಸು ಸಾಧಿಸುವ ಮೂಲಕ ರಾಜ್ಯದ ಎಲ್ಲ ಬಡ ಕುಟುಂಬಗಳು ಬಡತನ ರೇಖೆಯಿಂದ ಹೊರಬಂದು ಸ್ವಾವಲಂಬಿ ಜೀವನ ನಡೆಸಲು ಆ ಮೂಲಕ ಜನರ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಗುಣಮಟ್ಟ ಸುಧಾರಣೆಯಾಗಬೇಕು. ಆ ದಿಶೆಯಲ್ಲಿ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್. ಕೆ. ಪಾಟೀಲ ಅವರ ಮಾರ್ಗದರ್ಶನದಲ್ಲಿ ಗದಗ ಮತಕ್ಷೇತ್ರದಲ್ಲಿ ಜನರ ಮನೆಬಾಗಿಲಿಗೆ ಯೋಜನೆ ಫಲಾನುಭವಿಗಳ ಪರಿಹಾರಕ್ಕಾಗಿ ಸಭೆ ಆಯೋಜಿಸಲಾಗಿದೆ ಎಂದರು.

ಗ್ಯಾರಂಟಿ ಯೋಜನೆ ಪ್ರಾಧಿಕಾರದ ಸದಸ್ಯರಾದ ಕೃಷ್ಣಗೌಡ ಎಚ್. ಪಾಟೀಲ ಮಾತನಾಡಿದರು. ಯೋಜನೆಗಳ ಸೌಲಭ್ಯಗಳು ಬಡವರ ಬದುಕು ರೂಪಿಸುವಲ್ಲಿ ಯಶಸ್ವಿಯಾಗುತ್ತಿವೆ. ಆ ನಿಟ್ಟಿನಲ್ಲಿ ಗ್ಯಾರಂಟಿ ಯೋಜನೆಗಳಿಂದ ಮಾನವ ಹಕ್ಕುಗಳನ್ನು ಎತ್ತರಿಸುವಲ್ಲಿ ಸಹಕಾರಿಯಾಗಿವೆ. ಇರುವ ತಂತ್ರಜ್ಞಾನಗಳನ್ನು ಬಳಸಿಕೊಂಡು ಜನರಿಗೆ ಯೋಜನೆಗಳು ದೊರೆಯಲು ಹಾಗೂ ಆಗುವ ಅಡಚಣೆಗಳ ನಿವಾರಣೆಗಾಗಿಯೇ ಗದಗ ತಾಲೂಕಿನ ಗ್ರಾಪಂ ಮಟ್ಟದಲ್ಲಿ ಅಹವಾಲು ಸ್ವಿಕಾರ, ಸಮಸ್ಯೆಗಳಿಗೆ ಪರಿಹಾರ ಕೊಡುವ ಮೂಲ ಉದ್ದೇಶದಿಂದ ಪ್ರತಿ ಗ್ರಾಪಂ ವ್ಯಾಪ್ತಿಯಲ್ಲಿ ಸಭೆ ನಡೆಸುವ ಮೂಲಕ ಬಡವರ ಕೆಲಸ ಸರಾಗವಾಗಿ ಮುಟ್ಟಲು ತಾಲೂಕಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ವಿಶೇಷ ಕಾರ್ಯವನ್ನು ಮಾಡುತ್ತಿದೆ. ಪಂಚ ಗ್ಯಾರಂಟಿ ಯೋಜನೆಗಳ ಗುರಿ ಸಾಧನೆ ಶೇ 97.7 ರಷ್ಟಾಗಿದೆ. ಪ್ರತಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಯಾವುದೇ ತರಹದ ತಾಂತ್ರಿಕ ದೋಷಗಳು ಕಂಡುಬಂದಲ್ಲಿ ಸಂಬಂಧಪಟ್ಟ ಗ್ರಾ.ಪಂ. ಅಧ್ಯಕ್ಷರು, ಪಿಡಿಓ ಗಳು ತಾಲೂಕು ಮತ್ತು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆ ಪ್ರಾಧಿಕಾರದ ಗಮನಕ್ಕೆ ತಂದು ಪರಿಹರಿಸಿಕೊಳ್ಳಬಹುದಾಗಿದೆ ಎಂದರು.

ಈ ಸಂದರ್ಭದಲ್ಲಿ ಮಲ್ಲಪ್ಪ ದಂಡಿನ, ಗಣೇಶಸಿಂಗ್ ಮಿಠಡೆ, ಸಾವಿತ್ರಿ ಹೂಗಾರ, ಮಲ್ಲು ಬಾರಕೇರ, ಅಜ್ಜಪ್ಪ ಹುಗ್ಗೆಣ್ಣವರ,ದೇಸಾಯಿ, ಮೀನಾಕ್ಷಿ ಬೆನಕಣ್ಣವರ, ಯಲಿಶಿರೂರ ಗ್ರಾಮದ ನಿಂಗನಗೌಡ ಪಾಟೀಲ, ಗಂಗಯ್ಯ ಹಿರೇಮಠ, ಪರಶುರಾಮ ಹುಗಾರ, ಸುರೇಶ ಹೊಸಮನಿ, ಮಂಜುನಾಥ ಯಲಿ, ಮಂಜುನಾಥ ಭಜಂತ್ರಿ, ಶರಣಪ್ಪ ಡೊಣಿ, ತಾಜುದ್ದೀನ ಹೊಂಬಳ, ಕೊಟ್ರೇಶ ಕುಂದ್ರಳ್ಳಿ ಹರ್ತಿ ಗ್ರಾಮದಲ್ಲಿ ಪಿಡಿಓ ಶಿವಲೀಲಾ ಅಂಗಡಿ, ಬಿ.ಟಿ. ಸೋಮರಡ್ಡಿ, ಮಹೇಶ ಪಟ್ಟಣಶೆಟ್ಟಿ,ಪಿ.ಎಸ್. ಪಾಟೀಲ, ಎಫ್. ಎಸ್ ಪಾಟೀಲ, ಮಂಜುಳಾ ಬುದ್ದಪ್ಪನವರ, ಮುತ್ತು ನೀಲಗುಂದ, ಅಮರ ಕುರ್ತಕೋಟಿ, ಬಸವರಾಜ ಗಣಾಚಾರಿ, ಎಸ್.ವ್ಹಿ. ಕೋರಿ, ಶೇಖಪ್ಪ ಹುಡೇದ ಮತ್ತಿತರರಿದ್ದರು.

# ಗ್ರಾ.ಪಂ ದುರಾಡಳಿತ ಖಂಡಿಸಿ ಅ.13 ರಂದು ಪ್ರತಿಭಟನೆ




**ಹುಕ್ಕೇರಿ:** ತಾಲೂಕಿನ ಕಣಗಲಾ ಗ್ರಾಮ ಪಂಚಾಯತಿಯ ಅವ್ಯವಹಾರ ಹಾಗೂ ದುರಾಡಳಿತ ಹಿನ್ನಲೆಯಲ್ಲಿ ಅಕ್ಟೋಬರ 13 ರಂದು ಗ್ರಾಮ ಪಂಚಾಯತಿ ಕಾರ್ಯಾಲಯಕ್ಕೆ ಬೀಗ ಹಾಕಿ ಪ್ರತಿಭಟಣೆ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕಾ ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಗುರುವಾರ ಗ್ರಾಮಸ್ಥರು ಮನವಿ ಅರ್ಪಿಸಿದರು.

ಕಣಗಲಾ ಗ್ರಾಮ ಪಂಚಾಯತಿಯಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯದೆ ಕೇವಲ ಅವ್ಯವಹಾರ ನಡೆದಿದೆ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸದೆ ನಿರ್ಲಕ್ಷ ಮಾಡುತ್ತಿರುವ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವಿರುದ್ದ ತನಿಕೆ ಮಾಡಿ ಗ್ರಾಮದ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ಗ್ರಾಮ ಪಂಚಾಯತಿಯಲ್ಲಿ ಕಳೆದ 2015 ರಿಂದ 2024 ನಡೆದ ವಿವಿಧ ಯೋಜನೆಯಡಿ ಕಾಮಗಾರಿಗಳ ಅನುದಾನ ಬಳಕೆ, ವಸತಿ ಯೋಜನೆ, ಹಣಕಾಸು ಯೋಜನೆ, ಕುಡಿಯುವ ನೀರು ರಸ್ತೆ, ಚರಂಡಿ ಬೀದಿ ದೀಪಗಳ ಹಾಗೂ ಇಂಗು ಗುಂಡಿಗಳ ಅವ್ಯವಹಾರದ ತನಿಕೆಯಾಗಬೇಕು, ಕಣಗಲಾ ವ್ಯಾಪ್ತಿಯಲ್ಲಿ ಬರುವ ಉದ್ಯೋಗ ಕಾರ್ಖಾನೆಗಳಿಂದ ಕಂದಾಯ ವಸೂಲಾತಿಬಗ್ಗೆ ಗ್ರಾಮಸ್ಥರಿಗೆ ಸಮಗ್ರ ಮಾಹಿತಿ ನೀಡಬೇಕು. ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ದಯಾನಂದ ನಾಯಿಕ ಅವರು ಸಾರ್ವಜನಿಕರೊಂದಿಗೆ ಸರಿಯಾಗಿ ಸ್ಪಂದಿಸದೆ, ಪರಿಶಿಷ್ಟ ಜಾತಿ ಬುಡಕಟ್ಟು ಉಪಯೋಜನೆಗಳ ದುರುಪಯೋಗ ಮಾಡಿಕೊಂಡಿರುವ ಹಿನ್ನಲೆಯಲ್ಲಿ ಬಗ್ಗೆ ತನಿಕೆಯಾಗಿ ಕ್ರಮ ಕೈಗೊಳ್ಳಬೇಕು ಎಂದು ಅಗ್ರಹಿಸಿದರು. ಮೇಲಾಧಿಕಾರಿಗಳು ಈ ಬಗ್ಗೆ ತನಿಕೆ ನಡೆಸಿ ಹಲವು ಸಮಸ್ಯೆಗಳಿಗೆ ನೇರವಾಗಿ ಪರಿಹಾರ ನೀಡಬೇಕು ಕಾರಣ 13 ರಿಂದ ಉಗ್ರ ಹೋರಾಟ ಮಾಡಲಾಗುವದು ಎಚ್ಚರಿಸಿದ್ದಾರೆ.

ಈ ಸಂಧರ್ಭದಲ್ಲಿ ಗ್ರಾ.ಪಂಚಾಯತಿ ಸದಸ್ಯರಾದ ಆಕಾಶ ಕೇರಿಮನಿ, ನೇತಾಜಿ ಮಿಲ್ಕಿ, ಮುಖಂಡರಾದ ಮಹಾಂತೇಶ ಕಾಡೆ, ನೇಮಿನಾಥ ನಾಯಿಕ, ಕೇದಾರಿ ಮುತ್ನಾಳೆ, ಶ್ರೀಕಾಂತ ಪಾಟೀಲ, ಮಹೇಶ ಮಗದುಮ್ಮ, ಉತ್ತಮ ವಾಳಕೆ, ಕಿಸೋರ ವಾಜರೆ, ,ಬಾಳು ಗಾಡಿವಡ್ಡರ, ಪಾಂಡುರಂಗ ಪಾಟೀಲ, ಚೇತನ ಕೋರೆ, ನಿಲೇಶ ಹವಲ್ದಾರ, ದತ್ತಾ ನಾಯಿಕ, ಉತ್ತಮ, ಪಾಟೀಲ, ರಾಮಾ ಮಾನೆ ಅಣ್ಣಾ ಖಾಡೆ, ಮತ್ತಿತ್ತರರು ಉಪಸ್ಥಿತರಿದ್ದರು.

# ಜನಪದ ಕಲಾ ತಂಡಗಳಿಂದ ಅರ್ಜಿ ಆಹ್ವಾನ

**ಧಾರವಾಡ:** 2025–26 ನೇ ಸಾಲಿನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಯೋಜನೆ ಹಾಗೂ ಸೇವೆಗಳನ್ನು ಗ್ರಾಮೀಣ ಮಟ್ಟದಲ್ಲಿ ಸಾರ್ವಜನಿಕರಿಗೆ ತಲುಪಿಸಲು ಜಾನಪದ ಕಲಾ ತಂಡಗಳು ಮುಂದಿನ ದಿನಗಳಲ್ಲಿ ಕಾರ್ಯಕ್ರಮ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಕಲಾ ತಂಡಗಳು ಅಕ್ಟೋಬರ್ 18, 2025 ರೊಳಗಾಗಿ ಜಿಲ್ಲಾ ಆರೋಗ್ಯ ಮತ್ತು ಕಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ, ಐಇಸಿ ವಿಭಾಗಕ್ಕೆ ಅರ್ಜಿ ಸಲ್ಲಿಸಬೇಕು. ಜಾನಪದ ಕಲಾತಂಡಗಳು ಧಾರವಾಡ ಜಿಲ್ಲೆ ವ್ಯಾಪ್ತಿಯಲ್ಲಿದ್ದು, ಕೇಂದ್ರ ಸಂಗೀತ ಮತ್ತು ನಾಟಕ ವಿಭಾಗ, ಮಾಹಿತಿ ಮತ್ತು ಪ್ರಸಾರ ಮಂತ್ರಾಲಯ ಭಾರತ ಸರಕಾರ ಬೆಂಗಳೂರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತ ಇಲಾಖೆ ಇವುಗಳಲ್ಲಿ ಯಾವುದಾದರು ಒಂದು ಇಲಾಖೆಯಲ್ಲಿ ನೋಂದಣಿಯಾಗಿರುವ ಕಲಾ ತಂಡಗಳನ್ನು ಮಾತ್ರ ಪರಿಗಣಿಸಲಾಗುವುದು.

ಆಯ್ಕೆಯಾದ ತಂಡಗಳನ್ನು ಜಿಲ್ಲೆಯಾದ್ಯಂತ ತಮ್ಮ ಕಲಾ ಪ್ರಕಾರಗಳಲ್ಲಿ ಕಾರ್ಯಕ್ರಮಗಳನ್ನು ನೀಡಲು ಸಿದ್ಧರಿರಬೇಕು ಆಸಕ್ತ ಕಲಾ ತಂಡಗಳು ತಮ್ಮ ತಂಡದ ಕಲಾ ಪ್ರಕಾರ ಹಾಗೂ ಕೇಂದ್ರ ಸಂಗೀತ ಮತ್ತು ನಾಟಕ ವಿಭಾಗ, ಕನ್ನಡ ಮತ್ತು ಸಂಸ್ಕೃತ ಇಲಾಖೆಯಲ್ಲಿ ನೋಂದಣಿಯಾದ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು.ಅವಧಿಮೀರಿ ಬಂದ ಅರ್ಜಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಆರೋಗ್ಯ ಶಿಕ್ಷಣ ಕೊಶಕ್ಕೆ ಸಂಪರ್ಕಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಮ್.ಹೊನಕೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಸರ ಜಾಗೃತಿ ಕಾರ್ಯಕ್ರಮ




**ಕಾರವಾರ:** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಸ್ಥಾಪನೆಯಾಗಿ ಯಶಸ್ವಿಯಾಗಿ 50 ವರ್ಷಗಳನ್ನು ಪೂರೈಸಿರುವ ಹಿನ್ನೆಲೆಯಲ್ಲಿ ಮಂಡಳಿಯ ಸುವರ್ಣ ಮಹೋತ್ಸವ ಆಚರಣೆಯ ಪ್ರಯುಕ್ತ, ಜಿಲ್ಲಾಡಳಿತ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಚೇರಿ, ಕಾರವಾರ ಹಾಗೂ ಮೆ. ವೆಸ್ಟ್ ಕೋಸ್ಟ್ ಪೇಪರ್ ಮಿಲ್ಸ್ ಲಿಮಿಟೆಡ್ ಇವರ ಸಹಯೋಗದೊಂದಿಗೆ ಏಕ ಬಳಕೆಯ ಪ್ಲಾಸ್ಟಿಕ್ ನಿಷೇಧದ ಹಾಗೂ ಪರ್ಯಾಯ ಮಾರ್ಗಗಳ ಕುರಿತಾಗಿ ಮೆ. ವೆಸ್ಟ್ ಕೋಸ್ಟ್ ಪೇಪರ್ ಮಿಲ್ಸ್ ಲಿಮಿಟೆಡ್‌ನಲ್ಲಿ ಪರಿಸರ ಜಾಗೃತಿ ಕಾರ್ಯಕ್ರಮವು ಗುರುವಾರ ನಡೆಯಿತು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಬಿ.ಕೆ. ಸಂತೋಷ್ ಕಂಪನಿಯ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳ ಬಳಕೆಯಿಂದ ಪರಿಸರದ ಮೇಲೆ ಆಗುವ ದುಷ್ಪರಿಣಾಮಗಳು ಹಾಗೂ ಪ್ಲಾಸ್ಟಿಕ್ ತ್ಯಾಜ್ಯಗಳ ನಿರ್ವಹಣೆ ವಿಲೇವಾರಿ ಬಗ್ಗೆ ವಿವರಿಸಿದರು.

ನಿಷೇಧಿತ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳನ್ನು (ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್, ಪ್ಲಾಸ್ಟಿಕ್ ಭಿತ್ತಿಪತ್ರ, ಪ್ಲಾಸ್ಟಿಕ್ ತೋರಣ, ಫ್ಲೆಕ್ಸ್, ಬಾವುಟ, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ, ಸ್ಟ್ರಾಗಳು, ಕ್ಲಿಂಗ್ ಫಿಲ್ಮ್ ರಸ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆ ಹಾಗೂ ಥರ್ಮೊಕಾಲ್ ಮತ್ತು ಪ್ಲಾಸ್ಟಿಕ್ ಮೈಕ್ರೋ ಬೀಡ್ಸನಿಂದ ತಯಾರಾದಂತಹ ವಸ್ತುಗಳು) ಉಪಯೋಗಿಸದಂತೆ ಜಾಗೃತಿ ಮೂಡಿಸಿ, ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳ ಉಪಯೋಗವನ್ನು ಸಂಪೂರ್ಣವಾಗಿ ನಿಷೇಧಿ ಬದಲಾಗಿ ಅಡಿಕೆ ಎಲೆ / ಕಟ್ಟಿಗೆ / ಗಾಜು / ಪೇಪರ್ / ಸ್ಟೀಲ್‌ನಿಂದ ತಯಾರಿಸಿದ ವಸ್ತುಗಳನ್ನು ಬಳಸುವಂತೆ ಮತ್ತು ಕೇವಲ ಬಟ್ಟೆ ಚೀಲಗಳನ್ನು ಬಳಸುವಂತೆ ಹಾಗೂ ಪ್ಲಾಸ್ಟಿಕ್ ಚೀಲಗಳನ್ನು ಬಳಸಿದಲ್ಲಿ ದಂಡವನ್ನು ವಿಧಿಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಂಪನಿಯ ಅಧಿಕಾರಿ ರಾಜೇಂದ್ರ ಜೈನ, ಎಕ್ಸಿಕ್ಯೂಟಿವ್ ಡೈರೆಕ್ಟರ್ ಅನುಜ ಕುಮಾರ, ತಯಾಳ್, ಪ್ರೆಸಿಡೆಂಟ್ (ಖಿಜಖಿ) ವೇಲು ವೆಂಕಟೇಶ, ವೈಸ್ ಪ್ರೆಸಿಡೆಂಟ್, ರಾಘವೇಂದ್ರ ಜೆ., ಡಿಜಿಎಮ್. ಸಾರ್ವಜನಿಕ ಸಂಪರ್ಕ ಅಧಿಕಾರಿ ರಮೇಶ ಎನ್, ಹಿರಿಯ ಮ್ಯಾನೇಜರ್ ಹಾಗೂ ಎಲ್ಲಾ ವಿಭಾಗದ ಮುಖ್ಯಸ್ಥರು ಹಾಜರಿದ್ದರು.

# ನರೇಗಾದ ಜಾಬ್ ಕಾರ್ಡಗಳಿಗೆ ಇ-ಕೆವೈಸಿ ಕಡ್ಡಾಯ



**ವಿಜಯಪುರ:** ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ನೋಂದಾಯಿತ ಕುಟುಂಬಗಳ ಜಾಬ್ ಕಾರ್ಡ್ ಮಾನ್ಯತಾ ಅವಧಿಯ ಇ-ಕೆವೈಸಿ ಮುಖಾಂತರ ಪೂರ್ಣಗೊಳಿಸಲಾಗುತ್ತಿದ್ದು, ಎಲ್ಲ ನರೇಗಾ ಕೂಲಿಕಾರ್ಮಿಕರು ಈ ಅಭಿಯಾನದಲ್ಲಿ ಪಾಲ್ಗೊಂಡು ಕಡ್ಡಾಯವಾಗಿ ಇ–ಕೆವೈಸಿ ಪೂರ್ಣಗೊಳಿಸಲು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಮನವಿ ಮಾಡಿದ್ದಾರೆ.

ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಆದೇಶ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳ ಸೂಚನೆಯಂತೆ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಸಕ್ರಿಯ ಕೂಲಿಕಾರರ ಜಾಬ್ ಕಾರ್ಡನ್ನು ಇ–ಕೆವೈಸಿ ಮುಖಾಂತರ ಮೌಲ್ಯೀಕರಿಸಲಾಗುತ್ತಿದ್ದು, ನರೇಗಾ ಯೋಜನೆಯಡಿ ಎಲ್ಲಾ ಗ್ರಾಮಪಂಚಾಯತಿಗಳ ಸಕ್ರಿಯ ಕುಟುಂಬಗಳ ಜಾಬ್ ಕಾರ್ಡ್ ಮಾನ್ಯತಾ ಅಭಿಯಾನದ ಮಾದರಿಯಲ್ಲಿ ಅತೀ ತುರ್ತಾಗಿ ಇ–ಕೆವೈಸಿ ಮುಖಾಂತರ ಪೂರ್ಣಗೊಳಿಸಲು ಅಗತ್ಯ ತರಬೇತಿಯನ್ನು ಸಿಬ್ಬಂದಿಗಳಿಗೆ ನೀಡಲಾಗಿದೆ. ಎಲ್ಲಾ ಸಿಬ್ಬಂದಿಗಳು ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಇ–ಕೆವೈಸಿ ಪ್ರಕ್ರಿಯೆಗೆ ಅಣಿಯಾಗಿದ್ದಾರೆ. ಇ–ಕೆವೈಸಿ ಪ್ರಕ್ರಿಯೆ ಕೂಲಿಕಾರ್ಮಿಕರು ಪಾಲ್ಗೊಳ್ಳಬೇಕು ಮುಂದಿನ ದಿನಗಳಲ್ಲಿ ಇ–ಕೆವೈಸಿ ಮಾಡಿಕೊಳ್ಳದ ಜಾಬ್–ಕಾರ್ಡ್ಗಳು ನಿಷ್ಕ್ರೀಯವಾಗುತ್ತವೆ.

ನರೇಗಾ ಯೋಜನೆಯಡಿ ನೋಂದಾಯಿತ ಕೂಲಿಕಾರ್ಮಿಕರ ಸಕ್ರಿಯ ಮಾಹಿತಿಯನ್ನು ಎಸ್‌ಎಂಎಸ್ ಮೊಬೈಲ್ ತಂತ್ರಾಂಶದಲ್ಲಿ ಇ–ಕೆವೈಸಿ ಮಾಡುವ ಬಗ್ಗೆ ಈಗಾಗಲೇ ಎಲ್ಲ ಗ್ರಾಮ ಪಂಚಾಯಿತಿ, ಗ್ರಾಮ ಮಟ್ಟದಲ್ಲಿ ಜನರಿಗೆ ಅರಿವು ಮೂಡಿಸಲಾಗುತ್ತಿದೆ. ಈ ಅಭಿಯಾನದ ಕುರಿತು ಧ್ವನಿ ಮುದ್ರಿಕೆಯನ್ನು ಗ್ರಾಪಂನ ಕಸ ಸಂಗ್ರಹಿಸುವ ವಾಹನಗಳ ಮೂಲಕ ಪ್ರಸಾರ ಮಾಡಲಾಗುತ್ತಿದೆ. ಎಸ್‌ಎಂಎಸ್ ಇ–ಕೆವೈಸಿ ಕಾಲೋಚಿತಗೊಳಿಸಿಕೊಳ್ಳಲು ಗ್ರಾಪಂ ಮಟ್ಟದ ಸಿಬ್ಬಂದಿಗೆ ತರಬೇತಿ ನೀಡಲಾಗಿದೆ. ಆದರೆ, ಕೆಲ ಗ್ರಾಮದಲ್ಲಿ ನರೇಗಾ ಕೂಲಿಕಾರರು ವೈಯಕ್ತಿಕ ಕೆಲಸಕ್ಕಾಗಿ ಮನೆಯಲ್ಲಿ ಇರದೇ ಬೇರೆಡೆ ಹೋದಾಗ ಮನೆ–ಮನೆ ಭೇಟಿ ನೀಡಿದ ಸಂದರ್ಭದಲ್ಲಿ ನರೇಗಾ ಸಿಬ್ಬಂದಿಗೆ ಅಲಭ್ಯವಾದಾಗ ಇ–ಕೆವೈಸಿ ಪ್ರಕ್ರಿಯೆ ನಿಧಾನಗತಿಯಲ್ಲಿ ಸಾಗುತ್ತಿದೆ.

ಮುಂದಿನ ದಿನಗಳಲ್ಲಿ ನರೇಗಾ ಕೂಲಿಕಾರರಿಗೆ ಕೆಲಸ ನೀಡುವ ಸಂದರ್ಭದಲ್ಲಿ ಸಮಸ್ಯೆಯಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಎಲ್ಲ ನರೇಗಾ ಕೂಲಿಕಾರರ ಆದಷ್ಟು ಬೇಗ ಕಡ್ಡಾಯವಾಗಿ ಇ–ಕೆವೈಸಿ ಮಾಡಿಕೊಳ್ಳಬೇಕು.ನರೇಗಾ ಯೋಜನೆಯ ಪಾರದರ್ಶಕ ಅನುಷ್ಠಾನಕ್ಕೆ ಮತ್ತೊಂದು ಹೆಜ್ಜೆ ಇ–ಕೆವೈಸಿ ಆಗಿದ್ದು, ನರೇಗಾ ಕೂಲಿಕಾರರು, ಕಾಯಕ ಬಂಧುಗಳು ಇ–ಕೆವೈಸಿ ಅಪ್ಡೇಟ್ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ.

ನಮ್ಮ ಜಿಲ್ಲೆಯಲ್ಲಿ 2,22,756 ಜನ ಸಕ್ರಿಯ ಕೂಲಿಕಾರ್ಮಿಕರಿದ್ದು, ಎಲ್ಲರೂ ಸಹ ಇ–ಕೆವೈಸಿ ಅಪ್ಡೇಟ್ ಮಾಡಿಕೊಳ್ಳಲು ತಿಳಿಸಿ, ಹೆಚ್ಚಿನ ಮಾಹಿತಿಗಾಗಿ ಆಯಾ ಗ್ರಾಮ ಪಂಚಾಯತಿ ಪಿಡಿಓ, ಕಾರ್ಯದರ್ಶಿ, ಡಿಇಒ, ಬಿಎಫ್ಟಿ, ಜಿಕೆಎಂ ಸೇರಿದಂತೆ ನರೇಗಾ ಸಿಬ್ಬಂದಿಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ಅವರು ತಿಳಿಸಿದ್ದಾರೆ.

### ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೂಚನೆ

# ಬೀದಿನಾಯಿಗಳಿಗೆ ಸಂತಾನಹರಣ ಚಿಕಿತ್ಸೆ ನೀಡಿ



**ಕಾರವಾರ:** ಬೀದಿನಾಯಿಗಳ ಹಾವಳಿಯನ್ನು ನಿಯಂತ್ರಿಸುವ ಉದ್ದೇಶದಿಂದ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಮತ್ತು ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿನ ಬೀದಿನಾಯಿಗಳಿಗೆ ಸಂತಾನಹರಣ ಚಿಕಿತ್ಸೆ ಮಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾ ಪಂಚಾಯತ್, ನಗರಾಭಿವೃದ್ಧಿ ಕೋಶ ಮತ್ತು ಪಶುಪಾಲನಾ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ಸೂಚಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಪಶುಪಾಲನಾ ಇಲಾಖೆಯ ವಿವಿಧ ಕಾರ್ಯಕ್ರಮಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈಗಾಗಲೇ ಮಿಷನ್ ರೇಬಿಸ್ ಕಾರ್ಯಕ್ರಮದಡಿಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬೀದಿ ನಾಯಿಗಳಿಗೆ ಸಂತಾನ ಹರಣ ಚಿಕಿತ್ಸೆಯನ್ನು ಕೈಗೊಂಡಿದ್ದು, ಶಿರಸಿಯಲ್ಲಿ 1580 ಬೀದಿನಾಯಿಗಳಿಗೆ ಸಂತಾನಹರಣ ಚಿಕಿತ್ಸೆ ಮಾಡಲಾಗಿದ್ದು, ಕಾರವಾರದಲ್ಲಿಯೂ ಈ ಕಾರ್ಯ ಪ್ರಗತಿಯಲ್ಲಿದೆ. ಇದೇ ರೀತಿಯಲ್ಲಿ ಜಿಲ್ಲೆಯ ಉಳಿದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಈ ಕಾರ್ಯಕ್ರಮವನ್ನು ಶೇ.100 ರಷ್ಟು ಅನುಷ್ಠಾನಗೊಳಿಸಬೇಕು ಎಂದ ಜಿಲ್ಲಾಧಿಕಾರಿಗಳು, ಗ್ರಾಮ ಪಂಚಾಯತ್ ಮಟ್ಟದಲ್ಲಿಯೂ ಸಹ ಈ ಕಾರ್ಯಕ್ರಮವನ್ನು ಆಯೋಜಿಸುವಂತೆ ಜಿಲ್ಲಾ ಪಂಚಾಯತ್ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಬೀದಿನಾಯಿಗಳ ಕಡಿತಕ್ಕೆ ಸೂಕ್ತ ಚಿಕಿತ್ಸೆ ನೀಡಲು ಔಷಧಗಳ ಕೊರತೆಯಾಗದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದ ಜಿಲ್ಲಾಧಿಕಾರಿಗಳು, ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಅಗತ್ಯ ಪ್ರಮಾಣದ ಔಷಧ ದಾಸ್ತಾನು ಇರುವಂತೆ ನೋಡಿಕೊಳ್ಳಬೇಕು ಎಂದರು.

ಪಶು ಸಂಜೀವಿನಿ ಆಂಬುಲೈನ್ಸ್ ಗಳ ಮೂಲಕ ಪಶುಗಳಿಗೆ ತ್ವರಿತವಾಗಿ ಅಗತ್ಯವಿರುವ ಚಿಕಿತ್ಸೆ ನೀಡುವಂತೆ ಸೂಚಿಸಿದ ಅವರು, ಪಶು ಸಂಜೀವಿನಿ ಆಂಬುಲೈನ್ಸ್ ನ ಉಚಿತ ದೂರವಾಣಿ ಸಂಖ್ಯೆ 1962 ಗೆ ರೈತರು ಮತ್ತು ಜಾನುವಾರು ಮಾಲೀಕರು ಕರೆ ಮಾಡಿದಾಗ ಕೆಲವೊಮ್ಮೆ ಕಾಲ್ ಡ್ರಾಪ್ ಆಗುತ್ತಿರುವ ಕುರಿತು ದೂರುತಿದ್ದು, ಕರೆ ಮಾಡುವ ಸಂದರ್ಭದಲ್ಲಿ ಯಾವುದೇ ರೀತಿಯ ತಾಂತ್ರಿಕ ಸಮಸ್ಯೆಗಳು ಕಂಡುಬರದಂತೆ ಮತ್ತು ಕರೆಯಿಂದ ಸ್ವೀಕರಿಸುವ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ, ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡುವ ಬಗ್ಗೆ ಸೇವಾ ಪೂರೈಕೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡುವಂತೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಏಪ್ರಿಲ್ ನಿಂದ ಸೆಪ್ಟಂಬರ್ ವರೆಗೆ ಪಶು ಸಂಜೀವಿನಿ ಆಂಬುಲೈನ್ಸ್ ಗಳ ಮೂಲಕ ಸ್ವೀಕರಿಸಿರುವ 7493 ಕರೆಗಳಿಗೆ ಸ್ಪಂದಿಸಿ, ಪಶುಗಳಿಗೆ ಚಿಕಿತ್ಸೆ ನೀಡಲಾಗಿದ್ದು, ಆಂಬುಲೈನ್ಸ್ ಸೇವೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳುವಂತೆ ಜಿಲ್ಲೆಯಲ್ಲಿ ಆಂಬುಲೈನ್ಸ್ ಸೇವೆ ನೀಡುತ್ತಿರುವ ಸಂಸ್ಥೆಯ ಸಂಯೋಜಕರಿಗೆ ಸೂಚನೆ ನೀಡಲಾಗುವುದು ಎಂದು ಪಶುಪಾಲನಾ ಇಲಾಖೆ ಉಪ ನಿರ್ದೇಶಕ ಡಾ.ಮೋಹನ್ ಕುಮಾರ್ ತಿಳಿಸಿದರು.

ಕಾಲುಬಾಯಿ ಜ್ವರದ ವಿರುದ್ಧದ ಲಸಿಕಾ ಕಾರ್ಯಕ್ರಮವನ್ನು ಜಿಲ್ಲೆಯಾದ್ಯಂತ ಏಕಕಾಲದಲ್ಲಿ ಹಮ್ಮಿಕೊಳ್ಳುವಂತೆ ಮತ್ತು ಇದೇ ಅವಧಿಯಲ್ಲಿ ಚರ್ಮಗಂಟು ರೋಗದ ವಿರುದ್ಧ ಲಸಿಕೆಯನ್ನು ಕೂಡಾ ಒಟ್ಟಿಗೆ ನೀಡುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಜಿಲ್ಲೆಯಲ್ಲಿ ಈಗಾಗಲೇ ನಿರ್ಮಾಣವಾಗಿರುವ ಗೋಶಾಲೆಗಳ ನಿರ್ವಹಣೆ ಮತ್ತು ಬೀಡಾಡಿ ದನಗಳ ನಿಯಂತ್ರಣ ಕುರಿತಂತೆ ಸಭೆಯಲ್ಲಿ ಚರ್ಚೆ ನಡೆಯಿತು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಕೃಷ್ಣಮೂರ್ತಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪ್ರಕಾಶ್ ಹಾಲಮ್ಮನವರ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಜಹೀರ್ ಅಬ್ಬಾಸ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನೀರಜ್, ಪೌರಾಯುಕ್ತ ಜಗದೀಶ್ ಹುಲಗೆಜ್ಜಿ ಹಾಗೂ ಪಶುಪಾಲನಾ ಇಲಾಖೆಯ ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಹಾಜರಿದ್ದರು.

# ಅಂಚೆ ಸೇವೆ ಜನರ ಜೀವನದ ಅವಿಭಾಜ್ಯ ಅಂಗ




**ಇಂಡಿ:** ಇಂಟರ್ನೆಟ್ – ದೂರಸಂಪರ್ಕದ ಆವಿಷ್ಕಾರಕ್ಕಿಂತ ಮುಂಚೆ, ಜನರ ಸಂವಹನಕ್ಕಾಗಿ ಅಂಚೆ ಸೇವೆ ಮುಖ್ಯವಾಗಿತ್ತು. ಶತಮಾನಗಳಿಂದ ದಕ್ಷ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಚೆ ವ್ಯವಸ್ಥೆಯು ಪ್ರಪಂಚದಾದ್ಯಂತ ಮಾಹಿತಿಯನ್ನು ರವಾನಿಸುವ ಅತ್ಯಂತ ವಿಶ್ವಾಸಾರ್ಹ ಸಾಧನವಾಗಿದೆ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಗುರುವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಅರಿವು ಕೇಂದ್ರದಲ್ಲಿ ಹಮ್ಮಿಕೊಂಡ 'ವಿಶ್ವ ಅಂಚೆ ದಿನ'ವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜನರ ಜೀವನದ ಅವಿಭಾಜ್ಯ ಅಂಗವಾಗಿದ್ದ ಅಂಚೆ ಇಲಾಖೆ ಈಗ ತನ್ನ ಅಸ್ತಿತ್ವವನ್ನು ಉಳಿಸಿಕೊಳ್ಳುತ್ತಾ, ಹಣದ ವರ್ಗಾವಣೆ, ವಿಮಾ, ಉಳಿತಾಯ ಯೋಜನೆಗಳ ಮೂಲಕ ಜನರ ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಮೂಲಕ ಗ್ರಾಮೀಣರ ಬದುಕಿಗೆ ಆಸರೆಯಾಗಿದೆ ಎಂದು ಹೇಳಿದರು.

ಶಿಕ್ಷಕ ರವಿ ಗಿಣ್ಣಿ ಮಾತನಾಡಿ, ಜನರ ದೈನಂದಿನ ಜೀವನದಲ್ಲಿ ಅಂಚೆ ಸೇವೆಗಳ ಪಾತ್ರದ ಬಗ್ಗೆ ಜಾಗೃತಿ ಮೂಡಿಸಲು, ಜಾಗತಿಕ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಅಂಚೆಗಳ ಕೊಡುಗೆಯನ್ನು ಗುರ್ತಿಸಲು ಪ್ರತಿವರ್ಷ ಅಕ್ಟೋಬರ್ 9 ರಂದು ವಿಶ್ವ ಅಂಚೆ ದಿನವನ್ನು ಆಚರಿಸಲಾಗುತ್ತಿದೆ ಎಂದು ಹೇಳಿದರು.

ಶಾಖಾ ಅಂಚೆಪಾಲಕ ಸೋಮನಗೌಡ ಬಿರಾದಾರ ಅಧ್ಯಕ್ಷತೆ ವಹಿಸಿ ಮಾತನಾಡಿ, ಇಂದು ಅಂಚೆ ಕಚೇರಿಗಳು ಬರೀ ಪತ್ರ ವ್ಯವಹಾರ, ತಂತಿ ಸಂದೇಶಗಳಿಗಷ್ಟೇ ಮೀಸಲಾಗದೇ ಜನತೆಗೆ ಒಂದೇ ಸೂರಿನಡಿ ಎಲ್ಲ ಬ್ಯಾಂಕಿಂಗ್ ಸೌಲಭ್ಯ ಕಲ್ಪಿಸುವ ಕಚೇರಿಗಳಾಗುತ್ತಿವೆ. ಎಲ್ಲರೂ ಅಂಚೆಸೇವೆಗಳ ಸದುಪಯೋಗ ಮಾಡಿಕೊಳ್ಳಬೇಕು ಎಂದು ಹೇಳಿದರು. ಯುವ ಧುರೀಣ ಪರಶುರಾಮ ಹೊಸಮನಿ ಜ್ಯೋತಿ ಬೆಳಗಿಸಿದರು. ಗ್ರಾಮದ ಶ್ರೀಶೈಲ ಗುನ್ನಾಪುರ, ಶಿಕ್ಷಕ ಎಸ್ ಆರ್ ಚಾಳೇಕರ, ಶಾಂತಪ್ಪ ಕಪ್ಪಿ, ಅಕ್ಬರ ಕೋರಬು, ಮಲ್ಲಮ್ಮ ಚವ್ಹಾಣ, ಸಂಗೀತಾ ಮಠಪತಿ, ಗ್ರಂಥಪಾಲಕ ಸಚೀನ ಹೊಸೂರು, ನಿಂಗಪ್ಪ ಡಂಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಶಾಖಾ ಅಂಚೆ ಪಾಲಕ ಸೋಮನಗೌಡ ಬಿರಾದಾರ, ಶಾಖಾ ಅಂಚೆ ಉಪಪಾಲಕ ಯಶವಂತ ಬಿರಾದಾರ ಅವರನ್ನು ಸನ್ಮಾನಿಸಲಾಯಿತು.

# ಅರ್ಜಿ ಆಹ್ವಾನ

**ವಿಜಯಪುರ:** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ನೇರ ಸಾಲ ಮಂಜೂರು ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದ್ದು, ksbdb.karnataka.gov.in ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹಸು ಸಾಕಾಣಿಕೆ, ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೊಟೆಲ್ ಉದ್ಯಮ, ಟ್ಯಾಕ್ಸಿ ಕೈಗೊಳ್ಳಲು 1 ಲಕ್ಷ ರೂ ಗಳಿಂದ 2 ಲಕ್ಷ ರೂ. ವರೆಗೂ ಸಾಲ ಸೌಲಭ್ಯ ಒದಗಿಸಲಾಗುವುದು.ಒಂದು ಕುಟುಂಬದಿಂದ ಒಬ್ಬರಿಗೆ ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಮಹಿಳೆಯರಿಗೆ ಶೇ.33ರಷ್ಟು ಹಾಗೂ ವಿಶೇಷಚೇತನರಿಗೆ ಶೇ 5ರಷ್ಟು ಮೀಸಲಾತಿ ನೀಡಲಾಗುವುದು. ಅರ್ಜಿದಾರರ ಆಧಾರ್ ಗೆ ಮೊಬೈಲ್ ಸಂಖ್ಯೆ ಲಿಂಕ್ ಆಗಿರಬೇಕು ಹಾಗೂ ಬ್ಯಾಂಕ್ ಖಾತೆ ಸೀಡ್ ಆಗಿರಬೇಕು. ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ 8762249230 ಸಹಾಯವಾಣಿ ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಅಧಿಕಾರಿಗಳು ತಿಳಿಸಿದ್ದಾರೆ.

